ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 139
12-11-2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 139

## ಶಾಂತಿ ನೆಲೆಸಬೇಕಾದರೆ ಮದರಸಾಗಳನ್ನು ಮುಚ್ಚಿ: ಕೇಂದ್ರ ಸರ್ಕಾರಕ್ಕೆ ಯತ್ನಾಳ್ ಒತ್ತಾಯ

**ಬೆಂಗಳೂರು :** ದೆಹಲಿಯಲ್ಲಿ 12 ಮಂದಿಯ ಸಾವಿಗೆ



ಕಾರಣವಾದ ಬಾಂಬ್ ಸ್ಫೋಟದ ಬೆನ್ನಲ್ಲೇ ದೇಶದಲ್ಲಿ ಶಾಂತಿ ಸ್ಥಾಪನೆಗೆ ಕೆಲ ಕಠಿಣ ಕ್ರಮಗಳನ್ನು ಅನುಸರಿಸಬೇಕು ಎಂದು ಕೇಂದ್ರ ಸರ್ಕಾರವನ್ನು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಒತ್ತಾಯಿಸಿದ್ದಾರೆ. ಮಕ್ಕಳನ್ನು ತೀವ್ರಗಾಮಿಗಳಾಗಿ ಪರಿವರ್ತಿಸುವ ಎಲ್ಲಾ ಮದರಸಾಗಳನ್ನು ನಿಷೇಧಿಸಬೇಕು, ಭಾರತ ವಿರೋಧಿ ಸಿದ್ಧಾಂತಗಳನ್ನು ಬೋಧಿಸುವ ಮೌಲಾನಾಗಳನ್ನು ನಿರ್ದಯವಾಗಿ ಜೈಲಿಗೆ ಹಾಕಬೇಕು, ಪತ್ರಕರ್ತರು, ರಾಜಕಾರಣಿಗಳು, ಸಾಹಿತಿಗಳು ಸೇರಿದಂತೆ ಭಯೋತ್ಪಾದಕರು ಮತ್ತು ಅವರ ಪರಿಸರ ವ್ಯವಸ್ಥೆಯ ವಿರುದ್ಧ ಮೃದು ನಿಲುವು ಹೊಂದಿರುವವರ ವಿರುದ್ಧ 24ಥ7 ಕಣ್ಗಾವಲಿಡಬೇಕು ಎಂದು ಯತ್ನಾಳ್ ಆಗ್ರಹಿಸಿದ್ದಾರೆ.

# ಓಬವ್ವನ ಶೌರ್ಯ, ತ್ಯಾಗ ಪ್ರತಿಯೊಬ್ಬರಿಗೂ ಸ್ಫೂರ್ತಿ

## ಒನಕೆ ಓಬವ್ವ ಜಯಂತಿಯಲ್ಲಿ ಶಾಸಕ ಕೆ.ಎಸ್.ಬಸವಂತಪ್ಪ ಅಭಿಮತ

**ದಾವಣಗೆರೆ :** ವೀರ ವನಿತೆ ಒನಕೆ ಓಬವ್ವಳ ಧೈರ್ಯ, ಶೌರ್ಯ ಹಾಗೂ ತ್ಯಾಗ ಮನೋಭಾವ ಇಂದಿನ ಮಹಿಳೆಯರಿಗೆ ಸ್ಫೂರ್ತಿ ಎಂದು ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಒನಕೆ ಓಬವ್ವ ಜಯಂತಿ ಕಾರ್ಯಕ್ರಮದಲ್ಲಿ ಒನಕೆ ಓಬವ್ವ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಒನಕೆ ಓಬವ್ವನಡೆದು ಬಂದ ದಾರಿ ಪ್ರತಿಯೊಬ್ಬರಿಗೂ ಸ್ಫೂರ್ತಿ. ಅತ್ಯಂತ ಹಿಂದುಳಿದ ವರ್ಗದ ಮಹಿಳೆಯಾದರೂ ತನ್ನದೇ ಆದ ಸೇವಾ ಮನೋಭಾವ ಬೆಳೆಸಿಕೊಂಡಿದ್ದರು. ಅವರಂತೆ ಪ್ರತಿಯೊಬ್ಬರೂ ಸೇವಾ ಮನೋಭಾವ, ಶೌರ್ಯ, ಧೈರ್ಯ ಮನೋಭಾವ ರೂಢಿಸಿಕೊಳ್ಳಬೇಕು ಎಂದು ತಿಳಿಸಿ ಓಬವ್ವನ ಸಹಾಸ ಪರಿಗಣಿಸಿ ರಾಜ್ಯದಲ್ಲಿ ಒನಕೆ ಓಬವ್ವ ಅಧ್ಯಯನ ಪೀಠ ಸ್ಥಾಪಿಸಲು ಸರ್ಕಾರದ ಗಮನ ಸೆಳೆಯಲಾಗುತ್ತದೆ ಎಂದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರವಾಸ್ವಾಮಿ ಮಾತನಾಡಿ, ದೇಶ ಹಾಗೂ ಸಮಾಜಕ್ಕೆ ಅಗಾದ ನಿಸ್ವಾರ್ಥ ಸೇವೆ ಮಾಡಿದ ರಾಣಿ ಚನ್ನಮ್ಮ, ಒನಕೆ



ಓಬವ್ವ, ಬುದ್ಧ, ಬಸವ ಅಂಬೇಡ್ಕರ್ ಅವರನ್ನು ಸ್ಮರಿಸುತ್ತೇವೆ. ಅಂತೆಯೇ ದುರ್ಗದ ಏಳು ಸುತ್ತಿನ ಕೋಟೆ ಸಣ್ಣ ಪ್ರಾಂತ್ಯವಾಗಿದ್ದರೂ ತನ್ನ ಜೀವದ ಹಂಗು ತೊರೆದು ಸಮಯ ಪ್ರಜ್ಞೆಯಿಂದ ಏಕಾಂ-ಗಿಯಾಗಿ ಹೋರಾಡಿದ ದಿಟ್ಟ ಮಹಿಳೆಯ ಧೈರ್ಯ, ಸಾಹಸ, ಶೌರ್ಯ, ದೇಶ ಭಕ್ತಿಯನ್ನು ಸ್ಮರಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಭವಿಷ್ಯದ ಪೀಳಿಗೆಗೆ ಸಾಮಾಜಿಕ ಪ್ರಜ್ಞೆ, ರಾಷ್ಟ್ರೀಯತೆ, ಸೌಹಾರ್ಧತೆ, ಶೌರ್ಯ ಅದೆಲ್ಲದಕ್ಕಿಂತ ಹೆಚ್ಚಾಗಿ ತ್ಯಾಗದ ಕುರಿತು ತಿಳಿಸಬೇಕಿದೆ. ಭವಿಷ್ಯದ ಪೀಳಿಗೆಯನ್ನು ವಿಘಟಿತರಾಗಿಸದೇ, ಸಂಘಟಿರಾಗಿ ಸುಸಂಸ್ಕೃತ ದಾರಿಯಲ್ಲಿ ಸಾಗಬೇಕಾದರೆ ಇಂತಹ ಮಹನೀಯರ ಕೊಡುಗೆ, ರಾಷ್ಟ್ರಭಕ್ತಿ ಬಗ್ಗೆ ಅರಿವು ಮೂಡಿಸಿದಾಗ ಮಾತ್ರ ಸಮಾಜ ಸರಿದಾರಿಯಲ್ಲಿ ಸಾಗಲು ಸಾಧ್ಯ ಎಂದರು.

ದೂಡಾ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಮಾತನಾಡಿ, ಒಬ್ಬ ಸಾಮಾನ್ಯ ಗೃಹಿಣಿಯಾಗಿ, ಕಾವಲುಗಾರನ ಹೆಂಡತಿಯಾಗಿ ಸಮಯ ಪ್ರಜ್ಞೆಯಿಂದ ಕೋಟೆ ರಕ್ಷಣೆಗೆ ಮುಂದಾಗಿದ್ದು ಅವಿಸ್ಮರಣೀಯ. ಈ ಮೂಲಕ ಅಪಾರ ಮೆಚ್ಚುಗೆ ಗುರಿಯಾದವರು ಒನಕೆ ಓಬವ್ವ. ಇಂತಹ ಮಹನೀಯರ ಸಾಧನೆ, ಸಾಹಸ ಕೇವಲ ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾಗದೇ ಪ್ರತಿಯೊಬ್ಬರೂ ಅವರ ಆಲೋಚನೆಗಳ ಮೈಗೂಡಿಸಿಕೊಳ್ಳಬೇಕು. ಅಲ್ಲದೇ ಪ್ರತಿ ಶಾಲಾ, ಕಾಲೇಜುಗಳಲ್ಲಿ ಜಯಂತಿ ಆಚರಣೆ ಮಾಡುವ ಮುಖೇನ ಅವರ ಸಾಹಸ, ಶೌರ್ಯ ತ್ಯಾಗದ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸುವ ಅಗತ್ಯವಿದೆ ಎಂದರು.

ಸುಮತಿ ಜಯಪ್ಪ ಒನಕೆ ಓಬವ್ವ ಕುರಿತ ಉಪನ್ಯಾಸ ನೀಡಿದರು. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ್, ಪರಿಶಿಷ್ಟ ಪಂಗಡ ಇಲಾಖೆ ಅಧಿಕಾರಿ ನವೀನ್ ಮಠದ್, ಅಬಕಾರಿ ಇಲಾಖೆಯ ಉಪ ಆಯುಕ್ತ ಜುನ್ಯೆದ್, ಛಲವಾದಿ ಸಮುದಾಯದ ಅಧ್ಯಕ್ಷ ರುದ್ರಮುನಿ, ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಕಲಾಲೋಕ ಅನಾವರಣ



**ಬೆಂಗಳೂರು:** ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಎರಡನೇ ಟರ್ಮಿನಲ್ ನಲ್ಲಿ ಕೈಗಾರಿಕೆ ಇಲಾಖೆ ನಿರ್ಮಿಸಿರುವ ರಾಜ್ಯದ ಸಾಂಪ್ರದಾಯಿಕ ಉತ್ಪನ್ನಗಳ ಮಾರಾಟ ಕೇಂದ್ರವಾದ "ಕಲಾ ಲೋಕ ಮಳಿಗೆ"ಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಉದ್ಘಾಟಿಸಿದರು. ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸಚಿವರಾದ ಎಂ.ಬಿ. ಪಾಟೀಲ್, ಕೆಜೆ ಜಾರ್ಜ್, ಕೆ. ಎಚ್. ಮುನಿಯಪ್ಪ, ಶರಣಬಸಪ್ಪ ದರ್ಶನಾಪುರ, ಪ್ರಿಯಾಂಕ್ ಖರ್ಗೆ ಮತ್ತಿತರರು ಉಪಸ್ಥಿತರಿದ್ದರು.

ಬಳಿಕ ಮಾತನಾಡಿದ ಮುಖ್ಯಮಂತ್ರಿ, ಕರ್ನಾಟಕದ ಕೈಗಾರಿಕಾ ಭೂಪಟದಲ್ಲಿ ಇದೊಂದು ಸಂತಸದ ಕ್ಷಣವಾಗಿದೆ. ದೇಶ-ವಿದೇಶಗಳ ಗ್ರಾಹಕರಿಗೆ ಕರ್ನಾಟಕದ ಹೆಮ್ಮೆಯ ಪಾರಂಪರಿಕ ಮತ್ತು ಜಿಐ ಮಾನ್ಯತೆ ಹೊಂದಿರುವ ವಿಶಿಷ್ಟ ಉತ್ಪನ್ನಗಳನ್ನು ತಲುಪಿಸುವ ಉದ್ದೇಶದಿಂದ ಮಳಿಗೆ ಸ್ಥಾಪನೆ ಮಾಡಲಾಗಿದೆ ಎಂದು ತಿಳಿಸಿದರು.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಜನನಿಬಿಡತೆಯಲ್ಲಿ ದೇಶದಲ್ಲೇ ಮೂರನೇ ಸ್ಥಾನದಲ್ಲಿದೆ. ಪ್ರತಿದಿನವೂ ಇಲ್ಲಿ ಹತ್ತಾರು ಸಾವಿರ ಪ್ರಯಾಣಿಕರು ಬರುತ್ತಿರುತ್ತಾರೆ. ಇಂಥವರಿಗೆ ಇಲ್ಲಿಗೆ ಬಂದ ತಕ್ಷಣವೇ ಕರ್ನಾಟಕದ ಅಭಿಮಾನದ ಪಯಣ ಅರ್ಥವಾಗಬೇಕು ಎನ್ನುವ ಉದ್ದೇಶದಿಂದ ಕಲಾಲೋಕ ಮಳಿಗೆ ನಿರ್ಮಿಸಲಾಗಿದೆ. ಇದರ ಮೂಲಕ ಕರ್ನಾಟಕದ ಹೆಮ್ಮೆಯ ಉತ್ಪನ್ನಗಳಿಗೆ ಜಾಗತಿಕ ಮಟ್ಟದಲ್ಲಿ ವ್ಯಾಪಕ ಪ್ರಚಾರ, ಬ್ರ್ಯಾಂಡಿಂಗ್ ಮತ್ತು ಮಾರಾಟದ ಗುರಿಯನ್ನು ಹೊಂದಲಾಗಿದೆ ಎಂದು ಹೇಳಿದರು.

# ಖಾಸಗೀಕರಣ ನೀತಿಯ ವಿರುದ್ಧ ಬ್ಯಾಂಕ್ ನೌಕರರ ಪ್ರತಿಭಟನೆ

## ಖಾಸಗಿ ಬ್ಯಾಂಕುಗಳನ್ನು ರಾಷ್ಟ್ರೀಕರಣಗೊಳಿಸಿ : ರಾಘವೇಂದ್ರ ನಾಯರಿ ಆಗ್ರಹ

**ದಾವಣಗೆರೆ :** ಸಾರ್ವಜನಿಕರ ಹಣಕ್ಕೆ ಭದ್ರತೆಯನ್ನು ನೀಡುವುದಕ್ಕಾಗಿ ಖಾಸಗಿ ಬ್ಯಾಂಕುಗಳನ್ನು ರಾಷ್ಟ್ರೀಕರಣಗೊಳಿಸಬೇಕು, ಅಗತ್ಯ ಪ್ರಮಾಣದ ನೇಮಕಾತಿ ಮಾಡಬೇಕು, ಪೆಡರಲ್ ಬ್ಯಾಂಕಿನ ನೌಕರರ ಶೋಷಣೆಯನ್ನು ನಿಲ್ಲಿಸಬೇಕು, ಕೆಥೋಲಿಕ್ ಸಿರಿಯನ್ ಬ್ಯಾಂಕ್ ನೌಕರರ ವೇತನ ಪರಿಷ್ಕರಣೆ ಮಾಡಬೇಕು, ಖಾಸಗಿ ಬ್ಯಾಂಕುಗಳ ನಿವೃತ್ತ ನೌಕರರಿಗೆ ಸೌಲಭ್ಯಗಳನ್ನು ವಿಸ್ತರಿಸಬೇಕು, ನೈನಿತಾಲ್ ಬ್ಯಾಂಕನ್ನು ಮಾರಾಟ ಮಾಡಬಾರದು, ತಮಿಳುನಾಡು ಮರ್ಕಂಟೈಲ್ ಬ್ಯಾಂಕಿನ ನೌಕರರ ನಿವೃತ್ತಿ ವಯಸ್ಸನ್ನು 60 ಕ್ಕೆ ಹೆಚ್ಚಿಸಬೇಕು, ನೌಕರರಿಗೆ ಉದ್ಯೋಗ ಭದ್ರತೆ ಒದಗಿಸಬೇಕು ಎನ್ನುವ ಹಲವಾರು ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿ ಅಖಿಲ ಭಾರತ ಬ್ಯಾಂಕ್ ನೌಕರರ ಸಂಘದ - ಎಐಬಿಇಎ ಸದಸ್ಯರು ಮಂಗಳವಾರ

ರಾಷ್ಟ್ರವ್ಯಾಪಿ ಪ್ರತಿಭಟನಾ ಮತಪ್ರದರ್ಶನವನ್ನು




ನಡೆಸಿ ಸರಕಾರವನ್ನು ಆಗ್ರಹಿಸಿದರು.

ದಾವಣಗೆರೆ ಜಿಲ್ಲಾ ಕೇಂದ್ರದಲ್ಲಿ ದಾವಣಗೆರೆ ಜಿಲ್ಲಾ ಬ್ಯಾಂಕ್ ನೌಕರರ ಸಂಘದ ನೇತೃತ್ವದಲ್ಲಿ ಬ್ಯಾಂಕ್ ನೌಕರರು ಪಿ.ಪಿ.ರಸ್ತೆಯಲ್ಲಿರುವ ಕರ್ನಾಟಕ ಬ್ಯಾಂಕಿನ ಮುಂಭಾಗ ಪ್ರತಿಭಟನೆ ನಡೆಸಿದರು. ಎಐಬಿಇಎ ಸಂಯೋಜಿತ ಖಾಸಗಿ ಬ್ಯಾಂಕ್ ಉದ್ಯೋಗಿಗಳ ಒಕ್ಕೂಟದ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಅಖಿಲ ಭಾರತ ಬ್ಯಾಂಕ್ ನೌಕರರ ಸಂಘವು ಇಂದು ರಾಷ್ಟ್ರವ್ಯಾಪಿ ಪ್ರತಿಭಟನೆಗೆ ಕರೆ ನೀಡಿತ್ತು.

ಪ್ರತಿಭಟನೆಯಲ್ಲಿ ದಾವಣಗೆರೆ ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ರಾಘವೇಂದ್ರನಾಯರಿ, ಖಜಾಂಚಿ ಕೆ.ವಿಶ್ವನಾಥ ಬಿಲ್ಲವ, ಕಾರ್ಯದರ್ಶಿ ಹೆಚ್.ಎಸ್.ತಿಪ್ಪೇಸ್ವಾಮಿ, ಆರ್.ಆಂಜನೇಯ, ಎಂ.ಡಿ.ವಿದ್ಯಾಸಾಗರ, ಆರ್.ಮಂಜಪ್ಪ, ಹೆಚ್.ಜೆ.ಆಶಾ, ರಾಜೇಶ್, ಕೆ.ಆರ್.ಹರ್ಷ, ಡಿ.ಹರ್ಷದ್, ಎಸ್.ಪ್ರಶಾಂತ್, ಸೈಯದ್ ಚಾಂದಬಾಷಾ, ಎಸ್.ಗಜೇಂದ್ರ, ಎಲ್.ಲತಾ, ಕೆ.ಹೆಚ್.ರೇಖಾ, ಹೆಚ್.ಎಸ್.ಶ್ರೀನಿಧಿ, ಪ್ರಸನ್ನ ಭಟ್, ಎಂ.ಕೆ.ನಾಗರಾಜ್ ಹಾಗೂ ನಿವೃತ್ತ ಬ್ಯಾಂಕ್ ನೌಕರರ ಸಂಘದ ಹೆಚ್.ಸುಗುರಪ್ಪ, ಕೆ.ಎಂ.ಮಹೇಶ್ವರಪ್ಪ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ರಾಜ್ಯದೆಲ್ಲೆಡೆ ಕಟ್ಟೆಚ್ಚರಕ್ಕೆ ಸಿದ್ದರಾಮಯ್ಯ ಸೂಚನೆ

**ಬೆಂಗಳೂರು:** ದೆಹಲಿಯ ಕೆಂಪುಕೋಟೆ ಬಳಿ ಸಂಭವಿಸಿದ ಕಾರ್ ಬಾಂಬ್ ಸ್ಫೋಟವನ್ನು ರಾಜ್ಯ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ರಾಜಧಾನಿ ಬೆಂಗಳೂರು ಸೇರಿದಂತೆ ಎಲ್ಲ ಜಿಲ್ಲಾ ಕೇಂದ್ರಗಳಲ್ಲೂ ತೀವ್ರ ಕಟ್ಟೆಚ್ಚರ ವಹಿಸುವಂತೆ ಪೊಲೀಸ್ ಮಹಾ ನಿರ್ದೇಶಕರಿಗೆ ಸೂಚನೆ ನೀಡಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನನಿಬೀಡ ಸ್ಥಳಗಳಲ್ಲಿ ಭದ್ರತೆಯನ್ನು ಹೆಚ್ಚಿಸಿ ಜನರ ಸುರಕ್ಷತೆಗೆ ಗಮನ ಕೊಡುವಂತೆ ಗೃಹ ಇಲಾಖೆಗೆ ಸೂಚಿಸಲಾಗಿದೆ. ರಾಜ್ಯದಲ್ಲಿ ಯಾವುದೇ ರೀತಿಯ ಅವಘಡಗಳಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಸಾರ್ವಜನಿಕರೂ ಕೂಡಾ ಪೊಲೀಸ್ ಇಲಾಖೆ ಜತೆ ಸಹಕರಿಸಬೇಕು ಎಂದರು.


# ಆಪರೇಷನ್ ಸಿಂದೂರ್‌ಗೆ ಸೇಡು 20 ಟೈಮರ್, 3000 ಕೆಜಿ ಸ್ಫೋಟಕ

## ಉಗ್ರರ ಯೋಜನೆ ಕಾರ್ಯಗತವಾಗಿದ್ದರೇ ಇತಿಹಾಸದ ಅತೀ ದೊಡ್ಡ 'ಭಯೋತ್ಪಾದಕ ದಾಳಿ'

**ನವದೆಹಲಿ:** ದೆಹಲಿಯಲ್ಲಿ 12 ಮಂದಿಯ ಸಾವಿಗೆ ಕಾರಣವಾದ ಸ್ಫೋಟ ಪ್ರಕರಣ-ಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸುತ್ತಿರುವ ತನಿಖಾಧಿಕಾರಿಗಳಿಂದ ಸ್ಫೋಟಕ ಅಂಶಗಳು ಬೆಳಕಿಗೆ ಬರುತ್ತಿವೆ.

ಹೌದು.. ಅತ್ತ ಹರ್ಯಾಣದ ಫರೀದಾಬಾದ್ ನಲ್ಲಿ 3 ಸಾವಿರ ಕೆಜಿ ಸ್ಫೋಟಕ ಪತ್ತೆ ಬೆನ್ನಲ್ಲೇ ಇತ್ತ ರಾಜಧಾನಿ ದೆಹಲಿಯಲ್ಲಿ ಆತ್ಮಹತ್ಯಾ ದಾಳಿ ಸಂಭವಿಸಿದೆ. ಈ ಭೀಕರ ಸ್ಫೋಟದಲ್ಲಿ ಕನಿಷ್ಠ 12 ಮಂದಿ ಸಾವಿಗೀಡಾಗಿ 20ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ. ಈ ಪ್ರಕರಣದಲ್ಲಿ ಪ್ರಮುಖ ವೈದ್ಯಕೀಯ ಶಿಕ್ಷಣ ಸಂಸ್ಥೆಯ ನುರಿತ ವೈದ್ಯರೇ ಆತ್ಮಹತ್ಯಾ ಬಾಂಬರ್ ಗಳಾಗಿ ಮಾರ್ಪಟ್ಟಿರುವ ಆಘಾತಕಾರಿ ಅಂಶ ಬೆಳಕಿಗೆ ಬಂದಿದೆ.

**3000 ಕೆಜಿ ಸ್ಫೋಟಕ :**



ಇನ್ನು ಈ ದೆಹಲಿ ಸ್ಫೋಟಕ್ಕೂ ಮುನ್ನ ಹರ್ಯಾಣದ ಫರೀದಾಬಾದ್ ನಲ್ಲಿ ವಿಶೇಷ ಕಾರ್ಯಾಚರಣೆ ನಡೆಸಿದ್ದ ಅಧಿಕಾರಿಗಳು ಬಾಡಿಗೆ ಮನೆಯಲ್ಲಿ ಶೇಖರಿಸಿಟ್ಟಿದ್ದ ಬರೋಬ್ಬರಿ 3 ಸಾವಿರ ಕೆಜಿ ಸ್ಫೋಟಕಗಳನ್ನು ವಶಕ್ಕೆ ಪಡೆದಿದ್ದಾರೆ. ಈ ಪೈಕಿ ಜಮ್ಮು ಮತ್ತು ಕಾಶ್ಮೀರ ಪೊಲೀಸರು ಹರಿಯಾಣದ ಫರಿದಾಬಾದ್‌ನಿಂದ ಐಇಡಿ ತಯಾರಿಸುವ ವಸ್ತು ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಂಡಿದ್ದಾರೆ.

ಆರೋಪಿ ಡಾ. ಮುಜಮ್ಮಿಲ್ ನನ್ನು ಬಂಧಿಸಿದ್ದ ಪೊಲೀಸರು 360 ಕೆಜಿ ಸ್ಫೋಟಕ ವಸ್ತುವನ್ನು ವಶಪಡಿಸಿಕೊಂಡಿದ್ದಾರೆ. ಇದಲ್ಲದೆ, ಪಿಸ್ತೂಲ್‌ಗಳು, ಲೈವ್ ಕಾರ್ಟ್ರಿಡ್ಜ್‌ಗಳು, ಟೈಮರ್‌ಗಳು, ಬ್ಯಾಟರಿಗಳು, ವಾಕಿ-ಟಾಕಿ ಸೆಟ್‌ಗಳು, ಹೆವಿ ಮೆಟಲ್ ಮತ್ತು ಸೇರಿ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಒಂದು ಅಸಾಲ್ಟ್ ರೈಫಲ್, 3 ಮ್ಯಾಗಜೀನ್‌ಗಳು ಮತ್ತು 83 ಲೈವ್ ರೈಫಲ್‌ಗಳು, ಒಂದು ಪಿಸ್ತೂಲ್, 8 ಲೈವ್ ರೈಫಲ್‌ಗಳು, ಎರಡು ಖಾಲಿ ಕಾರ್ಟ್ರಿಡ್ಜ್‌ಗಳು ಪತ್ತೆಯಾಗಿವೆ.

# ದೆಹಲಿ ಸ್ಫೋಟಕ್ಕೆ ಕಾರಣರಾದವರನ್ನು ಸುಮ್ಮನೆ ಬಿಡುವುದಿಲ್ಲ : ಪ್ರಧಾನಿ ಮೋದಿ ವಾರ್ನಿಂಗ್

**ಭೂತಾನ್:** ದೆಹಲಿಯ ಕೆಂಪುಕೋಟೆ ಬಳಿ ಆತ್ಮಾಹುತಿ



ಬಾಂಬ್ ದಾಳಿಯಲ್ಲಿ ಒಂಭತ್ತು ಜನರು ಸಾವನ್ನಪ್ಪಿದ ನಂತರ ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ಕಠಿಣ ಎಚ್ಚರಿಕೆ ನೀಡಿದ್ದಾರೆ. ಭೂತಾನಿನ ಥಿಂಪುವಿನಲ್ಲಿ ಮಾತನಾಡಿದ ಅವರು, ಇದರ ಹಿಂದೆ ಇರುವ ಪಿತೂರಿ ಮಾಡಿದವರನ್ನು ಸುಮ್ಮನೆ ಬಿಡುವುದಿಲ್ಲ. ಹೊಣೆಗಾರರಾದ ಎಲ್ಲರನ್ನೂ ತಕ್ಕ ಶಿಕ್ಷೆ ವಿಧಿಸಲಾಗುವುದು ಎಂದು ಎಚ್ಚರಿಸಿದ್ದಾರೆ. ನೆರೆಯ ರಾಷ್ಟ್ರ ಭೂತಾನ್‌ನಲ್ಲಿ ದೊರೆ ಜಿಗ್ಮೆ ಸಿಂಗ್ಯೆ ವಾಂಗ್‌ಚುಕ್ ಅವರ 70ನೇ ವರ್ಷದ ಹುಟ್ಟುಹಬ್ಬದ ಆಚರಣೆಯಲ್ಲಿ ಭಾಗವಹಿಸಲು ಪ್ರಧಾನಿಯವರು ಎರಡು ದಿನಗಳ ಭೇಟಿಗಾಗಿ ಇಂದು ಮುಂಜಾನೆ ಥಿಂಪುಗೆ ಆಗಮಿಸಿದರು.

ಸಾರ್ವಜನಿಕ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಸ್ಫೋಟವನ್ನು ಭಯಾನಕ ಎಂದು ಕರೆದರು. ಸಂತ್ರಸ್ತ ಕುಟುಂಬಗಳಿಗೆ ಸಾಂತ್ವನ ಹೇಳಿದರು. ಇಡೀ ರಾಷ್ಟ್ರ ಇಂದು ಅವರೊಂದಿಗೆ ನಿಂತಿದೆ.

# ದೆಹಲಿ ಸ್ಫೋಟ ಕುರಿತು ಕಳವಳ ವ್ಯಕ್ತಪಡಿಸಿದ ದೇವೇಗೌಡರು

**ಬೆಂಗಳೂರು, ನ.11**-ದೆಹಲಿಯ ಕೆಂಪು ಕೋಟೆ ಬಳಿ



ನಿನ್ನೆ ಸಂಭವಿಸಿ ಸ್ಫೋಟದ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಇಂಥ ಸಂದರ್ಭದಲ್ಲಿ ಒಗ್ಗಟ್ಟಿನಿಂದ ಇರಬೇಕು ಹಾಗೂ ಬಲವಾಗಿ ಎದುರಿಸಬೇಕು ಎಂದು ಹೇಳಿದ್ದಾರೆ.

ಈ ಸಂಬಂಧ ತಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು, ಸ್ಫೋಟದಲ್ಲಿ ಮೃತರಾದವರು ಹಾಗೂ ಸಂತ್ರಸ್ತ ಕುಟುಂಬಗಳಿಗೆ ದುಃಖ ಭರಿಸುವ ಶಕ್ತಿ ಭಗವಂತ ನೀಡಲಿ ಎಂದು ಪ್ರಾರ್ಥಿಸಿದ್ದಾರೆ. ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ. ಸ್ಫೋಟದಿಂದ ತುಂಬಾ ತೊಂದರೆ-ಯಾಗಿದ್ದು, ಕೇಂದ್ರ ಸರ್ಕಾರ ತಕ್ಷಣವೇ ಹಲವು ಸುರಕ್ಷತಾ ಕ್ರಮಗಳನ್ನು ತ್ವರಿತವಾಗಿ ಕೈಗೊಂಡಿದೆ.

### ರೈತ ಮುಖಂಡರೊಂದಿಗೆ ಸಭೆ

# ಖರೀದಿಯಲ್ಲಿ ರೈತರಿಂದ ಸೂಟ್ ತೆಗೆದುಕೊಳ್ಳುವಂತಿಲ್ಲ

## ಖರೀದಿದಾರರಿಗೆ ಎಚ್ಚರಿಕೆ ನೀಡಿದ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ

**ದಾವಣಗೆರೆ :** ಪ್ರಸಕ್ತ ಸಾಲಿನ ಮುಂಗಾರು ಋತುವಿನ ಕೃಷಿ ಉತ್ಪನ್ನಗಳನ್ನು ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಭತ್ತ ಮತ್ತು ರಾಗಿ ಖರೀದಿಗೆ ಜಿಲ್ಲೆಯಾದ್ಯಂತ 5 ಖರೀದಿ ಕೇಂದ್ರ ಸ್ಥಾಪನೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದರು. ಮಂಗಳವಾರ(ನ.11) ರಂದು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಬೆಂಬಲ ಬೆಲೆ ಕುರಿತು ರೈತ ಮುಖಂಡರೊಂದಿಗೆ ಕುಂದು ಕೊರತೆ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಬೆಂಬಲ ಬೆಲೆಯಲ್ಲಿ ರೈತರಿಂದ ಭತ್ತ ಮತ್ತು ರಾಗಿ ಖರೀದಿಗೆ ನೋಂದಣಿ ದಿನಾಂಕವನ್ನು ಡಿಸೆಂಬರ್ ರವರೆಗೆ ಮುಂದೂಡಲಾಗಿದೆ. ರೈತರು ಭತ್ತವನ್ನು ಎಷ್ಟು ಕ್ವಿಂಟಾಲ್ ಬೇಕಾದರೂ ಖರೀದಿ ಕೇಂದ್ರಕ್ಕೆ ನೀಡಲು ನೋಂದಣಿ ಮಾಡಿಸಬಹುದು. ರೈತರು ಎಷ್ಟು ನೋಂದಾಣಿ ಮಾಡಿಸಿದರೂ ನಾವು ಅದನ್ನು ಖರೀದಿ ಮಾಡುತ್ತೇವೆ. ತಾಂತ್ರಿಕ ತೊಂದ-



ರೆಯಾಗದಂತೆ ನೋಡಿಕೊಳ್ಳುತ್ತೇವೆ ಎಂದರು.

ದಾವಣಗೆರೆಯಲ್ಲಿ ಕೆ.ಎಫ್.ಎಸ್.ಸಿ ಎ.ಪಿ.ಎಂ.ಸಿ ಆವರಣದಲ್ಲಿರುವ ಗೋದಾಮಿನಲ್ಲಿ ಭತ್ತ ಮತ್ತು ರಾಗಿ, ಹೊನ್ನಾಳಿ ಕೆ.ಎಫ್.ಎಸ್.ಸಿ ಎ.ಪಿ.ಎಂ.ಸಿ ಆವರಣದಲ್ಲಿರುವ ಗೋದಾಮಿನಲ್ಲಿ ಭತ್ತ ಮತ್ತು ರಾಗಿ, ಜಗಳೂರು ಕೆ.ಎಫ್.ಎಸ್.ಸಿ ಎ.ಪಿ.ಎಂ.ಸಿ ಆವರಣದಲ್ಲಿರುವ ಗೋದಾಮಿನಲ್ಲಿ ರಾಗಿ, ಹರಿಹರ ಕೆ.ಎಫ್.ಎಸ್.ಸಿ ಎ.ಪಿ.ಎಂ.ಸಿ ಆವರಣದಲ್ಲಿರುವ ಗೋದಾಮಿನಲ್ಲಿ ಭತ್ತ ಮತ್ತು ರಾಗಿ, ಚನ್ನಗಿರಿ ಕೆ.ಎಫ್.ಎಸ್.ಸಿ ಎ.ಪಿ.ಎಂ.ಸಿ ಆವರಣದಲ್ಲಿರುವ ಗೋದಾಮಿನಲ್ಲಿ ಭತ್ತ ಮತ್ತು ರಾಗಿ ಖರೀದಿ ಕೇಂದ್ರಗಳನ್ನು ಸ್ಥಾಪನೆ ಮಾಡಲಾಗಿದೆ.

ಕ್ವಿಂಟಾಲ್ ರಾಗಿ ರೂ.4,886/-ಗಳನ್ನು, ಸಾಮಾನ್ಯ ಭತ್ತಕ್ಕೆ ರೂ.2,369, ಗ್ರೇಡ್-ಎ ಭತ್ತಕ್ಕೆ ರೂ.2,389 ನ್ನು ನಿಗಧಿಪಡಿಸಲಾಗಿದೆ. ಇಲ್ಲಿಯವರೆಗೆ ಭತ್ತಕ್ಕೆ 18 ಜನ ನೋಂದಾಣಿ ಮಾಡಿಸಿದ್ದು, ರಾಗಿಗೆ 1800 ಜನ ನೋಂದಾಣಿ ಮಾಡಿಸಲಾಗಿದೆ ಎಂದರು.

ರೈತರು ಪ್ರತಿ ತಾಲ್ಲೂಕುಗಳಲ್ಲಿ ಬೆಂಬಲ ಬೆಲೆಗೆ ನೋಂದಣಿ ಮಾಡಿಸಬೇಕು. ಎಲ್ಲಾ ರೈಸ್‌ಮಿಲ್‌ಗಳಲ್ಲಿ ತೂಕದ ಯಂತ್ರವನ್ನು ಪರೀಕ್ಷಿಸಲಾಗುವುದು. ಎ.ಪಿ.ಎಂ.ಸಿಯಲ್ಲಿರುವ ಎಲೆಕ್ಟ್ರಾನಿಕ್ ವೇಬ್ರಿಡ್ಜ್ ನ್ನು ಶ್ರೀಘ್ರವಾಗಿ ಸರಿಮಾಡಿಸಿ ಕೊಡಲಾಗುವುದು.

ಎಪಿಎಂಸಿ ದಲ್ಲಾಲಿ ಮಂಡಿಗಳಲ್ಲಿ ಖರೀದಿಗೆ ಬಿಡುವ ರೈತರಿಂದ ಸೂಟ್ ಆಗಿ ಹೆಚ್ಚುವರಿ ತೂಕವನ್ನು ಪಡೆಯಲಾಗುತ್ತಿದೆ. ಎಂದು ರೈತರಿಂದ ದೂರು ಬರುತ್ತಿದೆ. ಹೆಚ್ಚುವರಿ ತೂಕ ಪಡೆಯಲು ಕಾನೂನಿನಲ್ಲಿ ಅವಕಾಶವಿಲ್ಲ. ಯಾರದರೂ ದಲಾಲರೂ ರೈತ-ರಿಂದ ಈ ರೀತಿ ಪಡೆದಲ್ಲಿ ಮತ್ತು ರೈತರಿಂದ ಕಮಿಷನ್ ಪಡೆದಲ್ಲಿಯೂ ಸಹ ಕಠಿಣಕ್ರಮ ಜರುಗಿಸಲಾಗುವುದು. ಇಂತಹ ದೂರನ್ನು ಅನಾಮಧೇಯವಾಗಿ ನೀಡಿ-ದರೂ ಕೂಡ ಕ್ರಮಕೈಗೊಳ್ಳುತ್ತೇವೆ ಎಂದರು. ತೂಕದ ಅಳತೆಯಲ್ಲಿ ವ್ಯತ್ಯಾಸ, ತೊಂದರೆ ಕಂಡು ಬಂದಲ್ಲಿ ಅದರ ಬಗ್ಗೆ ಕ್ರಮಕೈಗೊಳ್ಳಲಾಗುವುದು. ಗ್ರಾಮಗಳಲ್ಲಿ ಧಾನ್ಯಗಳನ್ನು ಖರೀದಿ ಮಾಡಿದರೆ ನಿರ್ದಾಕ್ಷಣಾವಾಗಿ ಕ್ರಮ ಕೈಗೊಳ್ಳಲಾಗುವುದು. ರೈತರ ಮನವಿಯಂತೆ ಆನ್‌ಲೈನ್ ಪ್ರೂಟ್ ತಂತ್ರಾಂಶದಲ್ಲಿ ನೇರವಾಗಿ ನೋಂದಾಣಿ ಮಾಡಿಸಲು ಪಾಸ್ ಬುಕ್ ತೆಗೆದುಕೊಳ್ಳಬಾರದು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹರಿಹರದಲ್ಲಿ ಆನ್‌ಲೈನ್ ಇ-ಟೆಂಡರ್ ಮಾಡಿಸುತ್ತವೆ ಎಂದು ಭರವಸೆ ನೀಡಿದರು. ಎ.ಪಿ.ಎಂ.ಸಿ ಯಲ್ಲಿರುವ ವೇ ಬ್ರಿಡ್ಜ್ ನಲ್ಲಿ ತೂಕದ ಚೀಟಿಯಲ್ಲಿ ಬೆಳೆ ಬೆಳೆದ ರೈತರ ಹೆಸರು ಹಾಗೂ ಖರೀದಿದಾರರ ಹೆಸರನ್ನು ನಮೂದಿಸಲು ಸೂಚಿಸಿದರು.

ಟಾಸ್ಕ್ ಪೋರ್ಸ್ ಸಮಿತಿಯ ಅಧಿಕಾರಿಯವರು ಜಂಟಿಯಾಗಿ ಕೆಲಸ ನಿರ್ವಹಿಸಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿನಿರ್ದೇಶಕರಾದ ಮಧುಸೂದನ್, ಕೃಷಿ ಇಲಾಖೆಯ ಅಧಿಕಾರಿ ಜಿಯಾವುಲ್ಲಾ, ತೋಟಗಾರಿ-ಕೆ ಇಲಾಖೆಯ ಅಧಿಕಾರಿ ರಾಘವೇಂದ್ರ ಪ್ರಸಾದ್, ಬೆಸ್ಕಾಂ ಅಧಿಕಾರಿ ಪ್ರವೀಣ, ರೈತ ಮುಖಂಡರಾದ ನಾಗರಾಜ, ತೇಜಸ್ವಿನಿ ಪಟೇಲ್, ಈರಣ್ಣ, ಮಂಜಣ್ಣ ಉಪಸ್ಥಿತರಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೊಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ– ಆದರೆ ಅದೇ ಸಮಯದಲ್ಲಿ ಖರ್ಚೂ ತುಂಬಾ ಹೆಚ್ಚಾಗುತ್ತದೆ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ಇಂದು ಕಾರ್ಡ್ ನಲ್ಲಿ ಪ್ರಣಯಶಾಲಿ ಪ್ರಭಾವಗಳು ಹೆಚ್ಚಾಗಿವೆ.

### ವೃಷಭ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಯುವಕರು ಶಾಲಾ ಯೋಜನೆಗಳಲ್ಲಿ ಕೆಲವು ಸಲಹೆ ಪಡೆಯಬಹುದು. ನಿಮ್ಮ ಪ್ರೇಮದ ಸಂಗಾತಿ ನಿಮ್ಮನ್ನು ಹೊಗಳಬಹುದು. ಅವರನ್ನು ಏಕಾಂಗಿಯಾಗಿ ಈ ಪ್ರಪಂಚದಲ್ಲಿ ಬಿಡಬೇಡಿ.

### ಮಿಥುನ ರಾಶಿ

ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು ಮತ್ತು ಸಾಧ್ಯವಾದರೆ ನಿಮ್ಮ ಸ್ನೇಹಿತರು ಧೂಮಪಾನ ಮಾಡುವಾಗ ಅವರ ಜೊತೆ ನಿಲ್ಲಬೇಡಿ. ಏಕೆಂದರೆ ಅದು ಮಗುವನ್ನು ಬಾಧಿಸಬಹುದು. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

### ಕರ್ಕ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ. ಪ್ರಣಯ ರೋಮಾಂಚಕಾರಿಯಾಗಿರುತ್ತದೆ ಆದ್ದರಿಂದ ನೀವು ಪ್ರೀತಿಸುವವರನ್ನು ಸಂಪರ್ಕಿಸಿ ಮತ್ತು ದಿನದ ಅತ್ಯುತ್ತಮ ಲಾಭ ಪಡೆಯಿರಿ.

### ಸಿಂಹ ರಾಶಿ

ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ. ನಿಮ್ಮ ಸಂಗಾತಿಯ ಆರೋಗ್ಯದ ಚಿಂತೆ ಉಂಟುಮಾಡಬಹುದು ಮತ್ತು ಸ್ವಲ್ಪ ವೈದ್ಯಕೀಯ ಗಮನದ ಅಗತ್ಯವಿದೆ. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ.

### ಕನ್ಯಾ ರಾಶಿ

ಚಾಲನೆ ಮಾಡುವಾಗ ಎಚ್ಚರ ವಹಿಸಿ. ಇಂದು ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು. ಇದರ ಬಗ್ಗೆ ತಿಳಿದು ನೀವು ಆಶ್ಚರ್ಯಚಕಿತರಾಗಬಹು ಮತ್ತು ಸಂತೋಷವು ಪಡೆಯಬಹುದು. ಸಹೋದರಿಯ ವೈವಾಹಿಕ ಸಂಬಂಧದ ಸುದ್ದಿ ನಿಮ್ಮನ್ನು ಸಂತುಷ್ಟಗೊಳಿಸಬಹುದು. ಅವಳಿಂದ ಪ್ರತ್ಯೇಕಗೊಳ್ಳುವ ಬಗ್ಗೆ ಯೋಚಿಸಿ ನಿಮಗೆ ಸ್ವಲ್ಪ ದುಃಖವಾಗುವ ಸಾಧ್ಯತೆಗಳಿವೆ.

### ತುಲಾ ರಾಶಿ

ನಿಮ್ಮ ಒತ್ತಡವನ್ನು ನೀವು ತೊಡೆದುಹಾಕಬಹುದು. ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭ ಗಳಿಸಲು ನಿಮಗೆ ಸಲಹೆ ನೀಡಬಹುದು, ನೀವು ಈ ಸಲಹೆಯನ್ನು ಅನುಸರಿಸಿದರೆ, ನೀವು ಖಂಡಿತವಾಗಿಯೂ ಹಣವನ್ನು ಗಳಿಸುವಿರಿ. ನಿಮ್ಮನ್ನು ಸಂತೋಷವಾಗಿಡುವುದನ್ನೇನಾದರೂ ಮಾಡಿ, ಆದರೆ ಇತರರ ವ್ಯವಹಾರಗಳಿಂದ ದೂರವಿರಿ. ಕೆಲವರಿಗೆ ಹೊಸ ಪ್ರಣಯ ಖಂಡಿತವೆನಿಸುತ್ತದೆ ನಿಮ್ಮ ಪ್ರೀತಿ ನಿಮ್ಮ ಜೀವನವನ್ನು ಅರಳಿಸುತ್ತದೆ.

### ವೃಶ್ಚಿಕ ರಾಶಿ

ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು. ನೀವು ಇದು ನಮ್ಮ ಆಲೋಚನೆಗಳು ಮತ್ತು ಕಲ್ಪನೆಯ ಪ್ರಭಾವವೆಂದು ಅರ್ಥಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ– ಜೀವನದ ಆನಂದವನ್ನು ಹೀರಿಕೊಳ್ಳುತ್ತದೆ ಹಾಗೂ ನಿಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ–ಆದ್ದರಿಂದ ಇದು ನಿಮ್ಮನ್ನು ಹೇಡಿಯಾಗಿಸುವ ಮೊದಲು ಅದನ್ನುಮೊಗ್ಗಿನಲ್ಲೇ ಚಿವುಟಿಹಾಕುವುದು ಒಳ್ಳೆಯದು.

### ಧನು ರಾಶಿ

ಹಿರಿಯರು ಉತ್ತಮ ಲಾಭ ಪಡೆಯಲು ತಮ್ಮ ಹೆಚ್ಚುವರಿ ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ. ನಿಮ್ಮ ಹತ್ತಿರದ ಜನರು ವೈಯಕ್ತಿಕ ಮಟ್ಟದಲ್ಲಿ ನಿಮಗೆ ಸಮಸ್ಯೆಗಳನ್ನು ಸೃಷ್ಟಿಸುತ್ತಾರೆ. ಇಂದು, ನಿಮ್ಮ ಪೀತಿ ಸಂಗಾತಿ ಶಾಶ್ವತತೆ ತನಕ ನೀವು ಪ್ರೀತಿ ಯಾರು ಒಂದು ಎಂದು ತಿಳಿಯುವುದಿಲ್ಲ.

### ಮಕರ ರಾಶಿ

ಮದ್ಯಪಾನ ಮಾಡಿದಲ್ಲಿ ಅದು ನಿಮ್ಮ ನಿದ್ರೆಗೆ ಭಂಗ ತಂದು ಆಳವಾದ ವಿಶ್ರಾಂತಿ ತೆಗೆದುಕೊಳ್ಳುವುದನ್ನು ತಡೆಗಟ್ಟಬಹುದಾದ್ದರಿಂದ ಹಾಗೆ ಮಾಡಬೇಡಿ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ. ನಿಮ್ಮ ಗೆಳತಿಯ ಜೊತೆ ಅಸಭ್ಯವಾಗಿ ನಡೆದುಕೊಳ್ಳಬೇಡಿ.

### ಕುಂಭ ರಾಶಿ

ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ. ನೀವು ಸಂತೋಷ ನೀಡುವ ಮೂಲಕ ಮತ್ತು ಹಿಂದಿನ ತಪ್ಪುಗಳನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಸಮರ್ಥಗೊಳಿಸಲಿದ್ದೀರಿ.

.

### ಮೀನ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಜೀವನದ ಕೆಟ್ಟ ಕಾಲದಲ್ಲಿ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ ಆದ್ದರಿಂದ ಇಂದಿನಿಂದಲೇ ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಯೋಚಿಸಿ ಇಲ್ಲದಿದ್ದರೆ ನೀವು ತೊಂದರೆಗೊಳಗಾಗಬಹುದು. ದಿನದ ಕೊನೆಯಲ್ಲಿ ಒಬ್ಬ ಹಳೆಯ ಸ್ನೇಹಿತರ ಭೇಟಿ ನಿಮ್ಮ ಸಂಜೆಯನ್ನು ಬೆಳಗಿಸುತ್ತದೆ. ನೀವು ಆ ಸುವರ್ಣ ದಿನಗಳನ್ನು ನೆನಪಿಸಿಕೊಳ್ಳುವ ಜೊತೆ ನಿಮ್ಮ ಬಾಲ್ಯದ ಸವಿನೆನಪುಗಳನ್ನೂ ಆನಂದಿಸುತ್ತೀರಿ.

# ಮಕ್ಕಳು ಶಿಕ್ಷಣದ ಜೊತೆಗೆ ಸಂಸ್ಕೃತಿ, ಸಂಸ್ಕಾರ ರೂಢಿಸಿಕೊಳ್ಳಬೇಕು–ಬಿ. ವಾಮದೇವಪ್ಪ



**ದಾವಣಗೆರೆ:** ವಿದ್ಯಾರ್ಥಿಗಳು ಶಿಕ್ಷಣದ ಕಾಳಜಿಯೊಂದಿಗೆ ಈ ಹಂತದಲ್ಲಿ ಮಾನಸಿಕವಾಗಿ ಪೂರ್ಣ ಪ್ರಮಾಣದಲ್ಲಿ ಸಿದ್ದರಾಗಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶದೊಂದಿಗೆ ಈ ಪವಿತ್ರವಾದ ವಿದ್ಯಾಸಂಸ್ಥೆಗೆ, ತಂದೆ–ತಾಯಿಗಳಿಗೆ ದಾವಣಗೆರೆಗೆ ಒಳ್ಳೆಯ ಹೆಸರು ತರಬೇಕು. ಮಕ್ಕಳು ಮೊಬೈಲ್ ದೂರವಿಟ್ಟು ಶಿಕ್ಷಣದ ಜೊತೆಗೆ ನಮ್ಮ ಸಂಸ್ಕೃತಿ, ಸಂಸ್ಕಾರ ರೂಢಿಸಿಕೊಳ್ಳಬೇಕು ಎಂದು ದಾವಣಗೆರೆಯ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಬಿ. ವಾಮದೇವಪ್ಪ ತಮ್ಮ ಮನದಾಳದ ಮಾತು ವ್ಯಕ್ತಪಡಿಸಿದರು.

ದಾವಣಗೆರೆಯ ಶ್ರೀ ತರಳಬಾಳು ಜಗದ್ಗುರು ಪ್ರೌಢಶಾಲೆಯ ಅನುಭವ ಮಂಟಪದ ಸಭಾಂಗಣದಲ್ಲಿ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯಿಂದ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಉಚಿತ ಕಾರ್ಯಾಗಾರ ಸಮಾರಂಭವನ್ನು ಜ್ಯೋತಿ ಬೆಳಗುವುದರೊಂದಿಗೆ ಉದ್ಘಾಟಿಸಿ ಬಿ.ವಾಮದೇವಪ್ಪ ಮಾತನಾಡಿದರು. ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ ಶ್ರೀ ತರಳಬಾಳು ಜಗದ್ಗುರು ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ರವಿಕುಮಾರ್ ಹೆಚ್.ಎಸ್. ಮಾತನಾಡಿ, ಮಕ್ಕಳ ಈ ಶಿಕ್ಷಣದ ಹಂತ ಜೀವನದ ಸಾಧನೆಗಳಿಗೆ ಒಂದು ತಿರುವು ಸಹಜವಾಗಿ ಚಿಕ್ಕ ಮಕ್ಕಳಿದ್ದಾಗ ಆಟೋಟ, ಕುಚೇಷ್ಟೆ ಸಹಜ, ಸರ್ವೆ ಸಾಮಾನ್ಯ ಅದರೆ ಈಗ ತುಂಬಾ ಗಂಭೀರವಾಗಿ ಶಿಕ್ಷಣದ ಕಡೆಗೆ ಗಮನ ಕೊಟ್ಟು ಧೈರ್ಯದೊಂದಿಗೆ ತಂದೆ–ತಾಯಿಗಳ ಕನಸು ನನಸು ಮಾಡಬೇಕು ಎಂದರು.

ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರು ಕಾರ್ಯಾಗಾರ ನಡೆಸಿಕೊಟ್ಟು ಪ್ರತಿಜ್ಞಾವಿಧಿ ಬೋಧಿಸಿದರು. ವೇದಿಕೆಯಲ್ಲಿ ಕಲಾಕುಂಚ ಮಹಿಳಾ ವಿಭಾಗದ ಸಂಸ್ಥಾಪಕರಾದ ಶ್ರೀಮತಿ ಜ್ಯೋತಿ ಗಣೇಶ್‌ಶೆಣೈ, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ, ಡಿ.ಸಿ.ಎಂ. ಶಾಖೆಯ ಅಧ್ಯಕ್ಷರಾದ ಶ್ರೀಮತಿ ಶಾರದಮ್ಮ ಶಿವನಪ್ಪ, ಸಿದ್ದವೀರಪ್ಪ ಬಡಾವಣೆಯ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳು ಕನ್ನಡ ನಾಡು, ನುಡಿಯ ಸಾಮೂಹಿಕ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ಈ ಸಮಾರಂಭದಲ್ಲಿ ಕಲಾಕುಂಚದ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ಸ್ವಾಗತಿಸಿ, ಅಚ್ಚುಕಟ್ಟಾಗಿ ನಿರೂಪಿಸಿ ಕೊನೆಯಲ್ಲಿ ವಂದಿಸಿದರು.

## ನ.15 ರಂದು ಸಮಾಜವಾದಿ ಪಾರ್ಟಿಯ ಅಖಿಲೇಶ್ ಯಾದವ್ ಕರ್ನಾಟಕ ರಾಜ್ಯ ಪ್ರವಾಸ

**ದಾವಣಗೆರೆ:** ಸಮಾಜವಾದಿ ಪಾರ್ಟಿಯ ರಾಷ್ಟ್ರೀಯ ಅಧ್ಯಕ್ಷ ಅಖಿಲೇಶ್ ಯಾದವ್ ಪಕ್ಷ ಸಂಘಟನೆಗಾಗಿ ನವಂಬರ್ 15 ಮತ್ತು 16 ರಂದು ಕರ್ನಾಟಕ ರಾಜ್ಯಕ್ಕೆ ಆಗಮಿಸಲಿದ್ದಾರೆ ಎಂದು ಪಾರ್ಟಿಯ ರಾಜ್ಯ ಕಾರ್ಯದರ್ಶಿ ಕೆ.ಎನ್.ರವಿಕುಮಾರ್ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಅಖಿಲೇಶ್ ಯಾದವ್ ನ.15 ರಂದು ಬೆಂಗಳೂರಿನ ತಾಜ್ ವೆಸ್ಟ್‌ಎಂಡ್ ಹೋಟೆಲ್‌ನಲ್ಲಿ ಎರಡು ದಿನ ವಾಸ್ತವ್ಯ ಹೂಡಲಿದ್ದು, ಪಾರ್ಟಿಯ ಎಲ್ಲಾ ರಾಜ್ಯದ ಪದಾಧಿಕಾರಿಗಳು ಹಾಗೂ ಮುಖಂಡರ ಜೊತೆ ಸಮಾಲೋಚನೆ ನಡೆಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಕರ್ನಾಟಕ ಮತ್ತು ಗೋವಾ ರಾಜ್ಯಗಳ ನಡುವೆ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಮಹಾದಾಯಿ ನೀರಾವರಿ ಸಮಸ್ಯೆಯನ್ನು ಕೇಂದ್ರ ಸರ್ಕಾರ ಮಧ್ಯಸ್ಥಿಕೆ ವಹಿಸಿ ಶೀಘ್ರ ಅನುಸ್ಠಾನ ಗೊಳಿಸಬೇಕು. ಬಚಾವತ್ ಆಯೋಗದ 'ಎ' ಸ್ಕೀಂ ಮತ್ತು 'ಬಿ' ಸ್ಕೀಂ ನಿಂದಾಗಿ ಕೃಷ್ಣಾ ನದಿ ಪಾತ್ರ & ಕಾವೇರಿ ನದಿ ಪಾತ್ರದಿಂದ ಸುಮಾರು 282 ಟಿ.ಎಂ.ಸಿ ನೀರು ಆಂದ್ರ ಮತ್ತು ತಮಿಳುನಾಡಿಗೆ ಹರಿದು ಹೋಗುತ್ತಿದ್ದು, ಇದರಿಂದ ಕರ್ನಾಟಕ ರಾಜ್ಯಕ್ಕೆ ಅನ್ಯಾಯ ಆಗುತ್ತಿದ್ದು, ಕರ್ನಾಟಕ ರಾಜ್ಯ ಕೃಷಿ ಚಟುವಟಿಕೆ ನಡೆಸಲು ಕೇಂದ್ರ ಸರ್ಕಾರ ಮಧ್ಯಸ್ತಿಕೆ ವಹಿಸಿ ರಾಜ್ಯಕ್ಕೆ ನ್ಯಾಯ ಒದಗಿಸಬೇಕು. ಅಪ್ಪರ್ ಭದ್ರ ನೀರಾವರಿ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಿಸಬೇಕು. ಕೇಂದ್ರ ಸರ್ಕಾರ ಹಿಂದೆ ಬಜೆಟ್ ನಲ್ಲಿ ಈ ಯೋಜನೆಗೆ 5000 ಕೋಟಿ ಅನುದಾನ ಒದಗಿಸುವುದಾಗಿ ಹೇಳಿದ್ದು ಶೀಘ್ರವೇ ಹಣಕಾಸನ್ನು ಬಿಡುಗಡೆ ಮಾಡಬೇಕು ಸೇರಿದಂತೆ ವಿವಿಧ ಅಂಶಗಳ ಕುರಿತು ಸಮಾಲೋಚನೆ ನಡೆಸಲಿದ್ದಾರೆ ಎಂದು ಹೇಳಿದರು.

## ದಾವಣಗೆರೆ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆ



**ದಾವಣಗೆರೆ:** ಶಾಲಾ ಶಿಕ್ಷಣ ಇಲಾಖೆಯ ಆಡಳಿತ ಕಚೇರಿ, ಉಪ ನಿರ್ದೇಶಕರು (ಶಾಲಾ ಶಿಕ್ಷಣ) ದಾವಣಗೆರೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 2025– 26ನೇ ಸಾಲಿನ 14 ವರ್ಷದ ವಯೋಮಿತಿಯ ಶಾಲಾ ಮಕ್ಕಳ ರಾಜ್ಯ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ದಾವಣಗೆರೆಯ ಗುರುಕುಲ ಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಗಳಿಸುವ ಮೂಲಕ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ರಾಜ್ಯ ಮಟ್ಟದ ಜೂಡೋ ಸ್ಪರ್ಧೆಯಲ್ಲಿ ತೃತೀಯ : ಬೆಂಗಳೂರಲ್ಲಿ ನಡೆದ ರಾಜ್ಯ ಮಟ್ಟದ ಜೂಡೋ ಸ್ಪರ್ಧೆಯಲ್ಲಿ ಗುರುಕುಲ ಶಾಲೆಯ ವಿದ್ಯಾರ್ಥಿಗಳಾದ ಹರಿಪ್ರಿಯ, ರಮೇಶ್, ತವನ್ ಕುಮಾರ್ ತೃತೀಯ ಸ್ಥಾನ ಪಡೆದು ಕೀರ್ತಿ ತಂದಿದ್ದು, ಶಾಲೆಯ ಅಧ್ಯಕ್ಷರು, ಆಡಳಿತ ಮಂಡಳಿಯವರು ಅಭಿನಂದನೆ ಸಲ್ಲಿಸಿದ್ದಾರೆ.

ಈ ಸಾಧನೆ ವಿದ್ಯಾರ್ಥಿಗಳ ಪರಿಶ್ರಮ, ಶ್ರದ್ಧೆ ಮತ್ತು ಸ್ಪರ್ಧಾತ್ಮಕ ಮನೋಭಾವದಿಂದ ಸಾಧನೆ ಗಳಿಸಿರುವುದಕ್ಕೆ ಹೆಮ್ಮೆ ವ್ಯಕ್ತಪಡಿಸಿರುವ ಗುರುಕುಲ ವಸತಿಯುತ ಶಾಲೆ

ಅಧ್ಯಕ್ಷ ಆರ್. ಅಬ್ದುಲ್ ಸೇರಿದಂತೆ ಶಾಲಾ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗ ಮತ್ತು ಪೋಷಕರು, ಶಿಕ್ಷಕರು ಹಾಗೂ ಸ್ಥಳೀಯರು ಹೆಮ್ಮೆಗೊಂಡಿದ್ದಾರೆ. ಉಪ ನಿರ್ದೇಶಕರು ಹಾಗೂ ಶಾಲಾ ಕಾರ್ಯದರ್ಶಿ, ಶಾಲಾ ಆಡಳಿತ ಮಂಡಳಿ ವಿದ್ಯಾರ್ಥಿಗಳನ್ನು ಅಭಿನಂದಿಸಿ, ಮುಂದಿನ ರಾಷ್ಟ್ರೀಯ ಮಟ್ಟದ ಸ್ಪರ್ಧೆಗೂ ಯಶಸ್ಸು ಕೋರಿ ಶುಭ ಹಾರೈಸಿದ್ದಾರೆ.

## ಗದಗ ಕೋ ಆಪರೇಟಿವ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಹತ್ತಿ ಖರೀದಿ ಕೇಂದ್ರ ಉದ್ಘಾಟನೆ




**ಗದಗ :** ನಗರದ ದಿ. ಗದಗ ಕೋ ಆಪ್ ಕಾಟನ್ ಸೇಲ್ ಸೋಸಾಯಿಟಿ ಲಿ. ಆವರಣದಲ್ಲಿ ಭಾರತೀಯ ಹತ್ತಿ ನಿಗಮ ನಿಯಮಿತ(ಸಿಸಿಐ) ಹುಬ್ಬಳ್ಳಿ ಶಾಖೆ ವತಿಯಿಂದ ಹತ್ತಿ ಬೆಂಬಲ ಬೆಲೆ ಖರೀದಿ ಕೇಂದ್ರಕ್ಕೆ ಚಾಲನೆ ದೊರೆಯಿತು.

ಸಂಘದ ಅಧ್ಯಕ್ಷ ಆರ್.ಎಂ. ಮೂಲಿಮನಿ ಅವರು ಖರೀದಿ ಕೇಂದ್ರವನ್ನು ಉದ್ಘಾಟಿಸಿದರು. ನಿರ್ದೇಶಕರಾದ ಎಂ.ಆರ್. ಪಾಟೀಲ, ಕೆ.ಎಚ್. ಪಾಟೀಲ ಮತ್ತು ಸರ್ವ ಸದಸ್ಯರು, ಸಂಘದ ಮುಖ್ಯ ಕಾರ್ಯನಿರ್ವಾಹಕ

ಅಧಿಕಾರಿ ಬಿ.ವಿ. ಯಾಳಗಿಶೆಟ್ಟರ ಮತ್ತು ಸಿಬ್ಬಂದಿ ವರ್ಗ ಹಾಗೂ ಭಾರತೀಯ ಹತ್ತಿ ನಿಗಮ ನಿಯಮಿತ(ಸಿ ಸಿ ಐ) ಅಧಿಕಾರಿ ಜಿ. ರಮೇಶ ಸೇರಿ ಹಲವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಶಾಸಕ ಹರೀಶ್ ಆರೋಪ ಮಾಡುವುದ ಬಿಟ್ಟು ಹರಿಹರ ಅಭಿವೃದ್ಧಿ ಮಾಡಲಿ, ಇಲ್ಲವೇ ರಾಜೀನಾಮೆ ನೀಡಲಿ

**ದಾವಣಗೆರೆ:** ಶಾಮನೂರು ಕುಟುಂಬದ ವಿರುದ್ಧ ಆರೋಪ ಮಾಡಲು ಸೀಮಿತವಾಗಿರುವ ಹರಿಹರ ಶಾಸಕರು ಕ್ಷೇತ್ರದ ಅಭಿವೃದ್ಧಿಯತ್ತ ಗಮನ ಹರಿಸಲಿ. ಜನಪರ ಕೆಲಸ ಮಾಡಲು ಆಗದಿದ್ದರೆ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಹೋಗಲಿ ಎಂದು ಕಾಂಗ್ರೆಸ್ ಮುಖಂಡ ಎನ್.ಹೆಚ್.ಶ್ರೀನಿವಾಸ ನಂದಿಗಾವಿ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಹರಿಹರ ತಾಲೂಕು ಚಿಕ್ಕಬಿದರಿ ಹಳ್ಳ, ರೈತರ ಜಮೀನು ವಿಚಾರವಾಗಿ ಶಾಮನೂರು ಕುಟುಂಬದ ವಿರುದ್ಧ ಶಾಸಕ ಬಿ.ಪಿ.ಹರೀಶ ವಿನಾಕಾರಣ ಆರೋಪ ಮಾಡುತ್ತಿದ್ದಾರೆ. ಹಿರಿಯ ನಾಯಕರು, ಅಧಿಕಾರಿಗಳಿಗೆ ಬೈಯ್ಯುವುದನ್ನೇ ಕೆಲಸ ಮಾಡಿಕೊಂಡಿದ್ದಾರೆ. ಸಮಾರಂಭ, ಮದುವೆ ಇತರೆಗಳಲ್ಲಿ ಭಾಗಿಯಾಗುವುದಕ್ಕಷ್ಟೇ ಹರಿಹರ ಶಾಸಕ ಹರೀಶ ಸೀಮಿತರಾಗಿದ್ದಾರೆ ಎಂದರು.

ಹರಿಹರ ಕ್ಷೇತ್ರದ ಅಭಿವೃದ್ಧಿಗೆ ಅನುದಾನ ಕೋರಿ ಶಾಸಕ ಹರೀಶ್ ಸರ್ಕಾರ, ಮುಖ್ಯಮಂತ್ರಿ, ಜಿಲ್ಲಾ ಉಸ್ತುವಾರಿ ಸಚಿವರು ಅಥವಾ ಸಂಬಂಧಿಸಿದ ಸಚಿವರಿಗೆ ಒಂದೇ ಒಂದು ಪತ್ರ ಬರೆದಿಲ್ಲ, ಭೇಟಿ ಮಾಡಿಲ್ಲ. ಇಂದಿರಾ ಕ್ಯಾಂಟೀನನ್ನು ಮಲೆಬೆನ್ನೂರಿನಲ್ಲಿ ಸ್ಥಾಪಿಸಲು ಕಿರಿಕಿರಿ ಮಾಡಿದ್ದು ಇದೇ ಬಿ.ಪಿ.ಹರೀಶ್. ಈವರೆಗೆ ಒಂದೇ ಒಂದು ಆಶ್ರಯ ಸಮಿತಿ ಸಭೆ ಕರೆದಿಲ್ಲ. ತಮ್ಮ ಮನೆಗೆ ಅಧಿಕಾರಿಗಳನ್ನು ಕರೆಸಿ, ದಾಖಲೆಗಳಿಗೆ ಸಹಿ ಮಾಡುತ್ತಾರೆ. ಕಳೆದ 5 ತಿಂಗಳಿಂದ ಹರಿಹರದಲ್ಲಿ ಕೆಡಿಪಿ ಸಭೆ ಕರೆಯದ ಶಾಸಕ ಬಿ.ಪಿ.ಹರೀಶ ಸಾರ್ವಜನಿಕವಾಗಿ ನಗೆಪಾಟಲಿಗೀಡಾಗಿದ್ದಾರೆ. ಇಂತಹ ಶಾಸಕರ ಬಗ್ಗೆ ಕ್ಷೇತ್ರದ ಜನತೆ ರೋಸಿದ್ದಾರೆ ಎಂದು ಅವರು ನುಡಿದರು.

ಭದ್ರಾ ಕಾಲುವೆಯಿಂದ ಹರಿಹರ ಭಾಗದ ರೈತರಿಗೆ ಸಮರ್ಪಕವಾಗಿ ನೀರು ಸಿಗುತ್ತಿಲ್ಲ. ಒಂದು ಸಲವಾದರೂ ಭದ್ರಾ ನಾಲೆಗೆ ಭೇಟಿ ನೀಡಿ, ರೈತರ ಅಹವಾಲನ್ನು ಶಾಸಕ ಹರೀಶ ಆಲಿಸಿದ್ದಾರಾ? ನಾಲೆಯಲ್ಲಿ ತುಂಬಿರುವ ಹೂಳು ತೆಗೆಸುವ ಕೆಲಸ ಮಾಡಿದ್ದಾರಾ? ಭೈರನಪಾದ ಏತ ನೀರಾವರಿ ಯೋಜನೆಗೆ ಶಾಸಕರೇ ಅಡ್ಡಿಯಾಗಿದ್ದಾರೆ. ಬಗರ್ ಹುಕುಂ ಸಮಿತಿ, ಕೆಡಿಪಿ ಸಭೆ, ಆಶ್ರಯ ಸಮಿತಿ ಹೀಗೆ ಯಾವುದೇ ಸಭೆ ಮಾಡದ ಶಾಸಕ ಬಿ.ಪಿ.ಹರೀಶ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಕಚೇರಿ ಸಿದ್ಧವಾಗಿ 3 ತಿಂಗಳಾದರೂ ಉದ್ಘಾಟನೆಗೆ ಸಮಯ ನೀಡುತ್ತಿಲ್ಲ ಎಂದು ಅವರು ದೂರಿದರು.

ಹರಿಹರದ ರಸ್ತೆಗಳಲ್ಲಿನ ಗುಂಡಿ ಮುಚ್ಚಿಸಲು ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿಯವರನ್ನು ಭೇಟಿ ಮಾಡಿ, 10 ಕೋಟಿ ರೂ. ಅನುದಾನವನ್ನು ನಾನು ವೈಯಕ್ತಿಕ ಪ್ರಯತ್ನದಿಂದ ಬಿಡುಗಡೆ ಮಾಡಿಸಿದ್ದೇನೆ. ನಮ್ಮ ಕ್ಷೇತ್ರ ಪಕ್ಷಾತೀತವಾಗಿ ಅಭಿವೃದ್ಧಿ ಹೊಂದಬೇಕೆಂಬ ನಿರೀಕ್ಷೆ ನಮ್ಮದು. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಶಾಸಕರು ಕೆಲಸ ಮಾಡಲಿ. ಅಭಿವೃದ್ಧಿ, ಜನಪರ ಕೆಲಸಗಳ ವಿಚಾರದಲ್ಲಿ ರಾಜಕೀಯ ಮಾಡುವುದನ್ನು ಶಾಸಕ ಬಿ.ಪಿ.ಹರೀಶ ಮೊದಲು ನಿಲ್ಲಿಸಬೇಕು ಎಂದು ಅವರು ಸಲಹೆ ನೀಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನರಿಗೆ ಜಿಲ್ಲೆಯ ಅಭಿವೃದ್ಧಿ, ಶಾಶ್ವತ ಕಾಮಗಾರಿ ಕೈಗೊಳ್ಳಬೇಕೆಂಬ ಹುಚ್ಚು ಹಿಡಿದಿದೆ. ಆದರೆ, ಹರೀಶರಿಗೆ ಏನಾಗಿದೆ? ಇವರು ಹರಿಹರಕ್ಕೆ ಶಾಸಕರಾ ಅಥವಾ ಬೆಂಗಳೂರಿಗಾ? ಅಂತಾ ಕ್ಷೇತ್ರದ ಜನತೆ ವ್ಯಂಗ್ಯವಾಡುತ್ತಿದ್ದಾರೆ ಎಂದರು.

ಕಾಂಗ್ರೆಸ್ ಮುಖಂಡರಾದ ಮಂಜುನಾಥ ಪಾಟೀಲ್, ರಜನಿಕಾಂತ್, ಹಬೀದ್ ಅಲಿ, ಸೈಯದ್ ಜಾಕೀರ್, ದೇವರಬೆಳಕೆರೆ ಮಹೇಶಪ್ಪ, ಬಿ.ಹೆಚ್.ಶಿವಕುಮಾರ, ಬಿ.ಬಿ.ಮಲ್ಲೇಶ ಇತರರು ಸುದ್ದಿಗೋಷ್ಠಿಯಲ್ಲಿದ್ದರು.

# ಬಿಐಟಿಎಂ: ಒಂದು ದಿನದ ಕಾರ್ಯಾಗಾರ




**ಬಳ್ಳಾರಿ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ಆರ್‌ಎಎಂಪಿ ಯೋಜನೆಯಡಿ ನಗರದ ಅಲ್ಲೀಪುರದ ಬಳ್ಳಾರಿ ಇನ್ಸಿ ಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಮ್ಯಾನೇಜ್ ಮೆಂಟ್ (ಬಿಐಟಿಎಂ) ಕಾಲೇಜು ಸಭಾಂಗಣದಲ್ಲಿ ಇಂಕ್ಯುಬೇಶನ್ ಯೋಜನೆ ಕುರಿತು ಸೋಮವಾರ ಒಂದು ದಿನದ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ಬಳ್ಳಾರಿ ಇನ್ಸಿ ಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಮ್ಯಾನೇಜ್ ಮೆಂಟ್ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ರಾಘವೇಂದ್ರ ಜೋಷಿ ಅವರು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಬಿಐಟಿಎಂ ಕಾಲೇಜು ವತಿಯಿಂದ ಒಟ್ಟು 12 ಇಂಕ್ಯುಬೇಶನ್ ಚಟುವಟಿಕೆಗಳ ಕುರಿತು ಕಾರ್ಯಕ್ರಮ ಹಮ್ಮಿಕೊಂಡಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಗರಿಷ್ಠ ರೂ.03 ಲಕ್ಷದಂತೆ ಪ್ರೋತ್ಸಾಹಧನ ಪಡೆದಿದೆ ಎಂದು ಹೇಳಿದರು.

ಯುವ ಪೀಳಿಗೆಯು ಹೊಸ ವಿಷಯಗಳ ಮೇಲೆ ಅನ್ವೇಷಣೆ ಮಾಡುವ ಆಸಕ್ತಿ ಬೆಳೆಸಿಕೊಳ್ಳಬೇಕು. ಇಂತಹ ಕಾರ್ಯಗಾರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳಿಗೆ ಇಂಕ್ಯುಬೇಶನ್ ಸೌಲಭ್ಯಗಳು, ಯಶಸ್ಸಿನ ಕಥೆಗಳ ಬಗ್ಗೆ ಅರಿವು ಮೂಡಿಸಲಾಯಿತು ಹಾಗೂ ಉದ್ಯಮಿಗಳು ತಮ್ಮ ಅನುಭವ ಮತ್ತು ಅನಿಸಿಕೆ ಹಂಚಿಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್.ಬಿ.,

ಎಐಎಂಎಲ್ ಹೆಚ್‌ಓಡಿ ಡಾ.ಬಿ.ಎಂ.ವಿದ್ಯಾವತಿ, ಇನೊವೇಷನ್ ಸೆಂಟರ್ ಹೆಚ್ ಬ್ರೀಕ್ಸ್ ಡಾ.ಮಲ್ಲಿಕಾರ್ಜುನ.ಎ., ಪ್ರಾಧ್ಯಾಪಕಿ ಡಾ.ರೇಣುಕ ಸಾಗರ್, ಸಹಾಯಕ ಪ್ರಾಧ್ಯಾಪಕ ಜಯ ಪ್ರಕಾಶ್, ರಾಯಲ್‌ಗ್ ಇಂಡಸ್ಟ್ರೀಸ್‌ನ ಸಂಸ್ಥಾಪಕ ಹಾಗೂ ನಿರ್ದೇಶಕ ರಾಯಮಂಡ್ ಇರುದಯರಾಜ್ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಇತರರು ಭಾಗವಹಿಸಿದ್ದರು.

# ವಿವಿಧ ವಾರ್ಡ್ಗಳಲ್ಲಿ ಇ–ಆಸ್ತಿ ಆಂದೋಲನ

**ಶಿವಮೊಗ್ಗ:** ಸರ್ಕಾರದ ಆದೇಶದಂತೆ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿನ 35 ವಾರ್ಡ್ಗಳಲ್ಲಿ ಇ–ಆಸ್ತಿಯಲ್ಲಿ ನೋಂದಣಿ ಮಾಡಿಸುವುದು ಕಡ್ಡಾಯವಾಗಿದ್ದು ನ.11 ರಿಂದ ಡಿ.03 ರವರೆಗೆ ವಿವಿಧ ವಾರ್ಡುಗಳಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕೆಂದು ಮಹಾನಗರಪಾಲಿಕೆ ಆಯುಕ್ತರು ಕೋರಿದ್ದಾರೆ.

ಪಾಲಿಕೆ ವ್ಯಾಪ್ತಿಯ ಎಲ್ಲಾ ಆಸ್ತಿಗಳಿಗೆ ಇ–ಆಸ್ತಿ(ಇ–ಖಾತಾ) ಪಡೆಯುವುದು ಕಡ್ಡಾಯವಾಗಿದ್ದು ಆಸ್ತಿ ಮಾಲೀಕರು ಕರ್ನಾಟಕ ಒನ್/ಶಿವಮೊಗ್ಗ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದು ಅಥವಾ ಪಾಲಿಕೆಯ 3 ವಲಯ ಕಚೇರಿಗಳಲ್ಲಿ ಖುದ್ದಾಗಿ ಅರ್ಜಿ ಸಲ್ಲಿಸಬಹುದು, ಪಾಲಿಕೆ ಸಿಬ್ಬಂದಿಗಳು ಮನೆ–ಮನೆಗೆ ಭೇಟಿ ನೀಡಿದಾಗ ಸೂಕ್ತ ದಾಖಲೆಗಳನ್ನು ಒದಗಿಸಿ ಪಡೆಯಬಹುದು, ವಾರ್ಡ್ವಾರು 'ಇ–ಖಾತಾ ಮೇಳ' ದಲ್ಲಿ ಅರ್ಜಿ ಸಲ್ಲಿಸಬಹುದು ಹಾಗೂ Citizen Portal Link : https//eaasthi.karnataka.gov.in ಇಲ್ಲಿ ನೋಂದಣಿ ಮಾಡಿಕೊಂಡು ಅರ್ಜಿ ಸಲ್ಲಿಸಬಹುದು.

ಕಂದಾಯ ವಾರ್ಡ್ ಸಂಖ್ಯೆ 35 ಗಾಡಿಕೊಪ್ಪ ದಿ: 11–11–2025 ಅಗಮುಡಿ ಸಮಾಜ ಸೇವಾ ಸಂಘ, ಆಲ್ಕೊಳ ವೃತ್ತ. ವಾರ್ಡ್ ಸಂಖ್ಯೆ 34 ವಿನೋಬನಗರ ದಿ: 13–11–2025 ಆಟೋ ಕಾಂಪ್ಲೆಕ್ಸ್, ಪ್ಲಾಟ್ ನಂ 61, ಶ್ರೀ ಮಲ್ಲಿಕಾರ್ಜುನ ಆಗ್ರೋ, 1ನೇ ಮುಖ್ಯರಸ್ತೆ ಶಿವಮೊಗ್ಗ. ವಾರ್ಡ್ ಸಂಖ್ಯೆ 12 ಗುಡ್ಡೇಕಲ್ ದಿ: 13–11–2025 ಯೋಗಭವನ, 4ನೇ ತಿರುವು ಸಿದ್ದೇಶ್ವರ ನಗರ. ವಾರ್ಡ್ ಸಂಖ್ಯೆ 01 ಸಹ್ಯಾದ್ರಿ ನಗರ ದಿ: 15–11–2025 ತಮಿಳ್ ತಾಯಿ ಸಮುದಾಯ ಭವನ, ಜೆ ಹೆಚ್ ಪಟೇಲ್ ಲೇಔಟ್ ಸೋಮಿನಕೊಪ್ಪ ರಸ್ತೆ. ವಾರ್ಡ್ ಸಂಖ್ಯೆ 08 ಶಾಂತಿನಗರ ದಿ: 19–11–2025 ಗಣಪತಿ ದೇವಸ್ಥಾನ ಮುಂಭಾಗ, 2ನೇ ಮುಖ್ಯರಸ್ತೆ, ರಾಜಾಕಾಲುವೆ ಪಕ್ಕ ಕೃಷಿನಗರ. ವಾರ್ಡ್ ಸಂಖ್ಯೆ 31 ಹೊಸಮನೆ ದಿ: 19–11–2025 ಸಾರ್ವಜನಿಕ ಗ್ರಂಥಾಲಯ ಶರಾವತಿ ನಗರ. ವಾರ್ಡ್ ಸಂಖ್ಯೆ 16 ಊರುಗಡೂರು ದಿ: 24–11–2025 ಅಶ್ವಥ್ ಕಲಾ ವೇದಿಕೆ, ಪಾರ್ಕ್ ಆವರಣ, ಗಣಪತಿ ದೇವಸ್ಥಾನದ ಹತ್ತಿರ, ನಂಜಪ್ಪ ಲೇಔಟ್, ಬೈಪಾಸ್ ರಸ್ತೆ, ವಾರ್ಡ್ ಸಂಖ್ಯೆ 26 ಗೋಪಾಳ ದಿ: 26–11–2025 ದ್ರೌಪದಮ್ಮ ದೇವಸ್ಥಾನ ಸಭಾಭವನ ಗೋಪಾಳ. ವಾರ್ಡ್ ಸಂಖ್ಯೆ 27 ಮಿಳಘಟ್ಟ ದಿ: 03–12–2025 ಭಾರತೀಯ ಸಭಾ ಭವನ ಮುಖ್ಯರಸ್ತೆ ಆರ್‌ಎಂಎಲ್ ನಗರ ಇಲ್ಲಿ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆವರೆಗೆ ಅರ್ಜಿ ಸ್ವೀಕರಿಸಲಾಗುವುದು.

ಆಸ್ತಿ ಮಾಲೀಕರು, ಅರ್ಜಿ ಸಲ್ಲಿಸುವಾಗ ಮಾಲೀಕತ್ವ ಸಾಬೀತುಪಡಿಸುವ ದಾಖಲೆ, ಮಾಲೀಕರ ಭಾವಚಿತ್ರ ಮತ್ತು ಮಾಲೀಕರ ಗುರುತಿನ ಚೀಟಿ(ವೋಟರ್ ಐಡಿ/ಪ್ಯಾನ್ ಕಾರ್ಡ್/ರೇಷನ್ ಕಾರ್ಡ್/ಡ್ರೈವಿಂಗ್ ಲೈಸೆನ್ಸ್/ಪಾಸ್‌ಪೋಟ), ಕಟ್ಟಡದ/ನಿವೇಶನದ ಭಾವಚಿತ್ರ, ಕಟ್ಟಡ ಪರವಾನಗಿ ಪ್ರತಿ(ಇದ್ದಲ್ಲಿ), ವಿದ್ಯುತ್ ಬಿಲ್, ಇತೀಚಿನ ವರ್ಷದ ಕಂದಾಯ ಪಾವತಿ ರಶೀದಿಯನ್ನು ಸಲ್ಲಿಸಬೇಕು. ಎಂದು ಮಹಾನಗರಪಾಲಿಕೆ ಆಯುಕ್ತರಾದ ಮಾಯಣ್ಣ ಗೌಡ ತಿಳಿಸಿದ್ದಾರೆ.

## ನ.17 ರಂದು ದಿಶಾ ಸಭೆ

**ಹಾಸನ :** ಸಂಸದರಾದ ಶ್ರೇಯಸ್ ಎಂ ಪಟೇಲ್ ಅವರ ಅಧ್ಯಕ್ಷತೆಯಲ್ಲಿ ನ.17 ರಂದು ಬೆ.11 ಗಂಟೆಗೆ ಜಿಲ್ಲಾ ಪಂಚಾಯತ್ ಹೊಯ್ಸಳ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನಾ (ದಿಶಾ) ಸಭೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

# ಜಯನಗರ ಪೋಲೀಸ್ ಠಾಣೆ ಉದ್ಘಾಟನೆ ಜಯನಗರ ನಾಗರೀಕ ಹಿತರಕ್ಷಣಾ ಸಮಿತಿಯಿಂದ ಗೃಹಸಚಿವರಿಗೆ ಅಭಿನಂದನೆಗಳು

**ತುಮಕೂರು:** ಹತ್ತಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಜಯನಗರ ಪೋಲೀಸ್ ಠಾಣೆಯ ನೂತನ ಕಟ್ಟಡವನ್ನು ಸಪ್ತಗಿರಿ ಬಡಾವಣೆಯಲ್ಲಿ ನಿರ್ಮಿಸಿದ್ದು ನಿರ್ಮಾಣಗೊಂಡ ಕಟ್ಟಡವನ್ನು ಇಂದು ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಗೃಹಸಚಿವರಾದ ಡಾ॥ಜಿ.ಪರಮೇಶ್ವರ್ ರವರು ಉದ್ಘಾಟಿಸಿದರು.

ನಂತರ ಜಯನಗರ ನಾಗರೀಕ ಹಿತರಕ್ಷಣಾ ಸಮಿತಿಯ ಪ್ರಧಾನ ಕಾರ್ಯದರ್ಶಿಗಳಾದ ಆರ್. ಎಸ್.ವೀರಪ್ಪದೇವರು ರವರು ಮಾತನಾಡುತ್ತಾ ಈ ಹಿಂದೆ ಹತ್ತಾರು ವರ್ಷಗಳಿಂದ ಈ ಭಾಗದ ನಾಗರೀಕರು ಮತ್ತು ನಮ್ಮ ಜಯನಗರ ಹಿತರಕ್ಷಣಾ ಸಮಿತಿಯ ಮನವಿಯಂತೆ

ಗೃಹಸಚಿವರು ನೀಡಿದ ವಾಗ್ದಾನದಂತೆ ಸುಮಾರು ಒಂದು ವರ್ಷ 3ತಿಂಗಳುಗಳ ಕಾಲಾವಧಿಯಲ್ಲಿ ನಿರ್ಮಿಸಿ ಸ್ವತಃ ಗೃಹಸಚಿವರೇ ಉದ್ಘಾಟಿಸಿದ್ದು ನಮ್ಮ ಭಾಗ್ಯ,ಈ ಬಡಾವಣೆಯಲ್ಲಿ ಸಿಸಿ ಕೆಮೆರಾ ಅವಶ್ಯಕತೆ ಇದ್ದು ಮಹಾನಗರ ಪಾಲಿಕೆಯ ವತಿಯಿಂದ ಹಾಕಿಸಿಕೊಡಬೇಕು,ಹಾಲಿ ಇರುವ ಕಟ್ಟಡವು ನಮ್ಮ ಜಯನಗರ ಹಿತರಕ್ಷಣಾ ಸಮಿತಿಗೆ ಸೇರಿದ್ದಾಗಿದೆ,ಈ ಹಿಂದೆ ಈ ಕಟ್ಟಡವನ್ನು ನಾಗರೀಕ ಸಮಿತಿಯಿಂದ ನಿರ್ಮಿಸಿದ್ದು ಅದನ್ನು ತಾತ್ಕಾಲಿಕವಾಗಿ ಅಂದು



ಎಸ್.ಪಿ.ರವರ ಮನವಿಯಂತೆ ಪೋಲೀಸ್ ಠಾಣೆಗೆ ಬಿಟ್ಟುಕೊಟ್ಟಿದ್ದೆವು, ಆದ್ದರಿಂದ ನೂತನ ಪೋಲೀಸ್ ಠಾಣೆಗೆ ಜಯನಗರ ಪೋಲೀಸ್ ಠಾಣೆಯು ಹೋದ ತಕ್ಷಣವೇ ನಮಗೆ ನಾಗರೀಕರ ಅನುಕೂಲಕ್ಕಾಗಿ ಬಿಟ್ಟುಕೊಡಬೇಕೆಂದು ಗೃಹಸಚಿವರಾದ ಡಾ॥ಜಿ.ಪರಮೇಶ್ವರ್ ಮತ್ತು ನಗರ ಶಾಸಕರಾದ ಜಿ.ಬಿ.ಜ್ಯೋತಿಗಣೇಶ್ ರವರುಗಳಲ್ಲಿ ಮನವಿ ಮಾಡಿದರು.

ಜಯನಗರ ಹಿತರಕ್ಷಣಾ ಸಮಿತಿಯ ಉಪಾಧ್ಯಕ್ಷರಾದ ಬಿ.ವಿ.ದ್ವಾರಕಾನಾಥ್‌ರವರು ಮಾತನಾಡುತ್ತಾ ಹಾಲಿ ಇರುವ ಕಟ್ಟಡವನ್ನು ನಮ್ಮ ಸಮಿತಿಗೆ ಬಿಟ್ಟುಕೊಟ್ಟರೆ ನಾಗರೀಕರಿಗೆ ಬೆಳಗಿನ ಯೋಗತರಬೇತಿ,ವಾಚನಾಲಯ,ಹಿರಿಯ ನಾಗರೀಕರು ಒಂದೆಡೆ ಕುಳಿತು ನ್ಯೂಸ್ ಪೇಪರ್ ಓದಲು,ಮತ್ತು ಸಂಘದ ಇತರೆ ಚಟುವಟಿಕೆಗಳಿಗೆ ಸಹ ಅನುಕೂಲವಾಗುತ್ತದೆ ಆದ್ದರಿಂದ ತಕ್ಷಣವೇ ಹಾಲಿ ಕಟ್ಟಡವನ್ನು ನಮಗೆ ಬಿಟ್ಟುಕೊಡಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಡಾ॥ಎಸ್.ರಫೀಕ್ ಅಹಮದ್, ಮಹದೇವಯ್ಯ, ವೆಂಕಟೇಶ್, ರಮೇಶ್, ಗೋವಿಂದರಾಜು,ಎಸ್.ಪುಟ್ಟೀರಪ್ಪ,ಪಿ.ಕೆ.ರಾಘವೇಂದ್ರ,ಸತ್ಯಮೂರ್ತಿ,ಕೆ.ಆರ್. ಮಂಜುಳ,ಎಸ್.ಶ್ಯಾಮಲ ಇತರರು ಉಪಸ್ಥಿತರಿದ್ದರು.

# ಮತದಾರರ ಜಾಗೃತಿಗೆ ಒತ್ತಾಯ ಸಾಮಾಜಿಕ ಜಾಲತಾಣಗಳ ಸದುಪಯೋಗದಿಂದ ಯುವ ಮತದಾರರಲ್ಲಿ ಅರಿವು ಮೂಡಿಸಬೇಕು

ಗದಗ, ನ.10: ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ನಡೆದ ಮತದಾರರ ಜಾಗೃತಿ ಮತ್ತು ಪಾಲ್ಗೊಳ್ಳುವಿಕೆ (ಖಗಿಇಇಕ) ಸಭೆಯಲ್ಲಿ ಮುಂಬರುವ ಚುನಾವಣೆಗಳ ಹಿನ್ನೆಲೆಯಲ್ಲಿ ಮತದಾರರಲ್ಲಿ ಅರಿವು ಮೂಡಿಸುವ ಬಗ್ಗೆ ವಿಸ್ತೃತ ಚರ್ಚೆ ನಡೆಯಿತು.ಮತದಾರರ ಜಾಗೃತಿ ಮತ್ತು ಪಾಲ್ಗೊಳ್ಳುವಿಕೆಯ ರಾಜ್ಯದ ನೋಡಲ್ ಅಧಿಕಾರಿ ಪಿ.ಎಸ್. ವಸ್ತ್ರದ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

"ಚುನಾವಣೆಯು ಪ್ರಜಾಪ್ರಭುತ್ವದ ಹಬ್ಬ. ಪ್ರತಿಯೊಬ್ಬ ನಾಗರಿಕನು ತನ್ನ ಮತದಾನದ ಹಕ್ಕನ್ನು ಚಲಾಯಿಸುವ ಮೂಲಕ ರಾಷ್ಟ್ರ ನಿರ್ಮಾಣದಲ್ಲಿ ಪಾಲ್ಗೊಳ್ಳಬೇಕು. ಈ ನಿಟ್ಟಿನಲ್ಲಿ ಸರ್ಕಾರದ ವಿವಿಧ ಇಲಾಖೆ, ಶಿಕ್ಷಣ ಸಂಸ್ಥೆಗಳು, ಹಾಗೂ ಸಾಮಾಜಿಕ ಸಂಘಟನೆಗಳು ಒಟ್ಟಾಗಿ ಕೆಲಸ ಮಾಡಬೇಕು," ಎಂದು ಕರೆ ನೀಡಿದರು.

ಅವರು ಮುಂದುವರಿದು, "ಯುವ ಮತದಾರರು ಚುನಾವಣೆಯ ಪ್ರಮುಖ ಶಕ್ತಿ. ಅವರಲ್ಲಿ ಅರಿವು ಮೂಡಿಸಲು ಸಾಮಾಜಿಕ ಜಾಲತಾಣಗಳ ಸದ್ಬಳಕೆ ಮಾಡಿಕೊಳ್ಳಬೇಕು. ವಿಡಿಯೋ, ಪೋಸ್ಟರ್, ಸಣ್ಣ ಜಾಹೀರಾತುಗಳ ಮೂಲಕ ಮತದಾನದ ಮಹತ್ವವನ್ನು ತಲುಪಿಸಬೇಕು," ಎಂದು ಸಲಹೆ ನೀಡಿದರು.

ಅಧಿಕಾರಿಗಳು ಮತ್ತು ಸಿಬ್ಬಂದಿ ಸದಸ್ಯರಿಗೆ



ಮತದಾರರ ಶೇಕಡಾವಾರು ಹೆಚ್ಚಿಸುವ ಕಾರ್ಯವನ್ನು ಗುರಿಯನ್ನಾಗಿಸಿಕೊಂಡು ಕಾರ್ಯ ಯೋಜನೆ ರೂಪಿಸಬೇಕು ಎಂದು ಸೂಚಿಸಿದರು.ಅಧಿಕಾರಿಗಳು ತಮ್ಮ ತಮ್ಮ ವಿಭಾಗಗಳಲ್ಲಿ ಕೈಗೊಳ್ಳಬಹುದಾದ ಜಾಗೃತಿ ಕ್ರಮಗಳ ಬಗ್ಗೆ ಅಭಿಪ್ರಾಯ ವಿನಿಮಯ ಮಾಡಿದರು.ಶಾಲೆ–ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳು, ಮತದಾರರ ರ್‍ಯಾಲಿಗಳು, ಕಿರುಚಿತ್ರ ಪ್ರದರ್ಶನ, ಮತದಾರ ಪ್ರೋತ್ಸಾಹ ಸ್ಪರ್ಧೆಗಳು ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಹೇಳಿದರುಸಭೆಯಲ್ಲಿ ಮಹಿಳಾ ಮತ್ತು ಯುವ ಮತದಾರರ ಭಾಗವಹಿಸುವಿಕೆಯನ್ನು ಹೆಚ್ಚಿಸಲು ವಿಶೇಷ ಅಭಿಯಾನಗಳನ್ನು ರೂಪಿಸುವ ಅಗತ್ಯವಿದೆ ಎಂದು ಪಿ ಎಸ್ ವಸ್ತ್ರದ ತಿಳಿಸಿದರು.

ಪ್ರತ್ಯೇಕವಾಗಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಕುರಿತು ಸೂಚನೆ ನೀಡಲಾಯಿತು.ಸ್ವೀಪ್ ಅಭಿಯಾನವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಮೂಲಕ ಜಿಲ್ಲೆಯ ಮತದಾರರಲ್ಲಿ ಮತದಾನದ ಜಾಗೃತಿ ಮೂಡಿಸಿ, ಪ್ರಜಾಸತ್ತಾತ್ಮಕ ಚೇತನ ಹೆಚ್ಚಿಸುವುದು ಸಭೆಯ ಪ್ರಮುಖ ಉದ್ದೇಶ ಎಂದು ತಿಳಿಸಿದರು.ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಹಾಯಕ ಆಯುಕ್ತ ಗಂಗಪ್ಪ ಎಂ, ಆರ್ ಎಸ್ ಬುರಡಿ, ಶಿದ್ದಲಿಂಗ ಮಸಾನಾಯಕ, ಡಾ. ಎಸ್ ಎಸ್ ನೀಲಗುಂದ, ಪದ್ಮಾವತಿ ಜಿ, ಅಮಿತ್ ಬಿದರಿ, ವಸಂತ ಮಡ್ಲೂರ, ಶಿವಕುಮಾರ ಕುರಿಯವರ, ಶರಣು ಗೋಗೇರಿ, ಜಿ ಎಂ ಮುಂದಿನಮನಿ, ಕೆ ಮಹಾಂತೇಶ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ತಹಶೀಲ್ದಾರರು, ಶಿಕ್ಷಣ ಇಲಾಖೆಯ ಪ್ರತಿನಿಧಿಗಳು ಹಾಗೂ ಸ್ವೀಪ್ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಂಗ್ರೆಸ್‌ನ ಓಟ್ ಚೋರಿ ಆರೋಪ ಭೂತದ ಬಾಯಲ್ಲಿ ಭಗವದ್ಗೀತೆ ಕೇಳಿದಂತೆ: ಎಂ.ಪಿ.ಆರ್. ಲೇವಡಿ

**ದಾವಣಗೆರೆ:** ದೇಶದಲ್ಲಿ ಓಟ್ ಚೋರಿ ಮಾಡಿಕೊಂಡೆ 70 ವರ್ಷ ಆಡಳಿತ ನಡೆಸಿದ ಕಾಂಗ್ರೆಸ್ ಈಗ ಚುನಾವಣಾ ಆಯೋಗದ ವಿರುದ್ಧ ಓಟ್ ಚೋರಿ ಆರೋಪ ಮಾಡುತ್ತಿರುವುದು ಭೂತದ ಬಾಯಲ್ಲಿ ಭಗವದ್ಗೀತೆ ಕೇಳಿದಂತಿವೆ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಲೇವಡಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮತ ಕಳ್ಳತನ ಆರಂಭಿಸಿದ್ದೇ ಕಾಂಗ್ರೆಸ್ ಪಕ್ಷ. ಹೀಗಾಗಿ ಕಾಂಗ್ರೆಸ್ಸಿಗೆ ಓಟ್ ಚೋರಿ ಬಗ್ಗೆ ಮಾತನಾಡುವ ಯಾವುದೇ ನೈತಿಕತೆ ಇಲ್ಲ. ಮತಗಳ್ಳತನ ಮಾಡಿದ್ದರಿಂದಲೇ ಕಾಂಗ್ರೆಸ್ ಅನೇಕ ವರ್ಷಗಳ ಕಾಲ ಆಡಳಿತ ನಡೆಸುವುದು ಸಾಧ್ಯವಾಯಿತು ಎಂದರು.

ಮಾಜಿ ಪ್ರಧಾನಿ ಇಂದಿರಾ ಗಾಂಧಿ ಚುನಾವಣಾ ಪೂರ್ವದಲ್ಲಿ ಮಾಡಿದ ಅಕ್ರಮದಲ್ಲಿ ತಪ್ಪಿತಸ್ಥರೆಂಬುದು ನ್ಯಾಯಾಲಯದಲ್ಲಿ ಸಾಬೀತಾಗಿ ಲೋಕಸಭಾ ಸದಸ್ಯತ್ವ ಕಳೆದುಕೊಂಡು ಜೈಲಿಗೆ ಹೋಗುವ ಸಂದರ್ಭ ಬಂದಿತ್ತು.

ಅದರಿಂದ ತಪ್ಪಿಸಿಕೊಳ್ಳಲಿಕ್ಕಾಗಿಯೇ ದೇಶದ ಮೇಲೆ ತುರ್ತು ಪರಿಸ್ಥಿತಿ ಹೇರಿದ್ದನ್ನು ಜನ ಮರೆತಿಲ್ಲ.

ಇಂತಹವರ ಮೊಮ್ಮಗ ರಾಹುಲ್ ಗಾಂಧಿ ಕೇಂದ್ರ ಚುನಾವಣಾ ಆಯೋಗದ ವಿರುದ್ಧ ಮಾಡಿರುವ ಆರೋಪಗಳು ಭೂತದ ಬಾಯಲ್ಲಿ ಭಗವದ್ಗೀತೆ ಕೇಳಿದಂತಿವೆ ಎಂದು ಲೇವಡಿ ಮಾಡಿದರು.

ಚುನಾವಣಾ ಆಯೋಗವು ಸ್ವಾಯತ್ತ ಸಂಸ್ಥೆಯಾಗಿದ್ದು, ಅದರ ಮೇಲೆ ಯಾವುದೇ ಸರ್ಕಾರ ಅಧಿಕಾರ ಚಲಾಯಿಸಲು ಸಾಧ್ಯವಿಲ್ಲ. ಬಿಜೆಪಿ ಮತಗಳ್ಳತನ ಮಾಡಿದ್ದರೆ ಕರ್ನಾಟಕದಲ್ಲಿ ಕಾಂಗ್ರೆಸ್ 136 ಸ್ಥಾನ ಗೆದ್ದು ಅಧಿಕಾರಕ್ಕೆ ಬರುತ್ತಿರಲಿಲ್ಲ. ಕನಕಪುರದಲ್ಲಿ ಡಿ.ಕೆ.ಶಿವಕುಮಾರ್ 2 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಗೆದ್ದದ್ದು ಮತಗಳ್ಳತನವೇ? ವರುಣ ಕ್ಷೇತ್ರದಲ್ಲಿ ಸಿದ್ದರಾಮಯ್ಯ 40 ಸಾವಿರ ಮತಗಳ ಅಂತರದಿಂದ ಗೆದ್ದದ್ದು ಏನು? ಎಂದು ಅವರು ಪ್ರಶ್ನಿಸಿದರು.

ಸಿಎಂ ಸಿದ್ದರಾಮಯ್ಯನವರ ಆಪ್ತ ಸಿ.ಎಂ.ಇಬ್ರಾಹಿಂ 3 ಸಾವಿರ ಮತಗಳನ್ನು ಖರೀದಿ ಮಾಡಿದ್ದೇವೆ ಅಂತಾ ಹೇಳಿದ್ದರು. ಅದರ ಬಗ್ಗೆ ರಾಹುಲ್ ಗಾಂಧಿ ಮೌನವಾಗಿರುವುದು ಏಕೆ? ರಾಹುಲ್ ಗಾಂಧಿ ಮಾತುಗಳನ್ನು ಕಾಂಗ್ರೆಸ್ ಪಕ್ಷದಲ್ಲಿಯೇ ಯಾರೂ ನಂಬುವುದಿಲ್ಲ. ಸಿದ್ದರಾಮಯ್ಯ ಕುರ್ಚಿ ಕಳೆದುಕೊಳ್ಳುವ ಭೀತಿಯಲ್ಲಿದ್ದಾರೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಲು ಮತಗಳ್ಳತನ ವಿರುದ್ಧ ಸಹಿ ಸಂಗ್ರಹಿಸುವ ಪ್ರಹಸನದ ಅಭಿಯಾನ ಆರಂಭಿಸಿದ್ದಾರೆ ಎಂದು ಹೇಳಿದರು.

ನಾವು ಕೂಡ ಕಾಂಗ್ರೆಸ್ಸಿಗಿಂತ ಮೂರು ಪಟ್ಟು ಸಹಿ ಸಂಗ್ರಹಿಸುವ ಸಾಮರ್ಥ್ಯ ಹೊಂದಿದ್ದೇವೆ. ಓಟ್ ಚೋರಿ ಆರೋಪ ನಿಜವಾಗಿದ್ದರೆ ಕಾಂಗ್ರೆಸ್ ನಾಯಕರು ಚುನಾವಣಾ ಆಯೋಗ ಅಥವಾ ನ್ಯಾಯಾಲಯಕ್ಕೆ ದೂರು ನೀಡಲಿ. ಬಿಹಾರ ಚುನಾವಣಾ ಫಲಿತಾಂಶ ಬಂದ ನಂತರ ಇವೆಲ್ಲಾ ನಾಟಕ ಮುಗಿಯುತ್ತವೆ ಎಂದು ಅವರು ನುಡಿದರು.

ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳು ಸಂಪೂರ್ಣವಾಗಿ ನಿಂತುಹೋಗಿವೆ. ಸಿಎಂ ಸಿದ್ದರಾಮಯ್ಯ ಗ್ಯಾರಂಟಿಗಳ ಭ್ರಮೆಯಲ್ಲಿ ರಾಜ್ಯವನ್ನು ನರಕದ ಪರಿಸ್ಥಿತಿಗೆ ತಳ್ಳಿದ್ದಾರೆ. ಈ ಮಧ್ಯೆ ರಾಜ್ಯ ರಾಜಕೀಯದಲ್ಲಿ ಬಿರುಕು ಕಾಣಿಸುತ್ತಿದೆ. ಒಳ ಜಗಳದಲ್ಲಿ ಸರ್ಕಾರ ಪತನವಾಗುತ್ತದೆ ಅಂತಾ ಕಾಂಗ್ರೆಸ್ ಹಿರಿಯ ನಾಯಕರೇ ಹೇಳುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನಡುವಿನ ಅಸಮಾಧಾನ, ಒಳಜಗಳದಿಂದ ಕಾಂಗ್ರೆಸ್ ಸರ್ಕಾರ ನವಂಬರ್ 26ರೊಳಗೆ ಪತನವಾಗುವುದು ಖಚಿತ. ಕಾದು ನೋಡಿ ಎಂದು ಅವರು ಭವಿಷ್ಯ ನುಡಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ರಾಜು ವೀರಣ್ಣ, ಪ್ರವೀಣ್ ಜಾಧವ್, ಮಂಜು ಪೈಲ್ವಾನ್ ಮತ್ತಿತರರು ಹಾಜರಿದ್ದರು.

# ಬಾಡಿಗೆಗೆ ಕಟ್ಟಡ ಬೇಕಾಗಿದೆ.

**ದಾವಣಗೆರೆ:** ನಗರ ವ್ಯಾಪ್ತಿಯಲಿ ಹೊಸದಾಗಿ ಮಂಜೂರಾಗಿರುವ 2 ಮೆಟ್ರಿಕ್ ನಂತರ ಇಂಜನಿಯರಿಂಗ್ ಮತ್ತು ವೈದ್ಯಕೀಯ ಮಹಿಳಾ, ಪುರುಷರ ವಿದ್ಯಾರ್ಥಿ ನಿಲಯಗಳಿಗೆ ದಾವಣಗೆರೆ ನಗರದಲ್ಲಿ ಬಾಡಿಗೆ ಕಟ್ಟಡಗಳ ಅವಶ್ಯಕತೆ ಇರುತ್ತದೆ.

ಕಟ್ಟಡಗಳು ಅಗತ್ಯ ಮೂಲಭೂತ ಸೌಲಭ್ಯವಿರುವ ಕಟ್ಟಡದ ಮಾಲಿಕರು ಅಗತ್ಯ ದಾಖಲೆಗಳೊಂದಿಗೆ ನವಂಬರ್ 15 ರೊಳಗಾಗಿ ಅಂಚೆ ಮೂಲಕ, ಖುದ್ದಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗೆ ತಾಲ್ಲೂಕು ಕಲ್ಯಾಣಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜೆ.ಮಲ್ಲಿಕಾರ್ಜುನಪ್ಪ ದ್ವಿಪಥ ರಸ್ತೆ, (ಹೊಸ ರಿಂಗ್ ರಸ್ತೆ) ಶ್ರೀಮತಿ ರತ್ನಮ್ಮ ತೆಲಗಿ ಸಿದ್ದೇಶಿ ರೆಸಿಡೆನ್ಸಿಯಲ್ ಲೇ ಔಟ್, ಶ್ರೀ ದೇವರಾಜ ಅರಸು ಭವನ. ದಾವಣಗೆರೆ ಇವರನ್ನು ಸಂಪರ್ಕಿಸಲು ತಾಲ್ಲೂಕು ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಅವಧಿ ವಿಸ್ತರಣೆ

**ದಾವಣಗೆರೆ :** ಮಾಜಿ ದೇವದಾಸಿ ಮಹಿಳೆಯರು ಮತ್ತು ಅವರ ಕುಟುಂಬಗಳಿಂದ ಮರುಸಮೀಕ್ಷೆಗೆ ಅರ್ಜಿ ಸಲ್ಲಿಸುವ ಅವಧಿಯನ್ನು ನವಂಬರ್ 21 ರವರೆಗೆ ವಿಸ್ತರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

# ಆರೋಗ್ಯಕರ ಜೀವನ ಶೈಲಿಯಿಂದ ಕ್ಯಾನ್ಸರ್ ರೋಗ ತಡೆಗಟ್ಟಬಹುದು: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು

**ಬಳ್ಳಾರಿ:** ಆರೋಗ್ಯಕರ ಜೀವನ ಶೈಲಿಯಿಂದ ಕ್ಯಾನ್ಸರ್ ರೋಗವನ್ನು ತಡೆಗಟ್ಟಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

2014 ರಲ್ಲಿ ಪ್ರಾರಂಭಿಸಲಾದ ರಾಷ್ಟ್ರೀಯ ಕ್ಯಾನ್ಸರ್ ಜಾಗೃತಿ ದಿನವನ್ನು ಪ್ರತಿ ವರ್ಷ ನವೆಂಬರ್ 7 ರಂದು ಆಚರಿಸಲಾಗುತ್ತದೆ. ಕ್ಯಾನ್ಸರ್ ತಡೆಗಟ್ಟುವಿಕೆ, ಕ್ಯಾನ್ಸರ್‌ನ ವಿವಿಧ ರೂಪಗಳು, ಅಪಾಯಕಾರಿ ಅಂಶಗಳು ಮತ್ತು ತಡೆಗಟ್ಟುವಿಕೆ, ಕ್ಯಾನ್ಸರ್ ಲಕ್ಷಣಗಳನ್ನು ಮೊದಲೇ ಪತ್ತೆ ಹಚ್ಚುವುದು ಮತ್ತು ಚಿಕಿತ್ಸೆಯ ಮಹತ್ವದ ಬಗ್ಗೆ ಜನರಿಗೆ ಮಾಹಿತಿಯನ್ನು ನೀಡುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

*ಮುಂಜಾಗ್ರತೆ ವಹಿಸಬೇಕಾದ ಕ್ರಮ:*

ಧೂಮಪಾನ ಮತ್ತು ತಂಬಾಕು ಸೇವನೆಯು ಬಾಯಿ ಕ್ಯಾನ್ಸರ್ ಮತ್ತು ಶ್ವಾಸಕೋಶ ಕ್ಯಾನ್ಸರ್‌ಗಳಿಗೆ ಪ್ರಮುಖ ಕಾರಣವಾಗಿದ್ದು, ಅತಿಯಾದ ಮದ್ಯಪಾನ ಯಕೃತ್ತು, ಸ್ತನ ಮತ್ತು ಜೀರ್ಣಾಂಗಗಳ ಕ್ಯಾನ್ಸರ್ ಉಂಟಾಗಬಹುದು. ಹಾಗಾಗಿ ಅವುಗಳಿಂದ ದೂರವಿರಬೇಕು ಎಂದಿದ್ದಾರೆ.

ಆರೋಗ್ಯಕರ ಆಹಾರ, ಹಣ್ಣುಗಳು, ತರಕಾರಿಗಳು, ಧಾನ್ಯಗಳಿಂದ ಸಮೃದ್ಧವಾಗಿರುವ ಸಮತೋಲಿತ ಆಹಾರ



ಸೇವಿಸಬೇಕು. ಸಂಸ್ಕರಿಸಿದ ಆಹಾರ ಕಡಿಮೆ ಮಾಡಬೇಕು. ನಿಯಮಿತ ದೈಹಿಕ ಚಟುವಟಿಕೆ ಮಾಡುವುದರಿಂದ ಕ್ಯಾನ್ಸರ್ ಅಪಾಯ ತಡೆಗಟ್ಟಬಹುದಾಗಿದೆ.

ಸೂರ್ಯನ ಬೆಳಕಿಗೆ ಒಡ್ಡಿಕೊಳ್ಳುವುದನ್ನು ತಪ್ಪಿಸಬೇಕು. ಚರ್ಮದ ಕ್ಯಾನ್ಸರ್‌ಗೆ ತಡೆಗಟ್ಟಲು ಹಾನಿಕಾರಕ ಯುವಿ ಕಿರಣಗಳಿಂದ ಚರ್ಮವನ್ನು ರಕ್ಷಿಸಿಕೊಳ್ಳಬೇಕು. ನಿಯಮಿತ ಮಮೊಗ್ರಾಮ್‌ಗಳು, ಪ್ಯಾಪ್ ಸ್ಮೀಯರ್‌ಗಳು ಮತ್ತು ಕೊಲೊನೋಸ್ಕೋಪಿಗಳಂತಹ ಸ್ಕ್ರೀನಿಂಗ್ ಗಳನ್ನು ಆಗಾಗ ಮಾಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ.

ಪ್ರಸ್ತುತ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತಿ ಸೋಮವಾರ ಹಾಗೂ ಗುರುವಾರ ದಿನಗಳಂದು ಹುಬ್ಬಳ್ಳಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಿಂದ ಕ್ಯಾನ್ಸರ್ ತಜ್ಞ ವೈದ್ಯರಿಂದ ಆರೋಗ್ಯ ತಪಾಸಣೆ ನಡೆಸಲಾಗುತ್ತದೆ ಮತ್ತು ಕಿಮೋಥೆರಫಿ ಚಿಕಿತ್ಸೆ ನೀಡಲಾಗುತ್ತದೆ. ಜಿಲ್ಲಾ ಆಸ್ಪತ್ರೆಯಲ್ಲಿ ಕೀಮೋಥೆರಫಿ ಚಿಕಿತ್ಸೆ ಪಡೆಯುವ ರೋಗಿಗಳಿಗೆ ವಾರ್ಡ್ನ ಸೌಲಭ್ಯವಿದೆ.

ಪ್ರಸ್ತುತ ವರ್ಷ ಏಪ್ರೀಲ್ ನಿಂದ ಅಕ್ಟೋಬರ್ ತಿಂಗಳವರೆಗೆ ತಪಾಸಣೆಯಾದ ಒಟ್ಟು ಕ್ಯಾನ್ಸರ್ ಪ್ರಕರಣಗಳು–96, ಕೀಮೋಥೆರಫಿ ಚಿಕಿತ್ಸೆಯಲ್ಲಿರುವ ಒಟ್ಟು ಪ್ರಕರಣ–45, ಬಾಯಿ ಕ್ಯಾನ್ಸರ್–14, ಗರ್ಭಕಂಠದ ಕ್ಯಾನ್ಸರ್–16, ಯಕೃತ್ ಕ್ಯಾನ್ಸರ್–2, ಅಂಡಾಶಯ ಕ್ಯಾನ್ಸರ್–4, ಶ್ವಾಸಕೋಶ ಕ್ಯಾನ್ಸರ್–1, ಸ್ತನ ಕ್ಯಾನ್ಸರ್–8 ಪ್ರಕರಣಗಳು ಕಂಡುಬಂದಿವೆ ಎಂದು ಡಿಹೆಚ್‌ಓ ಮಾಹಿತಿ ನೀಡಿದ್ದಾರೆ.

ತಾಲ್ಲೂಕು ಮಟ್ಟದಲ್ಲಿ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ ಸಾರ್ವಜನಿಕರಿಗೆ ವಿವಿಧ ಹಂತಗಳಲ್ಲಿ ಕ್ಯಾನ್ಸರ್ ಕುರಿತು ಜಾಗೃತಿ ಬಗ್ಗೆ ಅರಿವು ಮೂಡಿಸಲಾಗುತ್ತಿದ್ದು, ಖಾಸಗಿ ಸಂಸ್ಥೆಗಳ ಸಹಯೋಗದೊಂದಿಗೆ ಕ್ಯಾನ್ಸರ್ ಜಾಗೃತಿ ಹಾಗೂ ಆರೋಗ್ಯ ತಪಾಸಣೆ ನಡೆಸಲಾಗುತ್ತಿದೆ. ಸಾರ್ವಜನಿಕರು ಇದರ ಕುರಿತು ಮಾಹಿತಿ ಪಡೆದು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಟಿಟಿಡಿ ಲಡ್ಡುವಿನಲ್ಲಿ ನಕಲಿ ತುಪ್ಪ ಬಳಕೆ : ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ ಎಂದ ಪರಿಷತ್ ಸದಸ್ಯ ಶರವಣ

**ಬೆಂಗಳೂರು:** ತಿರುಪತಿ ಲಡ್ಡು ಪ್ರಸಾದ ತಯಾರಿಕೆಯಲ್ಲಿ ನಕಲಿ ತುಪ್ಪ ಬಳಸಿರುವುದು ಖಚಿತವಾಗಿದ್ದು, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಟಿ.ಎ.ಶರವಣ ಒತ್ತಾಯಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಇದು ಕೋಟ್ಯಂತರ ಹಿಂದೂ ಭಕ್ತರ ಭಾವನೆಗಳಿಗೆ ಧಕ್ಕೆ ತಂದಿರುವ ಗಂಭೀರ ಪ್ರಕರಣವಾಗಿದೆ. ತಿರುಪತಿ ತಿರುಮಲ ದೇವಸ್ಥಾನ (ಟಿಟಿಡಿ)ದಲ್ಲಿ ತಯಾರಾಗುವ ಲಡ್ಡು ಪ್ರಸಾದದಲ್ಲಿ ಕೋಟ್ಯಂತರ ರೂಪಾಯಿ ಮೌಲ್ಯದ ನಕಲಿ ತುಪ್ಪ ಬಳಕೆಯಾಗಿರುವುದು ಎಸ್‌ಐಟಿ ತನಿಖೆಯಲ್ಲಿ ದೃಢಪಟ್ಟಿದೆ.

250 ಕೋಟಿ ರೂ.ಗೂ ಅಧಿಕ ಮೌಲ್ಯದ 68 ಲಕ್ಷ ಕೆ.ಜಿ. ನಕಲಿ ತುಪ್ಪವನ್ನು ಬಳಸಿರುವುದು ತನಿಖೆಯಿಂದ ದೃಢಪಟ್ಟಿದ್ದು, ಇದು ಖಂಡನೀಯ ಎಂದಿದ್ದಾರೆ.

ಅಕ್ರಮಕ್ಕೆ ಕಾರಣರಾದವರ ವಿರುದ್ಧ ಸಿಬಿಐ ಮತ್ತು ಆಂಧ್ರ ಪೊಲೀಸರ ತನಿಖೆಯ ಆಧಾರದ ಮೇಲೆ ಸೂಕ್ತ ಶಿಕ್ಷೆ ಆಗಬೇಕು ಎಂದು ಆಗ್ರಹಿಸಿರುವ ಅವರು, ಟಿಟಿಡಿ ಲಡ್ಡುಗಳಲ್ಲಿ ಕೊಬ್ಬಿನಂಶ ಹಾಗೂ ಕಳಪೆ ಪದಾರ್ಥಗಳನ್ನು ಬಳಸಲಾಗಿದೆ ಎಂಬ ಆರೋಪವೂ ತನಿಖೆಯಲ್ಲಿ ದೃಢವಾಗಿದೆ. ಇಂತಹ ಕೆಲಸ ಮಾಡಿದವರಿಗೆ ಯಾವುದೇ ಕ್ಷಮೆ ಇರಬಾರದು ಎಂದರು.

ನಂದಿನಿ ತುಪ್ಪ ಬಳಕೆಗೆ ಮನವಿ:

ಪ್ರಸಾದದ ಗುಣಮಟ್ಟ ಕಾಪಾಡಲು, ನಮ ರಾಜ್ಯದ ಪ್ರಖ್ಯಾತ ಮತ್ತು ಗುಣಮಟ್ಟದ ನಂದಿನಿ ತುಪ್ಪವನ್ನು ಎಷ್ಟು ಬೇಕಾದರೂ ಪೂರೈಸಲು ಕರ್ನಾಟಕ ಸರ್ಕಾರ ಸಿದ್ಧವಿದೆ. ಆಂಧ್ರ ಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಮತ್ತು ಟಿಟಿಡಿ ಆಡಳಿತವು ನಂದಿನಿ ತುಪ್ಪವನ್ನೆ ಬಳಸಬೇಕು ಎಂದು ಶರವಣ ಅವರು ಮನವಿ ಮಾಡಿದ್ದಾರೆ.

# ದೆಹಲಿ ಸ್ಫೋಟ ಹಿನ್ನಲೆ : ಕರ್ನಾಟಕದಲ್ಲೂ ಹೈ ಅಲರ್ಟ್, ಬೆಂಗಳೂರಿನ ಮೆಟ್ರೊ–ರೈಲು–ಬಸ್ ನಿಲ್ದಾಣಗಳಲ್ಲಿ ಪರಿಶೀಲನೆ

**ಬೆಂಗಳೂರು:** ದೆಹಲಿಯ ಕೆಂಪುಕೋಟೆ ಬಳಿ ಬಾಂಬ್ ಸ್ಫೋಟದ ಬೆನ್ನಲ್ಲೆ ರಾಜ್ಯದಲ್ಲೂ ಕಟ್ಟೆಚ್ಚರ ಕ್ರಮಗಳನ್ನು ತೆಗೆದುಕೊಳ್ಳಲಾಗಿದ್ದು, ಜನನಿಬಿಡ ಸ್ಥಳಗಳಲ್ಲಿ ತಪಾಸಣೆ, ಅನುಮಾನಾಸ್ಪದ ವ್ಯಕ್ತಿಗಳು ಹಾಗೂ ವಾಹನಗಳನ್ನು ಪರಿಶೀಲನೆ ನಡೆಸಲಾಗುತ್ತಿದೆ.

ಬೆಂಗಳೂರಿನ ಮೆಟ್ರೊ, ರೈಲು ಹಾಗೂ ಬಸ್ ನಿಲ್ದಾಣಗಳಲ್ಲಿ ಶ್ವಾನದಳ ಮತ್ತು ಬಾಂಬ್ ಪತ್ತೆ ದಳ ಪರಿಶೀಲನೆ ನಡೆಸಿದೆ. ಶ್ವಾನಗಳು ಪ್ರತಿಯೊಂದು ಮೂಲೆಯಲ್ಲೂ ಪರಿಶೀಲನೆ ನಡೆಸಿವೆ. ಶಸ್ತ್ರಸಜ್ಜಿತ ಸಿಬ್ಬಂದಿಗಳ ಗಸ್ತು ಹೆಚ್ಚಿಸಲಾಗಿದೆ. ಅನುಮಾನಾಸ್ಪದ ಲಗೇಜ್‌ಗಳನ್ನು ತಪಾಸಣೆ ನಡೆಸಿದ್ದಾರೆ.

ಅಲ್ಲಲ್ಲಿ ಬ್ಯಾರಿಕೇಡ್‌ಗಳನ್ನು ಹಾಕಿ, ಅನುಮಾನಾಸ್ಪದ ವಾಹನಗಳನ್ನು ಪರಿಶೀಲನೆ ನಡೆಸಲಾಗಿದೆ. ದೆಹಲಿಯ ಜನನಿಬಿಡ ಸ್ಥಳದ ಸಂಚಾರಿ ದೀಪದ ಬಳಿ ನಿಂತಿದ್ದ ಹುಂಡೈ ಐ–20 ಕಾರು ಸ್ಫೋಟಗೊಂಡಿದ್ದರಿಂದ ಹೊಸ ಮಾದರಿಯ ದುಷ್ಕೃತ್ಯಗಳ ಸಂಚು ಕಂಡು ಬಂದಿದೆ. ವಿದೇಶಗಳಲ್ಲಿ ಕಂಡು ಬರುತ್ತಿದ್ದಂತಹ ಈ ರೀತಿಯ ಸಂಚುಗಳು ಈಗ ಭಾರತದಲ್ಲೂ ಘಟಿಸಿರುವುದು ದೊಡ್ಡ ಸವಾಲನ್ನು ತಂದೊಡ್ಡಿವೆ.

ಬೆಂಗಳೂರು ಸೇರಿದಂತೆ ಮಹಾನಗರಗಳಲ್ಲಿ ಸಂಚಾರ ದಟ್ಟಣೆಯ ನಡುವೆ ಈ ರೀತಿಯ ಅಪಾಯಕಾರಿ ವಾಹನಗಳನ್ನು ಪತ್ತೆ ಹಚ್ಚುವುದು ಕಷ್ಟ ಸಾಧ್ಯವಾಗಿದೆ. ಆದರೂ ಪೊಲೀಸರು



ಸಿಸಿಟಿವಿಗಳ ಮೂಲಕ ಅನುಮಾನಾಸ್ಪದ ವಾಹನಗಳ ಮೇಲೆ ನಿಗಾವಹಿಸಿದ್ದಾರೆ. ರಾಜ್ಯದ ಇತರ ಪ್ರದೇಶಗಳಲ್ಲೂ ಕಟ್ಟುನಿಟ್ಟಿನ ತಪಾಸಣೆ ಆರಂಭಿಸಲಾಗಿದೆ.

ಪೊಲೀಸರು ನಿನ್ನೆ ರಾತ್ರಿಯಿಂದಲೇ ಗಸ್ತನ್ನು ಹೆಚ್ಚಿಸಿದ್ದಾರೆ. ರಜೆಯಲ್ಲಿದ್ದ ಸಿಬ್ಬಂದಿಗಳನ್ನು ವಾಪಸ್ ಕರೆಸಿಕೊಂಡು ಭದ್ರತೆಗೆ ನಿಯೋಜಿಸಲಾಗಿದೆ. ರ್‍ಯಾಪಿಡ್ ಆಕ್ಷನ್ ಫೋರ್ಸ್, ಸಿಎಆರ್ ಸೇರಿದಂತೆ ಇತರ ದಳಗಳನ್ನು ಸೂಕ್ಷ್ಮ ಪ್ರದೇಶಗಳಿಗೆ ನಿಯೋಜಿಸಲಾಗಿದೆ. ವಸತಿ ಗೃಹಗಳಲ್ಲಿ ತಂಗಿರುವ ಅನುಮಾನಾಸ್ಪದ ವ್ಯಕ್ತಿಗಳ ದಾಖಲೆಗಳನ್ನು ಪೊಲೀಸರು ಪರಿಶೀಲನೆ ನಡೆಸಿದ್ದಾರೆ. ಗುಪ್ತದಳದ ಸಿಬ್ಬಂದಿಗಳಿಗೆ ಸೂಕ್ಷ್ಮತೆಯಿಂದ ಕೆಲಸ ನಿರ್ವಹಿಸಲು ಆದೇಶಿಸಲಾಗಿದೆ.

ವಿಮಾನ ನಿಲ್ದಾಣದಲ್ಲಿ ಭದ್ರತೆಯ ಪದರಗಳನ್ನು ಮತ್ತಷ್ಟು ತೀವ್ರಗೊಳಿಸಲಾಗಿದೆ. ಅಪರಿಚಿತ ಹಾಗೂ ಅನುಮಾನಾಸ್ಪದ ವಸ್ತುಗಳತ್ತ ತಕ್ಷಣ ಗಮನ ಹರಿಸಲು ಸಿಬ್ಬಂದಿಗಳಿಗೆ ಸೂಚಿಸಲಾಗಿದೆ.ಚಿತ್ರಮಂದಿರಗಳು, ವಾಣಿಜ್ಯ ಸಂಕೀರ್ಣಗಳು, ಮಾರುಕಟ್ಟೆ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಕಚೇರಿಗಳಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದೆ.

# ಚಂಡಮಾರುತ ಪರಿಹಾರ ಕಾರ್ಯಾಚರಣೆ ವೇಳೆ ಸಣ್ಣ ವಿಮಾನ ಪತನ, ಇಬ್ಬರ ಸಾವು

**ಫ್ಲೋರಿಡಾ:** ಜಮೈಕಾದ ಚಂಡಮಾರುತ ಪರಿಹಾರ ಕಾರ್ಯಾಚರಣೆಯಲ್ಲಿದ್ದ ಸಣ್ಣ ಟರ್ಬೊಪ್ರೊಪ್ ವಿಮಾನವು ಫೋರ್ಟ್ ಲಾಡರ್‌ಡೇಲ್ ಉಪನಗರ ಕೋರಲ್ ಸ್ಪ್ರಿಂಗ್ಸ್‌ನ ಗೇಟೆಡ್ ವಸತಿ ನೆರೆಹೊರೆಯಲ್ಲಿರುವ ಕೊಳಕ್ಕೆ ಅಪ್ಪಳಿಸಿತು ಇಬ್ಬರು ಸಾವನ್ನಪ್ಪಿದ್ದಾರೆ. ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ಕಾಣೆಯಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೋರಲ್ ಸ್ಪ್ರಿಂಗ್‌ಪೊಲೀಸ್ ಇಲಾಖೆ ತನ್ನ ಹೇಳಿಕೆಯಲ್ಲಿ ಸಾವುಗಳನ್ನು ದೃಢಪಡಿಸಿದೆ. ಆದರೆ ಪೊಲೀಸರು ವಿಮಾನದಲ್ಲಿದ್ದವರ ಬಗ್ಗೆ ಹೆಚ್ಚಿನ ವಿವರಗಳನ್ನು ನೀಡಲಿಲ್ಲ .

ಅಗ್ನಿಶಾಮಕ ಇಲಾಖೆಯ ಉಪ ಮುಖ್ಯಸ್ಥ ಮೈಕ್ ಮೋಸರ್ ಅವರು ಅಪಘಾತದ ಬಗ್ಗೆ ವರದಿ ಮಾಡಿದ ಕರೆ ಬಂದ ಕೆಲವೇ ನಿಮಿಷಗಳಲ್ಲಿ ತುರ್ತು ಸಿಬ್ಬಂದಿ ಪ್ರತಿಕ್ರಿಯಿಸಿದರು ಎಂದು ಹೇಳಿದರು.

ಆರಂಭದಲ್ಲಿ, ರಕ್ಷಣಾ ಪ್ರಯತ್ನಗಳ



ಸಮಯದಲ್ಲಿ ಯಾವುದೇ ಶವ ಪತ್ತೆಯಾಗಿಲ್ಲ

ನೆಲದಲ್ಲಿನ ಯಾವುದೇ ಮನೆಗಳು ಹಾನಿಗೊಳಗಾಗಿಲ್ಲ ಎಂದು ಮೋಸರ್ ಹೇಳಿದರು, ಆದರೆ ಸಿಬ್ಬಂದಿ ಧಾರಣ ಕೊಳದ ಬಳಿ ಕೆಲವು ಅವಶೇಷಗಳನ್ನು ಗುರುತಿಸಿದರು. ವಿಮಾನವು ನೀರಿಗೆ ಅಪ್ಪಳಿಸುವ ಮೊದಲು ಮನೆಯೊಂದರ ಬೇಲಿ ನಾಶವಾಯಿತು ಮತ್ತು ತಾಳೆ ಮರಗಳು ಮುರಿದು ಬಿದ್ದವು ಎಂದು ಕೆನ್ನೆತ್ ಡೆಟೊಲಿಯೊ ಸೌತ್ ಫ್ಲೋರಿಡಾ ಸನ್ ಸೆಂಟಿನೆಲ್‌ಗೆ ತಿಳಿಸಿದರು.

ಫೋರ್ಟ್ ಲಾಡರ್‌ಡೇಲ್ ಕಾರ್ಯನಿರ್ವಾಹಕ ವಿಮಾನ ನಿಲ್ದಾಣದಿಂದ ಸುಮಾರು ಬೆಳಿಗ್ಗೆ 10:14 ಕ್ಕೆ ಸಣ್ಣ ಬೀಚ್‌ಕ್ರಾಫ್ಟ್ ಕಿಂಗ್ ಏರ್ ವಿಮಾನವು ಹಾರಿತು ಎಂದು ಫೋರ್ಟ್ ಲಾಡರ್‌ಡೇಲ್ ನಗರದ ವಕ್ತಾರರು ತಿಳಿಸಿದ್ದಾರೆ, ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ದಾಖಲೆಗಳ ಪ್ರಕಾರ, ವಿಮಾನವನ್ನು 1976 ರಲ್ಲಿ ತಯಾರಿಸಲಾಯಿತು. ವಿಮಾನ ಮಾಲೀಕರು ಮತ್ತು ಪೈಲಟ್‌ಗಳ ಸಂಘದ ಪ್ರಕಾರ, ಕಿಂಗ್ ಏರ್ ಮಾದರಿಗಳು ಏಳು ರಿಂದ 12 ಜನರು ಕುಳಿತುಕೊಳ್ಳಬಹುದು.

**ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ ಎಫ್. ಸಿ. ನ್ಯಾಯಾಲಯ ಜಗಳೂರು**

**ಸಿ.ಆರ್ ಮಿಸ್.ನಂ: 1018/ 2025**

**ಅರ್ಜಿದಾರರು:**1) ಶ್ರೀ ವೈ.ಸಿ ನಾಗರಾಜ ಬಿನ್ ಲೇಟ್ ಯರ್ರಲಕಟ್ಟೆ ಚಿಕ್ಕಕರಿಯಪ್ಪ ವಯಸ್ಸು 50 ವರ್ಷ 2)ಶ್ರೀಮತಿ ಸಾವಿತ್ರಮ್ಮ ಕೋಂ ವೈ.ಸಿ ನಾಗರಾಜ ವಯಸ್ಸು 40 ವರ್ಷ, ಇಬ್ಬರೂ ಜಿರಾಯ್ತಿ, ಕೆಂಚಮ್ಮನಾಗ್ತಿಹಳ್ಳಿ ಗ್ರಾಮ, ಬಿಳಿಕೋಡು ಹೋಬಳಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.

**ವಿರುದ್ಧ**

**ಎದುರುದಾರರು** :1)ತಹಸಿಲ್ದಾರ್ ರವರು ತಾಲ್ಲೂಕು ಕಛೇರಿ ಜಗಳೂರು2) ಶ್ರೀಮತಿ ಶಿವಗಂಗಮ್ಮ ಕೋಂ ತಿಪ್ಪೇರುದ್ರಪ್ಪ, ವಯಸ್ಸು 53 ವರ್ಷ, ಜಿರಾಯ್ತಿ, ಯದ್ನಿ(ಕೆಂಚಮ್ಮನಾಗ್ತಿಹಳ್ಳಿ), ಮಾಯಕೊಂಡ ಹೋಬಳಿ, ದಾವಣಗೆರೆ ತಾಲ್ಲೂಕು 3. ಶ್ರೀಮತಿ ರತ್ನಮ್ಮ ಕೋಂ ಎನ್.ಸಿ. ಬಸವರಾಜ, ವಯಸ್ಸು 47 ವರ್ಷ, ಜಿರಾಯ್ತಿ, ನಲ್ಲಿಕಟ್ಟೆ ಗ್ರಾಮ, ಕಾಲ್ಗೆರೆ ಅಂಚೆ, ಚಿತ್ರದುರ್ಗ ತಾಲ್ಲೂಕು.

**ಸಾರ್ವಜನಿಕ ನೋಟೀಸ್**

ಮೇಲ್ಕಂಡ ಪ್ರಕರಣದಲ್ಲಿ 1 ನೇ ಅರ್ಜಿದಾರರು ಮತ್ತು 2 ಹಾಗೂ 3ನೇ ಎದುರುದಾರರ ತಂದೆ ಹಾಗೂ 2ನೇ ಅರ್ಜಿದಾರರ ಮಾವನವರಾದ ಚಿಕ್ಕಕರಿಯಪ್ಪ ಬಿನ್ ಹನುಮಂತಪ್ಪ, ಇವರು ದಿನಾಂಕ 26–04–2021 ರಂದು ಜಗಳೂರು ತಾಲ್ಲೂಕು, ಕೆಂಚಮ್ಮನಾಗ್ತಿಹಳ್ಳಿ ಗ್ರಾಮದ ಅರ್ಜಿದಾರರ ಮನೆಯಲ್ಲಿ ಮರಣ ಹೊಂದಿದ್ದು, ಸದರಿ ದಿನಾಂಕವನ್ನು ಎದುರುದಾರರು ಸಂಬಂಧಪಟ್ಟ ದಾಖಲೆಯಲ್ಲಿ ನೋಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ.ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ಘನ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ 23 –12 –2025 ರಂದು ಬೆಳಿಗ್ಗೆ 11–00 ಗಂಟೆಗೆ ವಿಚಾರಣೆಗಾಗಿ ನಿಗಧಿಪಡಿಸಿದ್ದು, ಆರ್ಜಿದಾರರ ಅರ್ಜಿಗೆ ಯಾರದಾದರೂ ತಕರಾರು ಇದ್ದಲ್ಲಿ ತಾವಾಗಲೀ, ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗಧಿತ ದಿನಾಂಕದ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:06.11.2025 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಅರ್ಜಿದಾರರ ಪರ ವಕೀಲರು
(ಆರ್.ಜಿ ಸತೀಶ)


ಸಹಿ/–
ಶಿರಸ್ತೆದಾರರು
ಸಿವಿಲ್ ಮತ್ತು ಜೆ. ಎಂ.ಎ ಎಫ್. ಸಿ ನ್ಯಾಯಾಲಯ
ಜಗಳೂರು

# ಡಾ.ಶುಭಾ ವಿಜಯ್‌ಗೆ ಇಂದಿರಾ ಪ್ರಿಯದರ್ಶಿನಿ ಪ್ರಶಸ್ತಿ

**ಚಿಕ್ಕಮಗಳೂರು:** ನಗರದ ಸ್ವಚ್ಛ ಟ್ರಸ್ಟ್ ಅಧ್ಯಕ್ಷೆ ಡಾ.ಶುಭಾ ವಿಜಯ್‌ಗೆ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇಂದಿರಾ ಪ್ರಿಯದರ್ಶಿನಿ ಪ್ರಶಸ್ತಿ ನೀಡಿ ಗೌರವಿಸಿದೆ.

ನಗರದಲ್ಲಿ ಪ್ರತಿ ಮನೆಯಿಂದ ಒಣ ಹಾಗೂ ಹಸಿ ಕಸ ಸಂಗ್ರಹಿಸುವ ವ್ಯವಸ್ಥೆಗೆ ಸ್ವಚ್ಛ ಟ್ರಸ್ಟ್ ಅನ್ನು ಸಮಾನ ಮನಸ್ಕರೊಂದಿಗೆ ಆರಂಭಿಸಿ,ನಗರದಲ್ಲಿ ಕಸ ಸಂಗ್ರಹಣೆ ಒಂದು ವ್ಯವಸ್ಥಿತ ರೂಪ ಪಡೆಯುವಂತೆ ಮಾಡಿದ್ದು ಮತ್ತು ಕೋಟೆಕೆರೆ ಶುಚಿಗೊಳಿಸಲು ಅವರು ವಹಿಸಿದ ಶ್ರಮವನ್ನು ಪರಿಗಣಿಸಿ ಮತ್ತ ಪ್ರತಿವರ್ಷ ನಗರದಲ್ಲಿ ಟ್ರಸ್ಟ್ ವತಿಯಿಂದ ವನಮಹೋತ್ಸವ ಆಚರಣೆ ಮಾಡುತ್ತಿದ್ದರು.

ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುತ್ತಿರುವುದನ್ನು ಪರಿಗಣಿಸಿ ಈ ಪ್ರಶಸ್ತಿಯನ್ನು ಇತ್ತೀಚೆಗೆ ಹಾಸನದಲ್ಲಿ ನಡೆದ ಸಮಾರಂಭದಲ್ಲಿ ಮಾಲಿನ್ಯ ನಿಯಂತ್ರಣ



ಮಂಡಳಿಯನ್ನು ಅಂದಿನ ಪ್ರಧಾನಿ ಇಂದಿರಾಗಾಂಧಿ ಅವರು ಸ್ಥಾಪಿಸಿ 50 ವರ್ಷ ಗಳಾದ ಹಿನ್ನೆಲೆಯಲ್ಲಿ ಡ.ಶುಭಾ ಅವರಿಗೆ ನೀಡಲಾಗಿದೆ.

# ಭೋವಿ ಸಮಾಜದ ಸಮಸ್ಯೆಗಳಿಗೆ ಸ್ಪಂದಿಸಲು ಮನವಿ

**ಚಿಕ್ಕಮಗಳೂರು:** ಭೋವಿ ಸಮಾಜ ಪ್ರಸ್ತುತ ಎದುರಿಸುತ್ತಿರುವ ಹಲವಾರು ಸಮಸ್ಯೆಗಳ ಬಗ್ಗೆ ನಿಗಮದ ಅಧ್ಯಕ್ಷ ರಾಮಪ್ಪನವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಜಿಲ್ಲಾ ಭೋವಿ ಸಮಾಜದ ಅಧ್ಯಕ್ಷ ಕೊಲ್ಲ ಭೋವಿ ತಿಳಿಸಿದರು.

ಅವರು ಇಂದು ಇಲ್ಲಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಗರಕ್ಕಾಗಮಿಸಿದ್ದ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಪ್ಪನವರನ್ನು ಸಮಾಜದ ಪರವಾಗಿ ಅಭಿನಂದಿಸಿ ಮಾತನಾಡಿದರು.

ಜಿಲ್ಲಾ ಭೋವಿ ಸಮಾಜದಲ್ಲಿ ಇರುವ ಕುಂದುಕೊರತೆಗಳ ಬಗ್ಗೆ ಅಧ್ಯಕ್ಷರ ಗಮನ ಸೆಳೆಯಲಾಗಿದ್ದು, ಜಿಲ್ಲೆಗೆ ಬರುವ ಅನುದಾನವನ್ನು ಸರ್ಕಾರದ ಮಟ್ಟದಲ್ಲಿ ಹೆಚ್ಚಳ ಮಾಡಲು ಪ್ರಯತ್ನಿಸಬೇಕೆಂದು ಮನವಿ ಮಾಡಿದರು.

ಮೂಡಿಗೆರೆ, ಕಡೂರು, ತರೀಕೆರೆ ತಾಲ್ಲೂಕುಗಳಲ್ಲಿ ಸಮಾಜ ಬಾಂಧವರು



ವಲಸೆ ಹೋಗುತ್ತಿದ್ದು, ಇದನ್ನು ತಡೆಯಲು ಸಹಾಯಧನದ ಆಧಾರದಲ್ಲಿ ಸಾಲಸೌಲಭ್ಯ ದೊರೆಯುವಂತೆ ಮಾಡಿದಾಗ ಭೋವಿ ಸಮಾಜದ ಸ್ವಾವಲಂಬಿ ಜೀವನಕ್ಕೆ ಆದ್ಯತೆ ನೀಡಬೇಕೆಂದು ವಿನಂತಿಸಿದರು.

ಭೋವಿ ಜನಾಂಗ ವಾಸಿಸುವ ಕಾಲೋನಿಗಳಲ್ಲಿ ಸಮುದಾಯ ಭವನ ನಿರ್ಮಾಣ ಮಾಡಿ ಲಂಬಾಣಿ ಸಮಾಜಕ್ಕೆ ನೀಡುತ್ತಿರುವ ಸೌಲಭ್ಯಗಳ ಮಾದರಿಯನ್ನು ಈ ಸಮಾಜಕ್ಕೂ ವಿಸ್ತರಿಸಬೇಕು, ಕಲ್ಲುಕೋರ ಸಮಸ್ಯೆ, ಸಮಾಜಕ್ಕೆ ಅರಣ್ಯ ಇಲಾಖೆಯಿಂದ ಆಗುತ್ತಿರುವ ಅನ್ಯಾಯವನ್ನು ತಡೆಯಲು ಮುಂದಾಗಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಪಾಲಾಕ್ಷಪ್ಪ, ಷಣ್ಮುಕಪ್ಪ, ದಿಲೀಪ್‌ಕುಮಾರ್, ನಾಗರಾಜ್, ತಿಮ್ಮಣ್ಣ, ಚನ್ನವೀರಪ್ಪ, ಶೇಖರಪ್ಪ, ನಾಗೇಗೌಡ, ಉಮೇಶ್, ಮತ್ತಿತರರು ಭಾಗವಹಿಸಿದ್ದರು.

# ವಾಹನಗಳ ಸಂಚಾರ ಮಾರ್ಗ ಬದಲಾವಣೆ

**ಶಿವಮೊಗ್ಗ:** ರಾಜ್ಯ ಹೆದ್ದಾರಿ ರಸ್ತೆಯ ಸರಪಳಿ 191,000 ರಿಂದ 191,230 ಫ್ಲೈ ಓವರ್ ಇಳಿಜಾರು ಮತ್ತು ಕೂಡು ರಸ್ತೆಯನ್ನು ಸೇರುವ ಜಾಗದಲ್ಲಿ ಹೆಚ್ಚಿನ ವಾಹನಗಳ ಸಂಚಾರದಿಂದ ಹಾಗೂ ಭಾರೀ ವಾಹನಗಳ ಓಡಾಟದಿಂದ ರಸ್ತೆಯು ತೀವ್ರವಾಗಿ ಹಾನಿಗೊಂಡು, ವಾಹನಗಳಿಗೆ ಮತ್ತು ಸಾರ್ವಜನಿಕರಿಗೆ ತೀವ್ರವಾಗಿ ತೊಂದರೆಯಾಗುತ್ತಿದ್ದು, ಫ್ಲೈ ಓವರ್ ಇಳಿಜಾರು ಮುಕ್ತಾಯ ಜಾಗದಿಂದ ಮತ್ತು ಚತುಷ್ಪಥಕ್ಕೆ ಕೂಡುವ ರಸ್ತೆಯ ಜಾಗದವರೆಗೆ ವಾಹನಗಳ ಸಂಚಾರವನ್ನು ತಾತ್ಕಾಲಿಕವಾಗಿ ನಿಷೇಧಿಸಿ ಮಾರ್ಗ ಬದಲಾವಣೆ ಮಾಡಿ ಜಿಲ್ಲಾಧಿಕಾರಿಗಳು ಆದೇಶಿಸಿರುತ್ತಾರೆ.

ಶಿವಮೊಗ್ಗದಿಂದ–ಹೊನ್ನಾಳಿ–ಹೊಸಪೇಟೆ ಕಡೆಗೆ ಸಂಚರಿಸುವ ವಾಹನಗಳು ಶಿವಮೊಗ್ಗ ನಗರ–ಎಸ್‌ಎಚ್57 ಸವಳಂಗ ರಸ್ತೆಯ ಉಷಾ ನರ್ಸಿಂಗ್ ಹೋಮ್–ಜೆಎಸ್‌ಎಸ್‌ಸಿ ಕಾಲೇಜ್ ಬಳಿ ಬಲಕ್ಕೆ ತಿರುಗಿ– ಕುವೆಂಪುನಗರ–ಶಾಂತಿನಗರದಿಂದ ರಾಜ್ಯ ಹೆದ್ದಾರಿ 25 ಕೂಡುವ ರಸ್ತೆ ಮಾರ್ಗವನ್ನು ಅನುಸರಿಸುವುದು.

ಹಾಗೂ ಹೊನ್ನಾಳಿಯಿಂದ –ಶಿವಮೊಗ್ಗ ಹೊಸಪೇಟೆ ಕಡೆಗೆ ಸಂಚರಿಸುವ ವಾಹನಗಳು ರಾಜ್ಯ ಹೆದ್ದಾರಿ 25 ಶಾಂತಿನಗರ ಕ್ರಾಸ್–ಶಾಂತಿನಗರ ಸರ್ಕಲ್‌ನಿಂದ ಎಡಕ್ಕೆ ತಿರುಗಿ–ರಾಗಿಗುಡ್ಡ ರಸ್ತೆಯಿಂದ–ಕೆಎಸ್‌ಸಿಎ ಸ್ಟೇಡಿಯಮ್ ಬಳಿ ಎಸ್‌ಎಚ್ 57 ಉಷಾ ನರ್ಸಿಂಗ್ ಹೋಮ್– ಶಿವಮೊಗ್ಗ ನಗರಕ್ಕೆ ಸೇರುವ ರಸ್ತೆ ಮಾರ್ಗವನ್ನು ಬಳಸಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಆದೇಶಿಸಿದ್ದಾರೆ.

# ಮುಳ್ಳಯ್ಯನಗಿರಿ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ನಿರ್ಬಂಧ ವಿಸ್ತರಣೆ

**ಚಿಕ್ಕಮಗಳೂರು:** ತಾಲ್ಲೂಕಿನ ಮುಳ್ಳಯ್ಯನಗಿರಿ ಪ್ರದೇಶದ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ವಸ್ತುಗಳನ್ನು ಬಳಸುವ ಮತ್ತು ಮಾರಾಟ ಮಾಡುವ ಕ್ರಮಕ್ಕೆ ನಿರ್ಬಂಧ ವಿಧಿಸಿದ್ದ ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಈ ನಿರ್ಬಂಧವನ್ನು ಡಿಸೆಂಬರ್ 19 ರವರೆಗೆ ಅಥವಾ ಮುಂದಿನ ಆದೇಶದವರೆಗೆ ವಿಸ್ತರಿಸಿದ್ದಾರೆ.

# ದೇಶದ ಸಂಸ್ಕೃತಿ–ಸಂಸ್ಕಾರ ಬಿಂಬಿಸುವುದೇ ಭರತನಾಟ್ಯ ನೃತ್ಯಕಲೆ : ಟಿ. ರಾಜಶೇಖರ್

**ಚಿಕ್ಕಮಗಳೂರು:** ದೇಶದ ಸಂಸ್ಕಾರ, ಸಂಸ್ಕೃತಿ, ಆಚಾರ–ವಿಚಾರಗಳನ್ನು ಬಿಂಬಿಸುವ ಭರತನಾಟ್ಯ ನೃತ್ಯಕಲೆ ಎಲ್ಲರ ಹೆಮ್ಮೆಯಾಗಿದ್ದು, ಭರತನಾಟ್ಯ ಮಾಡುವುದರಿಂದ ಮಕ್ಕಳ ಆರೋಗ್ಯ, ಜ್ಞಾನಾರ್ಜನೆಗೆ ಉತ್ತೇಜಿಸುತ್ತದೆ ಎಂದು ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಟಿ. ರಾಜಶೇಖರ್ ಅಭಿಪ್ರಾಯಿಸಿದರು.

ನಗರದ ಕುವೆಂಪು ಕಲಾಮಂದಿರದಲ್ಲಿ ನೃತ್ಯಾಂಕುರ ಸಂಸ್ಥೆ ಏರ್ಪಡಿಸಿದ್ದ ಭರತನಾಟ್ಯ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಭರತನಾಟ್ಯ ಭಾರತ ದೇಶದಲ್ಲಿ 2 ಸಾವಿರ ವರ್ಷಗಳ ಇತಿಹಾಸವಿರುವ ಕಲೆಯಾಗಿದ್ದು, ರಾಜಮಹಾರಾಜರ ಕಾಲದಲ್ಲಿ ಈ ಕಲೆಗೆ ಮಹತ್ವಪೂರ್ಣ ಬೆಂಬಲ ಇತ್ತು ಎಂದು ಹೇಳಿದರು.

ದಕ್ಷಿಣ ಭಾರತದ ಬೇಲೂರು, ಹಳೇಬೀಡು, ತಮಿಳುನಾಡು, ಆಂಧ್ರಪ್ರದೇಶ ಸೇರಿದಂತೆ ಎಲ್ಲಾ ದೇವಾಲಯಗಳಲ್ಲಿ ನಾಟ್ಯ ನೃತ್ಯರೂಪದ ಶಿಲ್ಪಕಲೆಗಳನ್ನು ಕಾಣಬಹುದಾಗಿದೆ. ಈ ಕಲೆಯನ್ನು ಉಳಿಸಿ ಬೆಳೆಸಲು ಅಕಾಡೆಮಿ ಅವಶ್ಯಕತೆ ಇದೆ ಎಂದು ತಿಳಿಸಿದರು.

ಹಿಂದೂ ಧರ್ಮದ ಸನಾತನ ಸಂಸ್ಕೃತಿಯನ್ನು ಎತ್ತಿ ಹಿಡಿಯಲು ಭರತನಾಟ್ಯ ನೃತ್ಯ ಸಹಕಾರಿಯಾಗಿದೆ ಎಂದರು.

ಖ್ಯಾತ ಮಕ್ಕಳ ತಜ್ಞ ಜೆ.ಪಿ ಕೃಷ್ಣೇಗೌಡ ಮಾತನಾಡಿ, ಪೋಷಕರು ತಮ್ಮ ಮಕ್ಕಳಿಗೆ ಭರತನಾಟ್ಯ ನೃತ್ಯವನ್ನು ಕಲಿಸುವ ಮೂಲಕ ಭಾರತದ ಕಲೆಯನ್ನು ಪ್ರೋತ್ಸಾಹಿಸಬೇಕೆಂದು ಮನವಿ ಮಾಡಿದರು.

ಬೆಂಗಳೂರಿನ ನಟರಾಜ ಆರ್ಟ್ಸ್ ಅಕಾಡೆಮಿಯ ಗೀತಾಸಿರೀಶ್ ಮಾತನಾಡಿ, ಪೋಷಕರು ಮತ್ತು ಮಕ್ಕಳ ಸಹಕಾರದಿಂದ ಮಾತ್ರ ಭರತನಾಟ್ಯ ಕಲೆಯನ್ನು ಉಳಿಸಿ ಬೆಳೆಸಲು ಸಾಧ್ಯ ಎಂದ ಅವರು, ಇನ್ನಷ್ಟು



ನೃತ್ಯ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ಆಯೋಜನೆಗೊಳ್ಳಲಿ ಎಂದು ಶುಭ ಹಾರೈಸಿದರು.

ನೂಪುರ ಅಕಾಡೆಮಿ ಆಫ್ ಫರ್ಫಾರ್ಮಿಂಗ್ ಆರ್ಟ್ಸ್‌ನ ನಿರ್ದೇಶಕರಾದ ಜ್ಯೋತಿ ಪ್ರಕಾಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಭರತನಾಟ್ಯ ಶಾಲೆ ಆರಂಭಿಸಿ 20 ವರ್ಷಗಳಾಗಿದ್ದು, ಭರತನಾಟ್ಯದ ಮೂಲಕ ಹಲವು ಕಾರ್ಯಕ್ರಮಗಳನ್ನು ನಡೆಸಲಾಗಿದ್ದು, ವಿದ್ಯಾರ್ಥಿಗಳಲ್ಲಿ ಭರತನಾಟ್ಯ ಕಲೆಯನ್ನು ಬೆಳೆಸಬೇಕೆಂಬುದು ಸಂಸ್ಥೆಯ ಉದ್ದೇಶ ಎಂದರು.

ಕಲಿತ ಭರತನಾಟ್ಯ ಕಲೆಯನ್ನು ಅರ್ಧಕ್ಕೆ ಕೈಬಿಡಬೇಡಿ. ಮುಂದೆ ಇದರಲ್ಲಿ ನಿಮಗೆ ಭವಿಷ್ಯ ಇದೆ, ಈ ಕಲೆ ಮಕ್ಕಳಲ್ಲಿ ಶಿಸ್ತು, ಸಮಯ ಪಾಲನೆ, ಪಾಠ–ಪ್ರವಚನಗಳ ಬಗ್ಗೆ ಆಸಕ್ತಿ ಮೂಡಿಸುತ್ತದೆ ಎಂದು ತಿಳಿಸಿದರು.

ಕೆ.ಪಿ.ಎಂ.ಸಿ ಟ್ರಸ್ಟ್‌ನ ಅಧ್ಯಕ್ಷರಾದ ಎಂ.ಸಿ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಇರುವ ಸುಪ್ತ ಪ್ರತಿಭೆಗಳನ್ನು ಹೊರತರುವಲ್ಲಿ ಈ ರಂಗ ವೇದಿಕೆ ಪ್ರವೇಶ ನೀಡಿದೆ. ಭರತ ಮುನಿಯಿಂದ ಅರಂಭವಾದ ಭರತನಾಟ್ಯ ಅನೇಕ ದೀರ್ಘಕಾಲದ ತಪಸ್ಸಿನ ಫಲವಾಗಿ ಈ ಕಲೆ ಬೆಳೆದುಬರುತ್ತಿದೆ ಎಂದು ಹೇಳಿದರು.

ನೃತ್ಯ, ಸಂಗೀತ, ಸಾಹಿತ್ಯ ಸೇರಿದಂತೆ ಭರತನಾಟ್ಯ ಕಲೆಯನ್ನು ಯೋಗ ಥೆರಪಿ ಎಂದರೆ ತಪ್ಪಾಗಲಾರದು. ಉಸಿರಾಟದ ಮೇಲೆ ಹಿಡಿತ, ಮುಖದಲ್ಲಿ ನವರಸಗಳು ತುಂಬಿ ಭಾವನೆಗಳು ವ್ಯಕ್ತವಾಗುತ್ತವೆ ಎಂದರು.

ಕಾರ್ಯಕ್ರಮದಲ್ಲಿ ಟುವ್ವಿಶ್ರೀಕುಮಾರಸ್ವಾಮಿ, ಅಶ್ವಿನಿ ಮನೋಹರ್, ವಿಂಧ್ಯಾಉಮೇಶ್, ಅಪೂರ್ವಗೌಡ, ವೆಂಕಟೇಶ್, ವಾಣಿ.ಎಂ.ಜಿ, ಪುಷ್ಪರಾಜ್ ಮತ್ತಿತರರು ಉಪಸ್ಥಿತರಿದ್ದರು ಮೊಲಲಿಗೆ ಸುಮಪ್ರಸಾದ್ ಸ್ವಾಗತಿ

# ಸಮಾಜ ಕಲ್ಯಾಣ ಇಲಾಖೆ: ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

**ಬಳ್ಳಾರಿ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನ ಕಾರ್ಯಕ್ರಮಗಳಡಿ ಪ್ರಸಕ್ತ ಶೈಕ್ಷಣಿಕ ಸಾಲಿಗೆ ಪರಿಶಿಷ್ಟ ಜಾತಿಯ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ ಹಾಗೂ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ಅಧಿಕೃತ ವೆಬ್‌ಸೈಟ್ www.sw.kar.nic.in CxÀªÁ https://ssp.postmatric.karnataka.gov.in/homepage.aspx ಲಿಂಕ್‌ನಲ್ಲಿ ಅರ್ಜಿ ಸಲ್ಲಿಸಬಹುದು.

*ಸೂಚನೆಗಳು*:

ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಪದವಿಗಳಲ್ಲಿ ವ್ಯಾಸಂಗ ಮಾಡಿ ಪ್ರಥಮ ಬಾರಿಗೆ, ಪ್ರಥಮ ಪ್ರಯತ್ನದಲ್ಲಿ ಪಾಸಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಹಿಂದಿನ ಸಾಲಿನಲ್ಲಿ ಅರ್ಜಿ ಸಲ್ಲಿಸಿ ವಿದ್ಯಾಥಿವೇತನ ಪಡೆದ ವಿದ್ಯಾರ್ಥಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಹಿಂದಿನ ಸಾಲಿನಲ್ಲಿ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು ಪ್ರಸಕ್ತ ಸಾಲಿಗೆ ಅರ್ಜಿ ಸಲ್ಲಿಸಬಹುದು.

ಕಳೆದ ಸಾಲಿನಲ್ಲಿ ವಿವಿಧ ಕಾರಣಗಳಿಂದ ವಿದ್ಯಾರ್ಥಿ ವೇತನ ಮಂಜೂರಾಗದ ಹಾಗೂ ರಿಜೆಕ್ಟ್ ಆಗಿರುವ ವಿದ್ಯಾರ್ಥಿಗಳು ಮಾತ್ರ ಪ್ರಸಕ್ತ ಸಾಲಿನಲ್ಲಿ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗಳಿಗೆ ಎನ್‌ಪಿಸಿಐ ಆಧಾರ್ ಸೀಡಿಂಗ್ ಮಾಡಿಸಿರಬೇಕು. ತೊಂದರೆಯಿದ್ದಲ್ಲಿ ಅಂಚೆ ಕಚೇರಿಯಲ್ಲಿ ಖಾತೆಯನ್ನು ತೆರೆಯಬೇಕು. ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಪ್ರತಿ ಶೈಕ್ಷಣಿಕ ಸಾಲಿಗೆ ಆನ್‌ಲೈನ್ ಅರ್ಜಿ ಸಲ್ಲಿಸಬಹುದು.ಪ್ರಸಕ್ತ ಸಾಲಿನಿಂದ ಪ್ರತಿ ಶಾಲಾ ಮುಖ್ಯೋಪಾಧ್ಯಾಯರು, ಹಾಗೂ ಕಾಲೇಜು ಪ್ರಾಂಶುಪಾಲರು ಗಳಿಗೆ ಸಬಲೀಕರಣ ಅಧಿಕಾರಿ ಅಥವಾ ಸಂಸ್ಥೆಯ ನೋಡಲ್ ಅಧಿಕಾರಿಯನ್ನು ನಿಯೋಜಿಸಿದ್ದು, ತಾಲ್ಲೂಕು ಲಾಗಿನ್‌ನಲ್ಲಿ ಸೇರ್ಪಡೆ ಮಾಡಿಕೊಳ್ಳಲು ಕ್ರಮವಹಿಸಬೇಕು. ನಂತರ ಸೇರ್ಪಡೆಯಾದ ಅಧಿಕಾರಿಗಳ ಇ–ಕೆವೈಸಿ ವಿವರಗಳನ್ನು ಅಪ್ಡೇಟ್ ಮಾಡಿ ಅನುಮೋದಿಸುತ್ತಾರೆ.

ವಿದ್ಯಾರ್ಥಿಗಳು ಕಡ್ಡಾಯವಾಗಿ ಮೊದಲು ಬಯೋಮೆಟ್ರಿಕ್ ಇ–ಧೃಢಿಕರಣ/ಎನ್‌ಎಸ್‌ಪಿ ಒಟಿಆರ್ ನೊಂದಣಿಯನ್ನು ಮಾಡಿಸಿದ ನಂತರ ಎಸ್‌ಎಸ್‌ಪಿ ಯಲ್ಲಿ ವಿದ್ಯಾರ್ಥಿವೇತನ ಅರ್ಜಿ ಸಲ್ಲಿಸಬೇಕು.

# ಜಿಲ್ಲೆಯಿಂದ ರಾಜ್ಯಮಟ್ಟದ ಕಲಾಶ್ರೀ ಪ್ರಶಸ್ತಿ ಸ್ಪರ್ಧೆಗೆ ವಿದ್ಯಾರ್ಥಿಗಳ ಆಯ್ಕೆ



**ಶಿವಮೊಗ್ಗ:** ಮಕ್ಕಳ ದಿನಾಚರಣೆ ಅಂಗವಾಗಿ ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು ವತಿಯಿಂದ ರಾಜ್ಯ ಮಟ್ಟದಲ್ಲಿ ನಡೆಯುವ ಕಲಾಶ್ರೀ ಪ್ರಶಸ್ತಿ ಸ್ಪರ್ಧೆಗೆ ಜಿಲ್ಲಾ ಮಟ್ಟದಿಂದ ಮಕ್ಕಳನ್ನು ಆಯ್ಕೆ ಮಾಡುವ ಸಲುವಾಗಿ ಗುರುವಾರ ಜಿಲ್ಲೆಯ ವಿವಿಧ ಶಾಲೆಯ ಮಕ್ಕಳಿಗೆ ವಿವಿಧ ಪಠ್ಯೇತರ ಚಟುವಟಿಕೆಗಳಾದ ಸೃಜನಾತ್ಮಕ ಕಲೆ, ಬರವಣಿಗೆ, ಪ್ರದರ್ಶನ ಹಾಗೂ ವಿಜ್ಞಾನದಲ್ಲಿ ನೂತನ ಆವಿಷ್ಕಾರ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ವಿವಿಧ ಪಠ್ಯೇತರ ಚಟುವಟಿಕೆಗಳಲ್ಲಿ ವಿಜೇತರಾದ ಮಕ್ಕಳಿಗೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಂ.ಎಸ್.ಸಂತೋಷ್ ಸ್ಮರಣಿಕೆ ಹಾಗೂ ಅಭಿನಂದನಾ ಪತ್ರ ನೀಡಿ ಗೌರವಿಸಿದರು.

ಸೃಜನಾತ್ಮ ಕಲೆ (ಚಿತ್ರಕಲೆ, ಕರಕುಶಲ ಕಲೆ, ಜೇಡಿ ಮಣ್ಣಿನ ಕಲೆ) ಸ್ಪರ್ಧೆಯಲ್ಲಿ ಮೇರಿ ಇಮ್ಯಾಕ್ಯುಲೇಟ್ ಶಾಲೆಯ ಖುಷಿ.ಆರ್ ಪ್ರಥಮ, ಪೋದಾರ್ ಇಂಟರ್ ನ್ಯಾಷನಲ್ ಸ್ಕೂಲ್‌ನ ಆರ್ನಾ.ಎಸ್ ದ್ವಿತೀಯ, ಬಾಲಕರ ಬಾಲ ಮಂದಿರದ ಸಿದ್ದಾರ್ಥ್ ತೃತೀಯ ಸ್ಥಾನ ಪಡೆದಿದ್ದಾರೆ.

ಸೃಜನಾತ್ಮ ಪ್ರದರ್ಶನ ಕಲೆ ಸ್ಪರ್ಧೆಯಲ್ಲಿ ಅನನ್ಯ ವಿದ್ಯಾಪೀಠದ ಗ್ಲೋರಿಯಾ ರಿಜಾರಿಯೋ ಪ್ರಥಮ, ಹೊಸನಗರ ವಿದ್ಯಾಭಾರತಿ ಶಾಲೆಯ ಆರ್ವಿ ಎಲ್.ಹೆಚ್ ದ್ವಿತೀಯ, ಗಾಜನೂರಿನ ಕರ್ನಾಟಕ ಪ್ರೌಢಶಾಲೆಯ ಅನುಷಾ ತೃತೀಯ ಸ್ಥಾನ ಪಡೆದಿದ್ದಾರೆ.

ಸೃಜನಾತ್ಮಕ ಬರವಣಿಗೆ ಸ್ಪರ್ಧೆಯಲ್ಲಿ ಗಾಜನೂರಿನ ಕರ್ನಾಟಕ ಪ್ರೌಢಶಾಲೆಯ ರಶ್ಮಿತಾ. ಎಸ್ ಪ್ರಥಮ, ಗಾಡಿಕೊಪ್ಪ ಸರ್ಕಾರಿ ಪ್ರೌಢಶಾಲೆಯ ಯಶವಂತ ವೈ.ಆರ್ ದ್ವಿತೀಯ, ಗೋಪಾಳ ಹಿರಿಯ ಪ್ರಾಥಮಿಕ ಶಾಲೆಯ ಪೂರ್ಣಿಮಾ.ಆರ್ ತೃತೀಯ ಸ್ಥಾನ ಪಡೆದಿದ್ದಾರೆ.

ವಿಜ್ಞಾನದಲ್ಲಿ ನೂತನ ಆವಿಷ್ಕಾರ ಸ್ಪರ್ಧೆಯಲ್ಲಿ ಶಿವಮೊಗ್ಗ ರಾಮಕೃಷ್ಣ ವಿದ್ಯಾನಿಕೇತನ ಶಾಲೆಯ ಸಾನಿಧ್ಯ ಪ್ರಥಮ, ರಾಮಯ್ಯ ಸರ್ವೋದಯ ಪ್ರೌಢಶಾಲೆಯ ಲಾವಣ್ಯ.ಸಿ.ಆರ್, ಗೋಪಾಳ ಹಿರಿಯ ಪ್ರಾಥಮಿಕ ಶಾಲೆಯ ಮೊಹಮದ್ ಇಬ್ರಾಹಿಂ ತೃತೀಯ ಸ್ಥಾನ ಪಡೆದಿದ್ದು, ಪ್ರಥಮ ಮತ್ತು ದ್ವಿತೀಯ ಶ್ರೇಯಾಂಕದಲ್ಲಿ ವಿಜೇತರಾದ ಮಕ್ಕಳನ್ನು ರಾಜ್ಯಮಟ್ಟದಲ್ಲಿ ನಡೆಯುವ ಕಲಾಶ್ರೀ ಪ್ರಶಸ್ತಿ ಸ್ಪರ್ಧೆಗೆ ಆಯ್ಕೆ ಮಾಡಲಾಯಿತು.

## ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಜಾಗೃತಿ ಕಾರ್ಯಕ್ರಮದಲ್ಲಿ ನ್ಯಾ.ರಾಜೇಶ್ ಎನ್.ಹೊಸಮನೆ ಹೇಳಿಕೆ

# ಅಕ್ರಮ ದತ್ತು ಪ್ರಕ್ರಿಯೆಯಲ್ಲಿ ಭಾಗವಹಿಸುವುದು ಅಪರಾಧ

**ಬಳ್ಳಾರಿ:** ಅಕ್ರಮ ದತ್ತು ಕಾರ್ಯದಲ್ಲಿ ಭಾಗವಹಿಸುವುದು ಅಪರಾಧವಾಗಿದ್ದು, ಭಾಗವಹಿಸಿರುವುದು ದೃಢವಾದಲ್ಲಿ ಕನಿಷ್ಠ 5 ವರ್ಷಗಳ ಜೈಲು ಶಿಕ್ಷೆ ಹಾಗೂ 1 ಲಕ್ಷ ದಂಡ ವಿಧಿಸಲು ಕಾನೂನಿನಡಿ ಅವಕಾಶವಿದೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಎಂದು ತಿಳಿಸಿದರು.

ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಅಭಿಯಾನದಡಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ವಿಶೇಷ ದತ್ತು ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ ‘ವಿಶೇಷ ಚೇತನ ಮಕ್ಕಳ ದತ್ತು ಪ್ರಕ್ರಿಯೆ’ ಎಂಬ ಘೋಷವಾಕ್ಯದಡಿ ನಗರದ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಅಜಾದ್ ವಸತಿ ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾನವನ ಜೀವ ಅತೀ ಅಮೂಲ್ಯವಾಗಿದ್ದು, ಯಾವುದೇ ಕಾರಣದಿಂದಾಗಿ ಪೋಷಕರು ನವಜಾತ ಶಿಶುಗಳನ್ನು ಬಿಟ್ಟುಹೋಗಿರುವುದು ಕಂಡುಬಂದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಇಲಾಖೆಯ ಗಮನಕ್ಕೆ ತರಬೇಕು. ಅಂತಹ ಮಕ್ಕಳನ್ನು ರಕ್ಷಣೆ ಮಾಡಿ ಆರೈಕೆ ಮಾಡಿ, ಒಳ್ಳೆಯ ಕುಟುಂಬ ಮತ್ತು ಪೋಷಕರಿಗೆ ಮಕ್ಕಳನ್ನು ದತ್ತು ನೀಡುವ ಮೂಲಕ ಅಂತಹ ಮಕ್ಕಳಿಗೆ ಒಳ್ಳೆಯ ಜೀವನ



ನೀಡಲು ಸಾಧ್ಯ. ಇದಕ್ಕೆ ಎಲ್ಲರೂ ಸಹಕರಿಸಬೇಕು ಎಂದು ಕೋರಿದರು.

ಕಾನೂನಿನ ನೆರವು ಅಗತ್ಯವುಳ್ಳ ಬಡ ಮತ್ತು ನಿರ್ಗತಿಕ ಕುಟುಂಬಗಳು ಉಚಿತವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಕಾನೂನು ಸೇವೆ ಪಡೆದುಕೊಳ್ಳಬಹುದು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರದೇವಿ ಅವರು ಮಾತನಾಡಿ, ಮಕ್ಕಳ ರಕ್ಷಣೆ ಮತ್ತು ಪೋಷಣೆ ನಮ್ಮೆಲ್ಲರ ಹೊಣೆಯಾಗಿದೆ. ಮಕ್ಕಳನ್ನು ಬಾಲ್ಯವಿವಾಹ, ಬಾಲಕಾರ್ಮಿಕ, ಭಿಕ್ಷಾಟನೆ, ಲೈಂಗಿಕ ಕಿರುಕುಳ ಮತ್ತು ಇನ್ನಿತರೆ ಸಂಕಷ್ಟಕ್ಕೆ ಒಳಗಾದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಒಂದುವೇಳೆ ಅಂತಹ ಸಮಸ್ಯೆಗಳು ಎದುರಿಸುತ್ತಿದ್ದರೆ, ಇಲ್ಲವೇ ಕಂಡುಬಂದಲ್ಲಿ ನಿರ್ಭಯವಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ 1098, 112 ಗೆ ಕರೆ ಮಾಡಬೇಕು. ಮಾಹಿತಿ ನೀಡಿದವರನ್ನು ಗೌಪ್ಯವಾಗಿಡಲಾಗುವುದು ಎಂದು ತಿಳಿಸಿದರು.

ಎಲ್ಲಾ ಶಾಲೆಗಳಲ್ಲಿ ಮಕ್ಕಳಿಗೆ ಮಕ್ಕಳ ಸುರಕ್ಷತೆ ಕುರಿತು ಅರಿವು ಮೂಡಿಸುವುದು ಅಗತ್ಯ. ಪ್ರತಿ ಶಾಲೆಯಲ್ಲಿ ದೂರು ಪೆಟ್ಟಿಗೆಯನ್ನು ನಿರ್ವಹಿಸಿ ದೂರುಗಳನ್ನು ಪ್ರತಿ ತಿಂಗಳು ವಿಲೇವಾರಿ ಮಾಡಬೇಕು ಎಂದು ತಿಳಿಸಿದರು.

ಮಕ್ಕಳ ವಿಶೇಷ ಪೊಲೀಸ್ ಘಟಕದ ಸಿಬ್ಬಂದಿ ಲಲಿತಮ್ಮ ಅವರು ಮಾತನಾಡಿ, ಹೆಣ್ಣು ಮಕ್ಕಳು ಅಂತರ್ಜಾಲದಲ್ಲಿ ತಮ್ಮ ವೈಯಕ್ತಿಕ ಮಾಹಿತಿ ಮತ್ತು ಫೋಟೋಗಳನ್ನು ಹಂಚಿಕೊಳ್ಳಬಾರದು. ಸೈಬರ್ ಕ್ರೈಮ್ ಕುರಿತು ಅರಿವು ಪ್ರತಿಯೊಬ್ಬರೂ ಹೊಂದಬೇಕು ಎಂದು ಹೇಳಿದರು.

ನಂತರ ಮಕ್ಕಳ ವಿಶೇಷ ಪೊಲೀಸ್ ಘಟಕದ ಸೇವೆಗಳು, ಕಾರ್ಯವೈಖರಿ, ಪ್ರತಿ ಪೊಲೀಸ್ ಠಾಣೆಯಿಂದ ತೆರೆದ ಮನೆ ಕಾರ್ಯಕ್ರಮಗಳ ಕುರಿತು ತಿಳಿಸಿದರು.

ವಸತಿ ಶಾಲೆಯ ಪ್ರಾಂಶುಪಾಲ ಕೆ.ಎಂ. ಮೂಕಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳು ಮಕ್ಕಳ ಸಹಾಯವಾಣಿ ಸಂಖ್ಯೆ–1098, ಪೊಲೀಸ್ ಸೇವೆ–112, ಸೈಬರ್ ಕ್ರೈಮ್ –1930 ಮತ್ತು ಉಚಿತ ರಾಷ್ಟ್ರೀಯ ಕಾನೂನು ಸೇವೆಗಳ ಸಂಖ್ಯೆ –15100 ಗಳನ್ನು ನೆನಪಿಟ್ಟುಕೊಂಡು ಅಗತ್ಯ ಸಂದರ್ಭಗಳಲ್ಲಿ ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಮಕ್ಕಳ ರಕ್ಷಣಾಧಿಕಾರಿ (ಆಸಾಂಸ್ಥಿಕ ಸೇವೆ) ಚನ್ನಬಸಪ್ಪ ಪಾಟೀಲ್ ಅವರು ದತ್ತು ಕುರಿತ ಪ್ರತಿಜ್ಞಾವಿಧಿ ಭೋದಿಸಿದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ನಾಗಯ್ಯ ಹಿರೇಮಠ, ಕಾನೂನು ಪರಿವೀಕ್ಷಣಾಧಿಕಾರಿ ಈಶ್ವರ್ ರಾವ್, ಮಕ್ಕಳ ಸಹಾಯವಾಣಿ ಸಂಯೋಜಕ ಕೆ. ಆನಂದ, ಮಿಷನ್ ಶಕ್ತಿ ಸಂಯೋಜಕಿ ಶಹಜಹಾನ್, ದತ್ತು ಸಂಸ್ಥೆಯ ಸಿಬ್ಬಂದಿ ಗಣೇಶ್ ಸೇರಿದಂತೆ ವಸತಿ ಶಾಲೆಯ ಶಿಕ್ಷಕರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಹಾಗೂ ವಸತಿ ನಿಯಲದ 300ಕ್ಕೂ ಹೆಚ್ಚು ಮಕ್ಕಳು ಉಪಸ್ಥಿತರಿದ್ದರು

# ಜಿಲ್ಲಾ ಸಹಕಾರ ಯೂನಿಯನ್‌ನ ನಿರ್ದೇಶಕರ ಸ್ಥಾನಕ್ಕೆ ನಡೆದ ಚುನಾವಣೆ

## 13 ಸ್ಥಾನಗಳಲ್ಲಿ ಬಿಜೆಪಿ ಬೆಂಬಲಿತರು 12 ಸ್ಥಾನಗಳಲ್ಲಿ ಭರ್ಜರಿ ಗೆಲುವು ಸಾಧಿಸಿದ್ದು,

**ಚಿಕ್ಕಮಗಳೂರು:** ಜಿಲ್ಲಾ ಸಹಕಾರ ಯೂನಿಯನ್‌ನ ನಿರ್ದೇಶಕರ ಸ್ಥಾನಕ್ಕೆ ಭಾನುವಾರ ನಡೆದ ಚುನಾವಣೆಯಲ್ಲಿ 13 ಸ್ಥಾನಗಳಲ್ಲಿ ಬಿಜೆಪಿ ಬೆಂಬಲಿತರು 12 ಸ್ಥಾನಗಳಲ್ಲಿ ಭರ್ಜರಿ ಗೆಲುವು ಸಾಧಿಸಿದ್ದು, ಪಕ್ಷ ಮತ್ತೆ ಅಧಿಕಾರದ ಗದ್ದುಗೆ ಹಿಡಿದಿದೆ.

ವಿಜಯೋತ್ಸವದ ನಂತರ ಜಿಲ್ಲಾ ಸಹಕಾರ ಯೂನಿಯನ್‌ನ ಹಾಲಿ ಅಧ್ಯಕ್ಷ ಬಿಜೆಪಿ ಮುಖಂಡ ಡಾ. ಜಿ.ಎಸ್.ಮಹಾಬಲ ಮಾತನಾಡಿ, ಹತ್ತಕ್ಕೂ ಹೆಚ್ಚಿನ ಸ್ಥಾನಗಳಲ್ಲಿ ಬಿಜೆಪಿ ಬೆಂಬಲಿತರ ಗೆಲುವಿಗೆ ಸಹಕರಿಸಿದ ಪಕ್ಷದ ಎಲ್ಲಾ ಮುಖಂಡರು, ಕಾರ್ಯಕರ್ತರು ಹಾಗೂ ಮತದಾರರಿಗೆ ಅಭಿನಂದನೆ ಸಲ್ಲಿಸುತ್ತೇವೆ ಎಂದರು. ಸಹಕಾರಿ ಯೂನಿಯನ್‌ನ 13 ಸ್ಥಾನಗಳ ಪೈಕಿ 1 ಸ್ಥಾನವನ್ನು ಹೊರತುಪಡಿಸಿ ಉಳಿದ 12 ಸ್ಥಾನಗಳಲ್ಲಿ ಬಿಜೆಪಿ ಬೆಂಬಲಿತರು ಆಯ್ಕೆಯಾಗಿದ್ದಾರೆ. ಸಹಕಾರಿ ಕ್ಷೇತ್ರದಲ್ಲಿ ಬಿಜೆಪಿ ಕಾರ್ಯಕರ್ತರು ಮತ್ತು ಸಹಕಾರಿಗಳು ಹೆಚ್ಚು ಆಸಕ್ತಿಯಿಂದ ಪಾಲ್ಗೊಂಡು ಸಹಕಾರ ಕ್ಷೇತ್ರವನ್ನು ಬಲಪಡಿಸಲು ಕೈಜೋಡಿಸಿದ್ದಾರೆ ಎಂದರು.

ಕಳೆದ ಎರಡು ಅವಧಿಯಲ್ಲೂ ಬಿಜೆಪಿ ಅಧಿಕಾರದಲ್ಲಿತ್ತು. ಈ ಬಾರಿಯೂ ಪಕ್ಷ ಮತ್ತೆ ಅಧಿಕಾರಕ್ಕೇರಿದೆ. ಹಿಂದೆ ಯೂನಿಯನ್‌ನಲ್ಲಿ ಒಳ್ಳೆಯ ಆಡಳಿತ ನೀಡಿರುವುದು ಇದಕ್ಕೆ ಕಾರಣವಾಗಿದೆ. ಇದಕ್ಕೆ ಸಹಕರಿಸಿದ ಎಲ್ಲ ಸಹಕಾರಿ ಮುಖಂಡರುಗಳಿಗೆ ಕೃತಜ್ಞತೆ ಸಲ್ಲಿಸುತ್ತೇವೆ ಎಂದು ತಿಳಿಸಿದರು.

ಹಿರಿಯ ನಿರ್ದೇಶಕ ಸಿ.ಎಸ್.ರಂಗನಾಥ್ ಮಾತನಾಡಿ, ಪಕ್ಷದ ಹಿರಿಯ ಮುಖಂಡರು, ಕಾರ್ಯಕರ್ತರು ಹಾಗೂ ಸಹಕಾರಿಗಳು ಬೆಂಬಲದಿಂದಾಗಿ ಬಿಜೆಪಿ ಬೆಂಬಲಿತ ನಿರ್ದೇಶಕರು ಅತೀ ಹೆಚ್ಚು ಸ್ಥಾನಗಳಲ್ಲಿ ಗೆಲ್ಲಲು ಸಾಧ್ಯವಾಗಿದೆ. ವಿಧಾನ ಪರಿಷತ್ ಉಪ ಸಭಾಪತಿ ಎಂ.ಕೆ.ಪ್ರಾಣೇಶ್, ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ಮಾಜಿ ಶಾಸಕರುಗಳಾದ ತರೀಕೆರೆಯ ಡಿ.ಎಸ್.ಸುರೇಶ್, ಕಡೂರಿನ ಬೆಳ್ಳಿ ಪ್ರಕಾಶ್, ಶೃಂಗೇರಿಯ ಡಿ.ಎನ್. ಜೀವರಾಜ್, ಜಿಲ್ಲಾ ಬಿಜೆಪಿ ಅಧ್ಯಕ್ಷ ದೇವರಾಜ ಶೆಟ್ಟಿ ಇತರರು ಚುನಾವಣೆ ಗೆಲುವಿಗೆ ಸಹಕಾರ ನೀಡಿದ್ದಾರೆ ಎಂದು ತಿಳಿಸಿದರು.

# ನ.14 ರಂದು ನೀರಾವರಿ ಸಲಹಾ ಸಮಿತಿ ಸಭೆ

**ಬಳ್ಳಾರಿ:** ಪ್ರಸ್ತಕ ಸಾಲಿಗೆ ತುಂಗಭದ್ರಾ ಜಲಾಶಯದ ಹಿಂಗಾರು ಹಂಗಾಮಿಗೆ ಲಭ್ಯವಿರುವ ನೀರನ್ನು ತುಂಗಾಭದ್ರಾ ಯೋಜನೆಯ ಮತ್ತು ವಿಜಯನಗರ ಕಾಲುವೆಗಳಿಗೆ ಒದಗಿಸುವ ಕುರಿತು ಚರ್ಚಿಸಲು ನ.14 ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ವಿಧಾನಸೌಧದ 3 ನೇ ಮಹಡಿಯ ಕೊಠಡಿ ಸಂಖ್ಯೆ 334 ರ ಸಮ್ಮೇಳನ ಸಭಾಂಗಣದಲ್ಲಿ 125 ನೇ ನೀರಾವರಿ ಸಲಹಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ. ಉಪಮುಖ್ಯಮಂತ್ರಿ, ಜಲಸಂಪನ್ಮೂಲ ಇಲಾಖೆ ಹಾಗೂ ಬೆಂಗಳೂರು ನಗರಭಿವೃದ್ಧಿ ಸಚಿವರಾದ ಡಿ.ಕೆ.ಶಿವಕುಮಾರ್ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು, ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಮತ್ತು ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರೂ ಆದ ಶಿವರಾಜ ಎಸ್.ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

# ಬಾಲಿಯಲ್ಲಿ ಶ್ರೀ ವಾಸುದೇವ ರಾಯ್ಕರ್‌ಗೆ ಅಂತರಾಷ್ಟ್ರೀಯ ಪ್ರಶಸ್ತಿ




**ಹರಿಹರ** : ನಗರದ ಖ್ಯಾತ ಉದ್ಯಮಿ ಹಾಗೂ ಸಮಾಜಸೇವಕರಾದ ಶ್ರೀ ವಾಸುದೇವ ರಾಯ್ಕರ್ ರವರಿಗೆ ಇತ್ತೀಚಿಗೆ ಬಾಲಿಯಲ್ಲಿ ನಡೆದ "ಇಂಟರ್ನ್ಯಾಷನಲ್ ಕಲ್ಚರಲ್ ಫೆಸ್ಟಿವಲ್" ನಲ್ಲಿ "ಇಂಟರ್ನ್ಯಾಷನಲ್ ಬಿಜಿನೆಸ್ ಅಂಡ್ ಸರ್ವಿಸ್ ಎಕ್ಸಲೆನ್ಸ್ ಅವಾರ್ಡ್" ನೀಡಿ ಗೌರವಿಸಲಾಯಿತು.

ಇಂಡೋನೇಷಿಯಾದ ಸೆನೆಟರ್ ಹಾಗೂ ಜಂಬ್ರಾನಾ ಪ್ರಾಂತ್ಯದ ರಾಜರಾದ ಶ್ರೀ ಗುಸ್ತಿ ಆರ್ಯವೇದ ಕರ್ಣ ರವರು ಪ್ರಶಸ್ತಿ ಪ್ರದಾನ ಮಾಡಿದರು. ಚಿರಂತನ ಸಂಸ್ಥೆ ಹಾಗೂ ಬಾಲಿ ಸರ್ಕಾರದ ಸಂಯುಕ್ತಶ್ರಯದಲ್ಲಿ ನಡೆದ ಈ ಅದ್ದೂರಿ ಸಮಾರಂಭದಲ್ಲಿ ದಾವಣಗೆರೆಯ ಉದ್ಯಮಿಯೋರ್ವರಿಗೆ ಪ್ರಶಸ್ತಿ ಲಭಿಸಿರುವುದು ವಿಶೇಷ. ವಾಸುದೇವ ರಾಯ್ಕರ್ ಚಿನ್ನ ಬೆಳ್ಳಿ ವ್ಯಾಪಾರಿಯಾಗಿ ತಮ್ಮ ವೃತ್ತಿ ಜೀವನ ಆರಂಭಿಸಿ ಸತತ ಶ್ರಮದಿಂದ ಇಂದು ಓರ್ವ ಪ್ರಮುಖ ಉದ್ಯಮಿಯಾಗಿ ಬೆಳೆದಿದ್ದಾರೆ. ಕಳೆದ ಮೂರು ದಶಕಗಳಿಂದ ಸುಮಾರು 45 ಸಂಘಟನೆಗಳಲ್ಲಿ ಸಕ್ರಿಯ ಪದಾಧಿಕಾರಿಯಾಗಿ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಯೋಗ ಕ್ಷೇತ್ರದಲ್ಲಿ ತೊಡಗಿಸಿಕೊಂಡಿದ್ದಾರೆ. ಸುಮಾರು 50 ಸಾರಿ ರಕ್ತದಾನ ಮಾಡಿರುವುದಲ್ಲದೆ, ಪೇಜಾವರ ಶ್ರೀಗಳಿಂದ ಹಿಡಿದು ವಿಜಯಪುರದ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ವರೆಗೆ ನಾಡಿನ ಸಾಧುಸಂತರನ್ನು ವಿವಿಧ ಕಾರ್ಯಕ್ರಮಗಳಿಗೆ ಅತಿಥಿಗಳನ್ನಾಗಿ ಆಹ್ವಾನಿಸಿದ್ದಾರೆ. ' ಆರ್ಟ್ ಆಫ್ ಲಿವಿಂಗ್' ಆಧ್ಯಾತ್ಮಿಕ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿದ್ದಾರೆ. 'ಕರ್ನಾಟಕ ರಕ್ಷಣಾ ವೇದಿಕೆ' ಯ ಜಿಲ್ಲಾ ಘಟಕದ ಅಧ್ಯಕ್ಷರಾಗಿ ನಾಡು ನುಡಿಗಾಗಿ ಬೀದಿಗಿಳಿದು ಹೋರಾಡಿದ್ದಾರೆ. ದೈವಜ್ಞ ಬ್ರಾಹ್ಮಣ ಸಮಾಜದ ಸಂಘಟನೆಯಲ್ಲಿ ನಿರಂತರ ಸಹಭಾಗಿದ್ದಾರೆ. ಹಲವಾರು ಸಂಸ್ಥೆಗಳಿಗೆ ಸದ್ದಿಲ್ಲದೇ ದಾನ ಮಾಡಿರುವ ವಾಸುದೇವ ರಾಯ್ಕರ್ ರಿಗೆ ಈ ಅಂತರಾಷ್ಟ್ರೀಯ ಪ್ರಶಸ್ತಿ ಗರಿ ದೊರಕಿದ್ದಕ್ಕಾಗಿ ಅನೇಕರು ಅಭಿನಂದನೆ ತಿಳಿಸಿದ್ದಾರೆ.

# ಶಿಕ್ಷಕರ ವೃತ್ತಿ ಸಾಮರ್ಥ್ಯ ಅಭಿವೃದ್ಧಿಗೆ ತರಬೇತಿಗಳು ಸಹಕಾರಿ-ಎಂ.ನಾಸಿರುದ್ದೀನ್

**ಚಿತ್ರದುರ್ಗ:** ಶಿಕ್ಷಕರ ವೃತ್ತಿಪರ ಸಾಮರ್ಥ್ಯ ಅಭಿವೃದ್ಧಿಗೆ ತರಬೇತಿಗಳು ಸಹಕಾರಿಯಾಗುತ್ತವೆ ಎಂದು ಡಯಟ್ ಪ್ರಾಚಾರ್ಯ ಎಂ.ನಾಸಿರುದ್ದೀನ್ ಹೇಳಿದರು. ನಗರದ ಡಯಟ್‌ನಲ್ಲಿ ಸಮಗ್ರ ಶಿಕ್ಷಣ ಕರ್ನಾಟಕ ಮತ್ತು ಡಿ.ಎಸ್.ಇ.ಆರ್.ಟಿ ವತಿಯಿಂದ ಜಿಲ್ಲೆಯ ಶೈಕ್ಷಣಿಕ ಅನುಷ್ಠಾನಾಧಿಕಾರಿಗಳಿಗೆ ಜ್ಞಾನಸೇತು, ಮರುಸಿಂಚನ, ಓದು ಕರ್ನಾಟಕ, ಗಣಿತ ಗಣಕ, ಕಲಿಕಾದೀಪ ವಿಷಯ ಕುರಿತು ಆಯೋಜಿಸಿದ್ದ 5 ದಿನಗಳ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು ಶಿಕ್ಷಕರು ನಾವಿನ್ಯಯುತ ಚಟುವಟಿಕೆಗಳನ್ನು ಅಳವಡಿಸಿಕೊಂಡು ಬೋಧಿಸಬೇಕು. ಜಿಲ್ಲಾ ಹಂತದ ಎಂ.ಆರ್.ಪಿಗಳು ತಾಲೂಕು ಹಂತದಲ್ಲಿ ಪರಿಣಾಮಕಾರಿಯಾಗಿ ತರಬೇತಿ ನೀಡಿ ಶಿಕ್ಷಕರ ವೃತ್ತಿ ಸಾಮರ್ಥ್ಯ ಅಭಿವೃದ್ಧಿಪಡಿಸಬೇಕು ಎಂದರು.

ಉಪ ಪ್ರಾಚಾರ್ಯ ನಾಗಭೂಷಣ್ ಮಾತನಾಡಿ, ಪ್ರತಿ ಮಗುವಿಗೆ ವ್ಯಕ್ತಿತ್ವ ವಿಕಸನಕ್ಕೆ ಶಿಕ್ಷಣ ದಾರಿದೀಪವಾಗಿದೆ. ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗದಂತೆ ಶಿಕ್ಷಕರು ಮತ್ತು ಅನುಷ್ಠಾನಾಧಿಕಾರಿಗಳು ಜವಬ್ದಾರಿಯಿಂದ ಕಾರ್ಯ ನಿರ್ವಹಿಸುವ ಮೂಲಕ ಗುಣಮಟ್ಟದ ಶಿಕ್ಷಣ ನೀಡಲು ಶ್ರಮಿಸಬೇಕು ಎಂದು ತಿಳಿಸಿದರು.



ನಗರದ ಡಯಟ್‌ನಲ್ಲಿ ಜ್ಞಾನಸೇತು, ಮರುಸಿಂಚನ, ಓದು ಕರ್ನಾಟಕ, ಗಣಿತ ಗಣಕ, ಕಲಿಕಾದೀಪ ವಿಷಯ ಕುರಿತು ಆಯೋಜಿಸಿದ್ದ ತರಬೇತಿಯಲ್ಲಿ ಭಾಗವಹಿಸಿದ್ದ ಜಿಲ್ಲೆಯ ಶೈಕ್ಷಣಿಕ ಅನುಷ್ಠಾನಾಧಿಕಾರಿಗಳು.

ಉಪನ್ಯಾಸಕ ಎಸ್.ಬಸವರಾಜು ಮಾತನಾಡಿ, ಕನ್ನಡ ಮತ್ತು ಆಂಗ್ಲಭಾಷೆಯನ್ನು ಆತ್ಮವಿಶ್ವಾಸದಿಂದ ಓದಲು ಗಣಿತದ ಆರಂಭಿಕ ಸಾಮರ್ಥ್ಯ ಗಳಿಸಲು ಏಕ್‌ಸ್ಟೆಪ್ ಫೌಂಡೇಷನ್ ಸಂಸ್ಥೆಯ ಸಹಯೋಗದಲ್ಲಿ ಅನುಷ್ಠಾನಗೊಳಿಸುತ್ತಿರುವ ಕೃತಕ ಬುದ್ಧಿಮತ್ತೆ ಆಧಾರಿತ ಕಲಿಕಾದೀಪ ಕಾರ್ಯಕ್ರಮ ಪೂರಕವಾಗಿದೆ. ಸರ್ಕಾರಿ ಶಾಲೆಯಲ್ಲಿನ 4 ರಿಂದ 6ನೇ ತರಗತಿಯಲ್ಲಿ ಅಭ್ಯಾಸ ಮಾಡುತ್ತಿರುವ ಮಕ್ಕಳಿಗೆ ಕಾರ್ಯಕ್ರಮ ನಡೆಯಲಿದ್ದು ಭಾಷಾ ಪ್ರಾವಿಣ್ಯತೆ ಪಡೆಯಲು ಬುನಾದಿ ಸಾಮರ್ಥ್ಯ ಮತ್ತು ಸಂಖ್ಯಾಜ್ಞಾನ ಸಾಮರ್ಥ್ಯ ಬೆಳೆಸಲು ಇದು ಪೂರಕವಾಗಿದೆ. ಪ್ರಸಕ್ತ ವರ್ಷ ಚಿತ್ರದುರ್ಗದಲ್ಲಿ 54 ಶಾಲೆಗಳಲ್ಲಿ ಅನುಷ್ಟಾನಗೊಳಿಸಲಾಗುತ್ತಿದೆ ಎಂದರು.

ಹಿರಿಯ ಉಪನ್ಯಾಸಕ ತಿಪ್ಪೇಸ್ವಾಮಿ, ಉಪನ್ಯಾಸಕರಾದ ರಾಮಣ್ಣ, ರಾಮಚಂದ್ರಪ್ಪ, ಮಂಜುಳಾ, ಸಂಪನ್ಮೂಲ ವ್ಯಕ್ತಿಗಳು ಮತ್ತು ಜಿಲ್ಲೆಯ ಎಲ್ಲಾ ತಾಲೂಕಿನ ಶಿಕ್ಷಣ ಸಂಯೋಜಕರು, ಬಿ.ಆರ್.ಪಿ, ಸಿ.ಆರ್.ಪಿ ಮತ್ತಿತರರಿದ್ದರು.

# ಅಕ್ಕ ಪಡೆಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ 2025-26ನೇ ಸಾಲಿನಲ್ಲಿ ಅಕ್ಕಪಡೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಆದೇಶದಲ್ಲಿ ಸೂಚಿಸಿರುವಂತೆ, "ಅಕ್ಕ ಪಡೆ" ತಂಡದ ಮಹಿಳಾ ಎನ್‌ಸಿಸಿ ಕೆಡೆಟ್‌ಗಳ ಆಯ್ಕೆಗೆ ಅರ್ಜಿ ಆಹ್ವಾನಿಸಲಾಗಿದೆ.

ಎನ್‌ಸಿಸಿ ಸಿ. ಪ್ರಮಾಣ ಪತ್ರ ಹೊಂದಿರುವ 35-45 ವಯೋಮಾನದ ಮಹಿಳಾ ಎನ್‌ಸಿಸಿ ಕೆಡೆಟ್‌ಗಳು ದೈಹಿಕ ಸದೃಢತೆ ಹೊಂದಿರಬೇಕು. ಸ್ಥಳೀಯ ನಿವಾಸಿಗಳಿಗೆ ಆದತೆ ನೀಡಲಾಗುವುದು. ಉತ್ತಮ ನಡವಳಿಕೆ, ಸಂವಹನ ಕಲೆ, ಕಾರ್ಯದಕ್ಷತೆ ಉಳ್ಳವರಾಗಿರಬೇಕು. 7 ಗಂಟೆಯಿಂದ ಸಂಜೆ 8 ರವರೆಗೆ ಅಂದರೆ ಬೆಳಿಗ್ಗೆ 7 ಗಂಟೆಯಿಂದ ಮಧ್ಯಾಹ್ನ 2 ಗಂಟೆವರೆಗೆ ಮತ್ತು ಮಧ್ಯಾಹ್ನ 2 ರಿಂದ ರಾತ್ರಿ 8 ಗಂಟೆಯವರೆಗೆ ಎರಡು ಪಾಳಿಗಳಲ್ಲಿ ಕೆಲಸ ನಿರ್ವಹಿಸಲು ಸಿದ್ಧರಿರಬೇಕು.

ಸಂಕಷ್ಟದಲ್ಲಿರುವ ದುರ್ಬಲ ಮಹಿಳೆಯರು ಮತ್ತು ಮಕ್ಕಳಿಗೆ ತಕ್ಷಣದ ರಕ್ಷಣೆ ನೀಡುವುದು 'ಅಕ್ಕ ಪಡೆ' ಯೋಜನೆಯ ಪ್ರಾಥಮಿಕ ಉದ್ದೇಶವಾಗಿದೆ. ಸಹಾನುಭೂತಿ ಮತ್ತು ಸಮುದಾಯ ಸೇವೆಯಲ್ಲಿ ಚಾಲಿತವಾಗಿರುವ ಅಕ್ಕ ಪಡೆ ಸಮಾಜದಲ್ಲಿ ಸ್ಪಂದಿಸುವ ಸುರಕ್ಷತಾ ಘಟಕವಾಗಿ ಮತ್ತು ಶೈಕ್ಷಣಿಕ ಶಕ್ತಿಯಾಗಿ ಕಾರ್ಯನಿರ್ವಹಿಸಲಿದೆ.

ನಗರದ ಹೌಸಿಂಗ್ ಬೋರ್ಡ್‌ನಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ ಪಡೆದ ಅರ್ಜಿಯನ್ನು ಭರ್ತಿ ಮಾಡಿ ನವೆಂಬರ್ 13 ರ ಸಂಜೆ 5.30 ರೊಳಗೆ ಸಂಬಂಧಪಟ್ಟ ದಾಖಲಾತಿಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿದ ಪ್ರತಿಗಳೊಂದಿಗೆ ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯ ಪ್ರಕಟಣೆ ತಿಳಿಸಿದೆ.

# ರಾಗಿ, ಕಿರು ಸಿರಿಧಾನ್ಯ, ಭತ್ತಕ್ಕೆ ಬೆಂಬಲ ಬೆಲೆ ನಿಗದಿ

**ಚಿಕ್ಕಮಗಳೂರು:** 2025-26ನೇ ಸಾಲಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಜಿಲ್ಲೆಯ ರೈತರು ಬೆಳೆದ ಗುಣಮಟ್ಟದ ಭತ್ತ, ರಾಗಿ ಮತ್ತು ಕಿರು ಸಿರಿಧಾನ್ಯ (ಸಾಮೆ ಮತ್ತು ನವಣೆ) ಗಳನ್ನು ನೇರವಾಗಿ ಖರೀದಿಸಲು ಸರ್ಕಾರವು ದರ ನಿಗದಿಪಡಿಸಿದೆ.

ಕ್ವಿಂಟಾಲ್‌ಗೆ ರಾಗಿ ರೂ. 4,886, ಭತ್ತ ಸಾಮಾನ್ಯ ರೂ.2,369 ಹಾಗೂ ಗ್ರೇಡ್ ಎ.ಗೆ ರೂ.2,389ರ ದರ ನಿಗದಿಪಡಿಸಲಾಗಿದ್ದರೆ, ಕಿರುಸಿರಿಧಾನ್ಯ (ಸಾಮೆ ಮತ್ತು ನವಣೆ)ಕ್ಕೆ ರೂ.4,886ರ ದರ ನಿಗದಿಪಡಿಸಲಾಗಿದೆ. ಈ ದರಗಳ ಅನ್ವಯ ಈಗಾಗಲೇ ಖರೀದಿ ಕೇಂದ್ರಗಳನ್ನು ತೆರೆದು ರೈತರ ನೋಂದಣಿ ಕಾರ್ಯ ಕೈಗೊಳ್ಳಲಾಗುತ್ತಿದೆ.

ಸಂಬಂಧಿಸಿದ ತಾಲ್ಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣಗಳಲ್ಲಿ ರಾಗಿ, ಭತ್ತ ಹಾಗೂ ಕಿರು ಸಿರಿಧಾನ್ಯಗಳನ್ನು ಖರೀದಿಸಲಾಗುತ್ತಿದ್ದು, ಖರೀದಿ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ರಾಗಿ ಮತ್ತು ಸಿರಿಧಾನ್ಯಗಳಿಗೆ ಚಿಕ್ಕಮಗಳೂರು (ಅಬ್ದುಲ್ ರೆಹಮಾನ್-9844597914), ಕಡೂರು-1 (ವೆಂಕಟೇಶ್ ಕೆ.ಡಿ.-8884306664) ಕಡೂರು-2 (ವಿನೋದ್ ಬಿ.ಹೆಚ್.-8139924699), ಬೀರೂರು (ಚೇತನ್ ಜಿ.-7353077888), ಪಂಚನಹಳ್ಳಿ-1 ಹಾಗೂ 2 (ಮರುಳಸಿದ್ದಪ್ಪ-9945587078), ತರೀಕೆರೆ (ವೆಂಕಟೇಶ್ ಕೆ.ಡಿ.-8884306664) ಹಾಗೂ ಅಜ್ಜಂಪುರ (ಚೇತನ್ ಟಿ.ಎಂ.-9164990799) ಈ ಅಧಿಕಾರಿಗಳನ್ನು ಸಂಪರ್ಕಿಸಬಹುದು.

ಭತ್ತ ಖರೀದಿಗೆ ಸಂಬಂಧಿಸಿದಂತೆ ತರೀಕೆರೆ (ಖರೀದಿ ಕೇಂದ್ರ ಎಪಿಎಂಸಿ ಯಾರ್ಡ್) ಹಾಗೂ ಶೃಂಗೇರಿ (ಖರೀದಿ ಕೇಂದ್ರ ಕೆಎಫ್‌ಸಿಎಸ್‌ಸಿ ಗೋದಾಮು)ಗೆ ಸಂಬಂಧಿಸಿದಂತೆ ಅಧಿಕಾರಿಗಳಾದ (ವೆಂಕಟೇಶ್ ಕೆ.ಡಿ.-8884306664), ಮೂಡಿಗೆರೆ, ಕೊಪ್ಪ (ಖರೀದಿ ಕೇಂದ್ರ ಎಪಿಎಂಸಿ ಯಾರ್ಡ್), ನ.ರಾ.ಪುರ (ಖರೀದಿ ಕೇಂದ್ರ ಕೆಎಫ್‌ಸಿಎಸ್‌ಸಿ ಗೋದಾಮು)ಕ್ಕೆ (ಅಬ್ದುಲ್ ರೆಹಮಾನ್-9844597914) ಅವರನ್ನು ಸಂಪರ್ಕಿಸಬಹುದು.

ಆಸಕ್ತ ರೈತರು ತಾವು ಹೊಂದಿರುವ ಫ್ರುಟ್ಸ್ ಐ.ಡಿ.ಸಂಖ್ಯೆ, ಆಧಾರ್ ಕಾರ್ಡ್ ಹಾಗೂ ಆಧಾರ್ ಜೋಡಣೆ ಆಗಿ ಎನ್‌ಪಿಸಿಐ ಆಕ್ಟಿವೇಟ್ ಆಗಿರುವ ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿಯೊಂದಿಗೆ ಸಂಬಂಧಿಸಿದ ಖರೀದಿ ಕೇಂದ್ರಗಳಿಗೆ ಹಾಜರಾಗಿ ನೋಂದಣಿ ಮಾಡಿಸಿಕೊಳ್ಳಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ ನೋಡಲ್ ಅಧಿಕಾರಿಯಾದ ಕೆಎಫ್‌ಸಿಎಸ್‌ಸಿಯ ಜಿಲ್ಲಾ ವ್ಯವಸ್ಥಾಪಕಿ ಅನುರಾಧ (9916698009, 9448496018) ಅವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸ್ತೆ ಡಾಂಬರೀಕರಣಕ್ಕೆ ಗುದ್ದಲಿ ಪೂಜೆ

**ಚಿಕ್ಕಮಗಳೂರು:** ನಗರಸಭೆ ವ್ಯಾಪ್ತಿಯಲ್ಲಿ ಎಸ್‌ಎಫ್‌ಸಿ ವಿಶೇಷ ಅನುದಾನ ಹಾಗೂ ರಾಜ್ಯಸಭಾ ಸಂಸದರ ಅನುದಾನ ಆಧರಿಸಿ ರಸ್ತೆ ಡಾಂಬರೀಕರಣ ಕಾಮಗಾರಿಗೆ ಶಾಸಕ ಹೆಚ್.ಡಿ.ತಮ್ಮಯ್ಯ ಅವರು ನವೆಂಬರ್ 15 ರಂದು ಗುದ್ದಲಿ ಪೂಜೆ ನೆರವೇರಿಸಲಿದ್ದಾರೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ.ಅಂದು ಬೆಳಿಗ್ಗೆ 8 ಗಂಟೆಯಿಂದ 8.30ರವರೆಗೆ ಗಾಂಧಿನಗರ ಆಟೋ ನಿಲ್ದಾಣದ ಬಳಿ ಬಿಎಸ್‌ಎನ್‌ಎಲ್ ಕಚೇರಿ ಪಕ್ಕದ ರಸ್ತೆ ಮತ್ತು ಕೊಲ್ಲಾಪುರದಮ್ಮ ದೇವಸ್ಥಾನ ಪಕ್ಕದ ರಸ್ತೆ ಕಾಮಗಾರಿಗಳಿಗೆ, ಬೆಳಿಗ್ಗೆ 8.45 ರಿಂದ 9.15ರವರೆಗೆ ಶಂಕರಪುರ 4ನೇ ಕ್ರಾಸ್ ರಸ್ತೆ ಡಾಂಬರೀಕರಣ, ಪೌರಕಾರ್ಮಿಕರ ವಸತಿಗೃಹ ರಸ್ತೆ ಮತ್ತು ಚಾಮುಂಡೇಶ್ವರಿ ದೇವಸ್ಥಾನ ರಸ್ತೆ ಅಭಿವೃದ್ಧಿ, ಬೈಪಾಸ್ ರಸ್ತೆಯಿಂದ ಅಂಬೇಡ್ಕರ್ ರಸ್ತೆ ಸಂಪರ್ಕಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಹಾಗೂ ಬೆಳಿಗ್ಗೆ 9.45 ರಿಂದ 10.15ರವರೆಗೆ ಟಿಪ್ಪುನಗರ ಬಿಲಾಲ್ ಮಸೀದಿ ಬಳಿ ಮಸೀದಿ ಪಕ್ಕದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

# ಮೆಕ್ಕೆಜೋಳ ಬೆಲೆ ಪಾತಾಳಕ್ಕೆ ಕುಸಿದಿದ್ದು ರೈತರು ವೈಜ್ಞಾನಿಕ ಬೆಲೆ ಸಿಗದೆ ಕಣ್ಣೀರು ಹಾಕುವ ಪರಿಸ್ಥಿತಿ



**ಹೊನ್ನಾಳಿ** : ಮೆಕ್ಕೆಜೋಳ ಬೆಲೆ ಪಾತಾಳಕ್ಕೆ ಕುಸಿದಿದ್ದು ಮೆಕ್ಕೆಜೋಳ ಬೆಳೆದ ರೈತರು ವೈಜ್ಞಾನಿಕ ಬೆಲೆ ಸಿಗದೆ ಕಣ್ಣೀರು ಹಾಕುವ ಪರಿಸ್ಥಿತಿಗೆ ರಾಜ್ಯ ಕಾಂಗ್ರೆಸ್ ಸರಕಾರ ಹೊಣೆ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಆರೋಪಿಸಿದರು.

ಸೋಮವಾರ ಪಟ್ಟಣದ ಎಪಿಎಂಸಿ ಆವರಣದಲ್ಲಿ ಮೆಕ್ಕೆಜೋಳ ಹಾಕಿಕೊಂಡು ಸ್ಥಿರ ಬೆಲೆಗಾಗಿ ಕಾಯುತ್ತಿರುವ ರೈತರ ಸಂಕಷ್ಟವನ್ನು ಆಲಿಸಿ ಅವರು ಮಾತನಾಡಿದರು.

ಕೇಂದ್ರ ಸರಕಾರ ಮೆಕ್ಕೆಜೋಳಕ್ಕೆ 2,400 ರೂಗಳನ್ನು ಬೆಂಬಲ ಬೆಲೆ ಘೋಷಿಸಿದರೂ ರಾಜ್ಯ ಸರಕಾರ ತನ್ನ ಪಾಲಿನ ಬೆಂಬಲ ಬೆಲೆಯನ್ನು ನೀಡುತ್ತಿಲ್ಲ ಹಾಗೂ ಖರಿಧಿ ಕೇಂದ್ರಗಳನ್ನು ತೆರೆದಿಲ್ಲ, ಇದರಿಂದ ರೈತರು ಮೆಕ್ಕೆಜೋಳವನ್ನು ದಲ್ಲಾಳಿಗಳು ಕೇಳಿದ ಬೆಲೆಗೆ ಕೊಡುವಂತ ದುಸ್ಥಿತಿಯನ್ನು ತಂದಿರುವುದರಿಂದ ರೈತರು ಕಣ್ಣೀರಲ್ಲಿ ಕೈ ತೊಳೆಯುವಂತೆ ಮಾಡಿದೆ ಎಂದು ರಾಜ್ಯ ಸರಕಾರವನ್ನು ತರಾಟೆಗೆ ತೆಗೆದುಕೊಂಡರು.

ಮೆಕ್ಕೆಜೋಳ ಬೆಳೆಯ ಎಕ್ಕರಿಗೆ ರೈತರು 20 ರಿಂದ 25 ಸಾವಿರ ಖರ್ಚು ಮಾಡಬೇಕು.ಈ ವರ್ಷ ಪ್ರತಿ ಎಕ್ಕರಗೆ 15 ರಿಂದ 18 ಕ್ವಿಂಟಾಲ್ ಬಂದರೆ ಹೆಚ್ಚು ಪರಿಸ್ಥಿತಿ ಹೀಗಿರುವಾಗ ರೈತ ಮೆಕ್ಕೆಜೋಳ ಬೆಳೆಯಲು ಹಾಕಿದ್ದ ಮೂಲ ಬಂಡವಾಳ ಬರುವುದು ಕಷ್ಟವಾಗಿದೆ, ಈಗಲಾದರೂ ರಾಜ್ಯ ಸರಕಾರ ಕೂಡಲೆ ಬೆಂಬಲ ಬೆಲೆ ನಿಗದಿ ಮಾಡಿ ಖರೀಧಿ ಕೇಂದ್ರಗಳನ್ನು ತೆರೆಯಬೇಕು ಎಂದು ರಾಜ್ಯ ಸರಕಾರವನ್ನು ಒತ್ತಾಯಿಸಿದರು.

ಉತ್ತರ ಕರ್ನಾಟಕದಲ್ಲಿ ಕಬ್ಬು ಬೆಳೆಗಾರರಿಗೂ ಯೋಗ್ಯ ಬೆಲೆಯನ್ನು ನೀಡಿದ ರೈತರ ಬದುಕಿನ ಜತೆ ಚೆಲ್ಲಾಟ ಆಡುತ್ತಿರುವ ಕಾಂಗ್ರೆಸ್ ಸರಕಾರಕ್ಕೆ ರೈತರ ಶಾಪ ತಟ್ಟದೆ ಬಿಡದು.

ಕಬ್ಬು ಬೆಳೆಗಾರರಿಗೆ ಸೂಕ್ತ ಬೆಲೆ ನೀಡಬೇಕೆಂದು ರೈತರು ಆಗ್ರಹಿಸಿ ಹೋರಾಟ ಮಾಡುತ್ತಿದ್ದಾಗ ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ ಅವರೂ ಸಹ ರೈತರ ಪ್ರತಿಭಟನೆಯಲ್ಲಿ ಪಾಲ್ಗೊಂಡರೆ ಮುಖ್ಯಮಂತ್ರಿ ಸಿದ್ದರಾಮಯ್ಯ,ಸಚಿವ ಎಂ.ಬಿ.ಪಾಟೀಲ್ ಅವರು ನಮ್ಮ ನಾಯಕರ ಬಗ್ಗೆ ಹಗುರವಾಗಿ ಮಾತನಾಡುತ್ತಿದ್ದಾರೆ ಇದು ಸಲ್ಲದು, ಅವರ ಬಗ್ಗೆ ಟೀಕೆ ಮಾಡುವ ನೈತಿಕತೆ ನಿಮಗಿಲ್ಲ,ಕೂಡಲೆ ಕಬ್ಬು ಬೆಳೆಗಾರರಿಗೆ ಸೂಕ್ತ ಬೆಂಬಲ ಬೆಲೆ ನೀಡುವುದನ್ನು ಬಿಟ್ಟು ಕುರ್ಚಿ ಕಚ್ಚಾಟದಲ್ಲಿ ಸಿಎಂ.ಡಿಸಿಎಂ ಹಾಗೂ ಸಚಿವರುಗಳು ಕಾಲ ಕಳೆಯುತ್ತಿದ್ದಿರಿ ಹೊರತು ರೈತರ ಸಂಕಷ್ಟಕ್ಕೆ ಧಾವಿಸುತ್ತಿಲ್ಲ ಎಂದು ರಾಜ್ಯ ಸರ್ಕಾರದ ವಿರುದ್ದ ಆಕ್ರೋಶ ವ್ಯಕ್ತಪಡಿಸಿದರು.

ಬಂದ್ ಹಾಗೂ ಪ್ರತಿಭಟನೆ :- ಮೆಕ್ಕೆಜೋಳ ಹಾಗೂ ಭತ್ತಕ್ಕೆ ವೈಜ್ಞಾನಿಕ ರೀತಿಯಲ್ಲಿ ಬೆಂಬಲ ಬೆಲೆ ನೀಡದೆ ಇದ್ದರೆ ಪ್ರಥಮ ಹಂತದಲ್ಲಿ ಹೊನ್ನಾಳಿ ಹಾಗೂ ನ್ಯಾಮತಿ ತಾಲೂಕು ಬಂದ್ ಮಾಡಲಾಗುವುದು ಹಾಗೂ ನಂತರ ದಿನಗಳಲ್ಲಿ ದಾವಣಗೆರೆ ಜಿಲ್ಲೆಯಾದ್ಯಂತ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲು ಪಕ್ಷದ ಮುಖಂಡರ ಜತೆ ಚರ್ಚಿಸಿ ದಿನಾಂಕ ಪ್ರಕಟಿಸಲಾಗುವುದು ಎಂದರು.

ಬಿಜೆಪಿ ತಾಲೂಕಾಧ್ಯಕ್ಷ ಅರಕೆರೆ ನಾಗರಾಜ್,ಪ್ರಧಾನ ಕಾರ್ಯದರ್ಶಿ ರಂಗನಾಥ್,ಪುರಸಭೆ ಮಾಜಿ ಅಧ್ಯಕ್ಷ ಬಾಬು ಹೋಬಳದಾರ್,ಪಕ್ಷದ ಮುಖಂಡರಾದ ನವೀನ್ ಇಂಚರ,ಮಹೇಶ್ ಹುಡೇದ್, ಪೇಟೆ ಪ್ರಶಾಂತ್,ಸುರೇಶ್,ಟಿ.ಬಿ.ಸರ್ಕಲ್ ಶ್ರೀನಿವಾಸ್ ಹಾಗೂ ರೈತರು ಇದ್ದರು.

# ಮಹಾರಾಣಾ ಪ್ರತಾಪಸಿಮಹ ಶಿಕ್ಷಣ ಸಂಸ್ಥೆಯಲ್ಲಿ ಭಕ್ತ ಕನಕದಾಸರ ಜಯಂತಿ



**ಬೆಟಗೇರಿ** : ನಗರದ ಮಹಾರಾಣಾ ಪ್ರತಾಪ ಸಿಂಹ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಇಂದು ಬೆಳಿಗ್ಗೆ ದಾಸವರ್ರೈಣ್ಯ ಭಕ್ತ ಕನಕದಾಸರ ಜಯಂತಿಯನ್ನು ಆಚರಿಸಲಾಯಿತು. ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿಗಳಾದ ಗಣೇಶಸಿಂಗ ಬ್ಯಾಳಿ ಇವರು ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಪಣೆ ಮಾಡಿದರು. ಸಮಸ್ತ ಸಿಬ್ಬಂದಿಯವರು ಸಹ ಪುಷ್ಪಾರ್ಪಣೆ ಮಾಡಿದರು.

ಈ ಸಂದರ್ಭದಲ್ಲಿ ಪ್ರಭಾರ ಮುಖ್ಯಾಧ್ಯಾಪಕರಾದ ಎಚ್.ಎಸ್.ಬ್ಯಾಳಿ, ಪ್ರಾಚಾರ್ಯರಾದ ಎಸ್.ಎಂ.ಉಳ್ಳಾಗಡ್ಡಿ, ಸಮಸ್ತ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮೆಸ್ಕಾಂ ಜನಸಂಪರ್ಕ ಸಭೆ

**ಚಿಕ್ಕಮಗಳೂರು:** ಮೆಸ್ಕಾಂನ ಆಲ್ದೂರು ವಿಭಾಗ ಕಚೇರಿಯಲ್ಲಿ ನವೆಂಬರ್ 13 ರಂದು ಬೆಳಿಗ್ಗೆ 11 ಗಂಟೆಗೆ ಜನಸಂಪರ್ಕ ಸಭೆಯನ್ನು ನಡೆಸಲಾಗುವುದು. ಸಾರ್ವಜನಿಕರು ಸಭೆಯಲ್ಲಿ ಭಾಗವಹಿಸುವಂತೆ ಮೆಸ್ಕಾಂ ಆಲ್ದೂರು ಉಪವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್‌ರವರು ಕೋರಿದ್ದಾರೆ.

# ಚಿಕ್ಕಮಗಳೂರು ರೋಟರಿ ಕ್ಲಬ್ ವತಿಯಿಂದ ನ.13ರಿಂದ16 'ಯುವಚೇತನ 2025-26'

**ಚಿಕ್ಕಮಗಳೂರು:** ಚಿಕ್ಕಮಗಳೂರು ರೋಟರಿಕ್ಲಬ್ ನವೆಂಬರ್ 13ರಿಂದ 16ರ ವರೆಗೆ ನಗರದಲ್ಲಿ ಯುವ ಪ್ರತಿಭೋತ್ಸವ 'ಯುವ ಚೇತನ 2025-26' ಆಯೋಜಿಸಿದೆ.ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಏಳು ವಿಧದ ಸ್ಪರ್ಧೆಗಳನ್ನು ನಗರದ ಎಂಎಲ್‌ವಿ ರೋಟರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು ವಿಜೇತರಿಗೆ ಟ್ರೋಫಿಯ ಜೊತೆಗೆ ಆಕರ್ಷಕ ಬಹುಮಾನಗಳನ್ನು ನೀಡಲಾಗುತ್ತಿದೆ. ಒಟ್ಟಾರೆ ಅತಿಹೆಚ್ಚು ಬಹುಮಾನ ಪಡೆದ ಶಾಲೆಗೆ ಸಮಗ್ರಪ್ರಶಸ್ತಿ ಟ್ರೋಫಿ ನೀಡಿ ಗೌರವಿಸಲಾಗುವುದೆಂದು ಚಿಕ್ಕಮಗಳೂರು ರೋಟರಿ ಅಧ್ಯಕ್ಷ ಎನ್.ಪಿ.ಲಿಖಿತ್ ತಿಳಿಸಿದ್ದಾರೆ. ನವೆಂಬರ್ 13ರ ಗುರುವಾರ ಸಂಜೆ 4.30ಕ್ಕೆ ಯುವಚೇತನವನ್ನು ತಾಲ್ಲೂಕು ಶಿಕ್ಷಣಾಧಿಕಾರಿ ಟಿ.ಆರ್.ರುದ್ರಪ್ಪ ಉದ್ಘಾಟಿಸಲಿದ್ದು, ರೋಟರಿ ಅಧ್ಯಕ್ಷ ಲಿಖಿತ್ ಅಧ್ಯಕ್ಷತೆ ವಹಿಸುವರು. ಅಂದು ಸಂಜೆ 5ಗಂಟೆಯಿಂದ ಸಮೂಹ ನೃತ್ಯ ಸ್ಪರ್ಧೆ ನಡೆಯಲಿದೆ. ನವೆಂಬರ್ 14ರ ಶುಕ್ರವಾರ ಸಂಜೆ 4.30ಕ್ಕೆ ಸಾಮಾನ್ಯ ರಸಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿದೆ. ನವೆಂಬರ್ 15ರ ಶನಿವಾರ ಮಧ್ಯಾಹ್ನ 3ಗಂಟೆಗೆ ಚಿತ್ರ ಬಿಡಿಸುವ ಸ್ಪರ್ಧೆ, 3.30ಕ್ಕೆ ನಿಧಾನ ಸೈಕಲ್‌ರೇಸ್, 5.30ಕ್ಕೆ ಪರಿಸರ ರಸಪ್ರಶ್ನೆ ಸ್ಪರ್ಧೆಗಳು ನಡೆಯಲಿವೆ.ನವೆಂಬರ್ 16ರ ಭಾನುವಾರ ಬೆಳಗ್ಗೆ 9ಗಂಟೆಗೆ ಹಾಡುಗಾರಿಕಾ ಸ್ಪರ್ಧೆ ನಂತರ 10ಗಂಟೆಗೆ ಬಾಕ್ಸ್ ಕ್ರಿಕೆಟ್ ಆಯೋಜಿಸಲಾಗಿದೆ. ಸಂಜೆ 5ಗಂಟೆಗೆ ಸಮಾರೋಪ ಸಮಾರಂಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮಅಮಟೆ ಬಹುಮಾನ ವಿತರಿಸುವರು.1990ರಿಂದ ಚಿಕ್ಕಮಗಳೂರು ರೋಟರಿ ಕ್ಲಬ್ ನಿರಂತರವಾಗಿ ಸ್ವಾಮಿ ವಿವೇಕಾನಂದರ ಜನ್ಮದಿನ ಜನವರಿ 12ರ ರಾಷ್ಟ್ರೀಯ ಯುವಸಪ್ತಾಹದ ಅಂಗವಾಗಿ ಯುವಚೇತನವನ್ನು ನಡೆಸಿಕೊಂಡು ಬರುತ್ತಿದೆ. ಯುವಚೇತನ ಉಪಸಮಿತಿ ಅಧ್ಯಕ್ಷ ಎಂ.ಎಸ್.ಕಿರಣ್,, ಜಿಲ್ಲಾ ಯುವಸೇವಾ ನಿರ್ದೇಶಕ ಫಣಿಂದ್ರನಾಡಿಗ್, ರೋಟರಿ ಕಾರ್ಯದರ್ಶಿ ಹರ್ಷಿತ್‌ವಶಿಷ್ಠ ನೇತೃತ್ವದ ತಂಡ ಸಿದ್ಧತೆ ನಡೆಸಿವೆ ಎಂದು ರೋಟರಿ ಪ್ರಕಟಣೆ ತಿಳಿಸಿವೆ.

# ಸಹಾಯಧನಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2025-26ನೇ ಸಾಲಿನ ತೋಟಗಾರಿಕೆ ಇಲಾಖೆಯ ರಾಷ್ಟ್ರೀಯ ಕೃಷಿ ವಿಕಾಸ (ಖಏಗಿಜ) ಯೋಜನೆಯಡಿ ಕೊಯ್ಲೋತ್ತರ ನಿರ್ವಹಣೆಗಾಗಿ ಪ್ಲಾಸ್ಟಿಕ್ ಕ್ರೇಟ್ಸ್ ಖರೀದಿಗಾಗಿ ಸಹಾಯಧನ ಪಡೆಯಲು ತೋಟಗಾರಿಕೆ ಬೆಳೆ ಬೆಳೆಯುವ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟರ್ ಗೆ ರೂ.35000/- ರಂತೆ ಗರಿಷ್ಠ ಎರಡು ಹೆಕ್ಟೇರ್ ವರೆಗೆ ಶೇ.50 ರಂತೆ ಸಹಾಯಧನ ನೀಡಲಾಗುವುದು. ಆಸಕ್ತಿಯುಳ್ಳ ರೈತರು ನವೆಂಬರ್ 20 ರೊಳಗಾಗಿ ಆಯಾ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ರವರ ಕಚೇರಿಗಳಲ್ಲಿ ಅರ್ಜಿಯನ್ನು ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ತಾಲ್ಲೂಕು ತೋಟಗಾರಿಕೆ ಕಚೇರಿಗಳಿಗೆ ಹಾಗೂ ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತ ಪ್ರಜಾಪ್ರಭುತ್ವ ವಿಶ್ವಕ್ಕೆ ಮಾದರಿಯಾಗಿದೆ : ನ್ಯಾ. ಟಿ.ಪಿ ರಾಮಲಿಂಗೆ ಗೌಡ




**ಚಿಕ್ಕಬಳ್ಳಾಪುರ:** ಕಾನೂನುಗಳು, ಹಕ್ಕುಗಳು ಹಾಗೂ ಕರ್ತವ್ಯಗಳ ಬಗ್ಗೆ ತಿಳಿದುಕೊಳ್ಳುವ ಜೊತೆಗೆ ಇತರರಿಗೂ ತಿಳಿಸಿಕೊಡಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಟಿ.ಪಿ ರಾಮಲಿಂಗೆ ಗೌಡ ರವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆ, ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ನಗರದ ಜಿಲ್ಲಾ ಕನ್ನಡ ಭವನದಲ್ಲಿ ನಡೆದ "ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ"ಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಾತು ಬಲ್ಲವನಿಗೆ ಜಗಳವಿಲ್ಲ, ಊಟ ಬಲ್ಲವನಿಗೆ ರೋಗವಿಲ್ಲ ಎಂಬಂತೆ ಕಾನೂನು ಬಲ್ಲವನಿಗೆ ಯಾರ ಭಯವಿರುವುದಿಲ್ಲ. ಯಾವುದೇ ಅನ್ಯಾಯ, ಶೋಷಣೆಯನ್ನು ಕಾನೂನು ಬದ್ಧವಾಗಿ ಪರಿಹರಿಸಿಕೊಳ್ಳಬೇಕು. ಬಲ ಪ್ರಯೋಗ ಮಾಡಬಾರದು ನ್ಯಾಯ ಉಳ್ಳವರ ಸ್ವತ್ತಲ್ಲ, ಬಡವ, ಬಲ್ಲಿದ ಹಾಗೂ ಜಾತಿ ಮತ ಬೇದವಿಲ್ಲದೆ ಎಲ್ಲರಿಗೂ ಸಿಗಬೇಕು. ನ್ಯಾಯ ನ್ಯಾಯಾಲಯಗಳಲ್ಲಿ ಮಾತ್ರ ಇರುವಂತದ್ದಲ್ಲ. ಕೇವಲ ನ್ಯಾಯಾಲಯಗಳ ಪ್ರಕ್ರಿಯೆಗಳಿಗೆ ಸೀಮಿತವೂ ಅಲ್ಲ. ನ್ಯಾಯವಿಲ್ಲದ ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಇರುವುದಿಲ್ಲ. ನ್ಯಾಯವನ್ನು ಸರ್ವರಿಗೂ ಒದಗಿಸುವ ನಿಟ್ಟಿನಲ್ಲಿ ಕಾನೂನು ಸಹಾಯ, ಜನಜಾಗೃತಿ ಶಿಬಿರ, ಲೋಕ ಅದಾಲತ್ ಗಳ ಮೂಲಕ ವಿವಾದಗಳ ಇತ್ಯರ್ಥ ಮಾಡುವುದು. ಮಹಿಳೆಯರು, ಮಕ್ಕಳು, ವಯೋವೃದ್ಧರು ಹಾಗೂ ದುರ್ಬಲ ವರ್ಗದವರಿಗೆ ಕಾನೂನು ಮಾರ್ಗದರ್ಶನ ನೀಡುವುದು ಕಾನೂನು ಸೇವಾ ಪ್ರಾಧಿಕಾರದ ಆಶಯವಾಗಿದೆ. ಅನ್ಯಾಯಕ್ಕೆ ಒಳಗಾಗಿ ನ್ಯಾಯಾಲಯಗಳ ಕದ ತಟ್ಟಲು ಸಹ ಸಾಧ್ಯವಿರದ ಅಶಕ್ತರ ಮನೆಬಾಗಿಲಿಗೆ ನ್ಯಾಯವನ್ನು ತಲುಪಿಸುವ ಉದ್ದೇಶದಿಂದ ಹಲವು ಯುಕ್ತ ಕ್ರಮಗಳನ್ನು ಪ್ರಾಧಿಕಾರ ನಿರಂತರವಾಗಿ ಮಾಡುತ್ತಿದೆ. ಇದರ ಅನುಕೂಲಗಳನ್ನು ಸಾರ್ವಜನಿಕರು ಸದ್ವಿನಿಯೋಗ ಮಾಡಿಕೊಳ್ಳಬೇಕು. ನ್ಯಾಯ ವಿಳಂಬವಾದಷ್ಟು ನ್ಯಾಯ ನಿರಾಕರಣೆಗೆ ಸಮವಾಗುತ್ತದೆ. ಆದ್ದರಿಂದ ತ್ವರಿತ ನ್ಯಾಯವನ್ನು ನೊಂದವರಿಗೆ ನೀಡಬೇಕು. ಈ ಕಾರ್ಯದಲ್ಲಿ ನ್ಯಾಯಾಧೀಶರ ಹಾಗೂ ವಕೀಲರ ಪಾತ್ರ ಬಹಳ ಮುಖ್ಯವಾಗಿರುತ್ತದೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಿಲ್ಲಾಡಳಿತದ ಅಧಿಕಾರಿಗಳು ಹಾಗೂ ನ್ಯಾಯಾಂಗದ ಸಮನ್ವಯತೆಯನ್ನು ಸಾಧಿಸಿಕೊಂಡು ಇನ್ನಷ್ಟು ಉತ್ತಮ ಆಡಳಿತವನ್ನು ಜನರಿಗೆ ತಲುಪಿಸುವಂತಹ ವಾತಾವರಣವನ್ನು ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

2024 ನವೆಂಬರ್ ಮಾಹೆಯಿಂದ 2025 ಅಕ್ಟೋಬರ್ ಮಾಹೆಯವರೆಗೆ ಜಿಲ್ಲಾದ್ಯಂತ 383ಕ್ಕೂ ಹೆಚ್ಚು ಕಾನೂನು ಅರಿವು ನೆರವು ಕಾರ್ಯಕ್ರಮಗಳನ್ನು ಮಾಡಲಾಗಿದೆ. ಕಳೆದ ಫೆಬ್ರವರಿ ಮಾಹೆಯಲ್ಲಿ 150 ಶಾಲೆಗಳಲ್ಲಿ ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ, ಬಾಲ ಕಾರ್ಮಿಕತೆ ವಿರೋಧಿ ಕಾಯ್ದೆ ಹಾಗೂ ಇತರ ಕಾನೂನು ಕಾಯ್ದೆಗಳ ಕುರಿತು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಆದರೂ ಕೂಡ ಜಿಲ್ಲೆಯಲ್ಲಿ ಕಳೆದ 10 ತಿಂಗಳಲ್ಲಿ 259 ಬಾಲ ಗರ್ಭಿಣಿ ಪ್ರಕರಣಗಳು ಪತ್ತೆಯಾಗಿವೆ. ಇಂತಹ ಪ್ರಕರಣಗಳನ್ನು ಮುಂದಿನ ದಿನಗಳಲ್ಲಿ ಸಂಪೂರ್ಣವಾಗಿ ನಿಯಂತ್ರಿಸಲು ಜಿಲ್ಲೆಯ ಪ್ರತಿ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆಯ ಕುರಿತು ಒಂದು ಗಂಟೆಯ ಕಾಲ ಅರಿವು ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳುತ್ತೇವೆ. ಅಲ್ಲದೇ ಬೀದಿ ನಾಟಕ, ರೀಲ್ಸ್, ಕಿರುಚಿತ್ರ, ಚಿತ್ರಕಲೆ ಸ್ಪರ್ಧೆಗಳನ್ನು ಏರ್ಪಡಿಸುವ ಮೂಲಕ ಅರಿವು ಮೂಡಿಸಲಾಗುವುದು ಎಂದು ತಿಳಿಸಿದರು.

ಅಪರ ಪೊಲೀಸ್ ಅಧೀಕ್ಷಕ ಜಗನ್ನಾಥ್ ರೈ ರವರು ವಿವಿಧ ಕಾನೂನುಗಳ ಬಗ್ಗೆ ಹಾಗೂ ಯಾವುದೇ ವಂಚನೆಗಳಿಗೆ ಒಳಗಾಗದಂತೆ ಅನುಸರಿಸಬೇಕಾದ ಮಾರ್ಗಗಳ ಬಗ್ಗೆ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

ಈ ವೇಳೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಟಿ.ಪಿ ರಾಮಲಿಂಗೆ ಗೌಡ ಅವರು ಪ್ರತಿಜ್ಞಾವಿಧಿಯನ್ನು ಬೋಧಿಸಿದರು ಹಾಗೂ ಸೆಲ್ಫಿ ಬೂತ್ ಗಳನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಗೌರವಾನ್ವಿತ ನ್ಯಾಯಾಧೀಶರಾದ ಎಸ್.ವಿ.ಕಾಂತರಾಜು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನೌತಾಜ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಕೆ.ವಿ. ಅಭಿಲಾಷ್, ಉಪಾಧ್ಯಕ್ಷ ಮುನಿರಾಜು, ಪ್ರಧಾನ ಕಾರ್ಯದರ್ಶಿ ವೆಂಕಟೇಶ್ ಹಾಗೂ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜಿಲ್ಲಾ ಯೋಜನಾ ಸಮಿತಿ ಚುನಾವಣೆ ವೇಳಾಪಟ್ಟಿ

**ದಾವಣಗೆರೆ:** ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣೆ) ನಿಯಮಗಳ ಮೇರೆಗೆ ಪುರಸಭಾ, ಪಟ್ಟಣ ಪಂಚಾಯಿತಿ ಮತ ಕ್ಷೇತ್ರದಿಂದ ಜಿಲ್ಲೆಯ ಜಿಲ್ಲಾ ಯೋಜನಾ ಸಮಿತಿಗೆ ಸದಸ್ಯರ ಸ್ಥಾನಗಳಿಗೆ ಚುನಾವಣೆ ನಡೆಸಲು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಜಿಲ್ಲಾ ಯೋಜನಾ ಸಮಿತಿಯ ಪದನಿಮಿತ್ತ ಚುನಾವಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲರಾವ್ ವೇಳಾಪಟ್ಟಿಯನ್ನು ಹೊರಡಿಸಿರುತ್ತಾರೆ.

ನವಂಬರ್ 10 ರಿಂದ 17 ರವರೆಗೆ ಜಿಲ್ಲಾ ಪಂಚಾಯತ್ ಯೋಜನಾ ವಿಭಾಗದಲ್ಲಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಸಲ್ಲಿಸ ಸಬೇಕು. ನ.17 ರಂದು ನಾಮಪತ್ರ ಪರಿಶೀಲಿಸುವ ದಿನ. ನ.19 ಉಮೇದಾರಿಕೆಯನ್ನು ಹಿಂತೆಗೆದುಕೊಳ್ಳುವ ದಿನ. ನ.29 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಜಿಲ್ಲಾ ಪಂಚಾಯತ್‌ಯಲ್ಲಿ ಮತದಾನ ಅವಶ್ಯವಿದ್ದರೆ ಮತದಾನ ನಡೆಸಿ ಅದೇ ದಿನ ಸಂಜೆ 5 ಗಂಟೆಗೆ ಮತ ಎಣಿಕೆ ಮಾಡಲಾಗುತ್ತದೆ. ಚುನಾಯಿಸಬೇಕಾದ ಸ್ಥಾನ 2, ಪುರಸಭೆ ಸದಸ್ಯರ ಒಟ್ಟು ಸಂಖ್ಯೆ 23 ಇರುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಕಲಾಶ್ರೀ ಆಯ್ಕೆಗೆ ಸ್ಪರ್ಧೆ

**ದಾವಣಗೆರೆ :** ರಾಜ್ಯ ಭಾಲಭವನ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಬಾಲಭವನ ಸಮಿತಿ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಇವರುಗಳ ಸಂಯುಕ್ತಾಶ್ರಯದಲ್ಲಿ ನವಂಬರ್ 12 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜೆ.ಹೆಚ್ ಪಟೇಲ್ ಬಡಾವಣೆಯ ಜಿಲ್ಲಾ ಬಾಲಭವನದಲ್ಲಿ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆಯ ಅಂಗವಾಗಿ ಜಿಲ್ಲಾ ಮಟ್ಟದ ಕಲಾಶ್ರೀ ಶಿಬಿರ ಆಯ್ಕೆಯ ಸ್ಪರ್ಧಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

## ವೃತ್ತಿಪರ ತರಬೇತಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೈಗಾರಿಕಾ ಮತ್ತು ವಾಣಿಜ್ಯ ನಿರ್ದೇಶನಾಲಯ ಹಾಗೂ ಕಾರ್ಪೋರೇಟ್ ಸಾಮಾಜಿಕ ಜವಬ್ದಾರಿ ಯೋಜನೆಯಡಿ ಪಾಲಿಮರ್ ಮತ್ತು ಪ್ಲಾಸ್ಟಿಟ್ ಕ್ಷೇತ್ರದಲ್ಲಿ ಉಚಿತ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಭಾರತ ಸರ್ಕಾರದ ಕೇಂದ್ರಿಯ ಪೆಟ್ರೋಕೆಮಿಕಲ್ಸ್ ತಂತ್ರಜ್ಞಾನ ಸಂಸ್ಥೆ ವತಿಯಿಂದ ಮೈಸೂರಿನ ಸಿಪೆಕ್‌ನಲ್ಲಿ ಎಲ್ಲಾ ವರ್ಗದ ಬಡ ನಿರುದ್ಯೋಗಿ ಯುವಕ ಹಾಗೂ ಯುವಕರಿಗೆ ಪಾಲಿಮರ್ ತಂತ್ರಜ್ಞಾನದಲ್ಲಿ 3 ರಿಂದ 6 ತಿಂಗಳ ಉಚಿತ ತರಬೇತಿಗಳನ್ನು ನೀಡಲಾಗುತ್ತಿದೆ. 18 ರಿಂದ 35 ವರ್ಷದೊಳಗಿನ, 2.5 ಲಕ್ಷದೊಳಗಿನ ಕುಟುಂಬ ಆದಾಯ ಹೊಂದಿರುವ 10 ತರಗತಿ ಉತ್ತೀರ್ಣರಾದ ವಿದ್ಯಾರ್ಥಿಗಳು ತರಬೇತಿ ಪಡೆಯಬಹುದಾಗಿದೆ.

ಪ್ಲಾಸ್ಟಿಕ್ ಪ್ರೊಸೆಸಿಂಗ್‌ನಲ್ಲಿ ಅಸಿಸ್ಟೆಂಟ್ ಮೆಷಿನ್ ಅಪರೇಟರ್, ಮೆಷಿನ್ ಅಪರೇಟರ್ ಇಂಜಕ್ಷನ್ ಮೋಲ್ಡಿಂಗ್, ಮೆಷಿನ್ ಆಪರೇಟರ್ ಮತ್ತು ಪ್ರೋಗ್ರ್ಯಾಮರ್‌ಗಳಿಗೆ ಕೌಶಲದ ತರಬೇತಿ ನೀಡಲಾಗುವುದು, ತರಬೇತಿ ನಂತರ ಉದ್ಯೋಗಾವಕಾಶವನ್ನು ಕಲ್ಪಿಸಿ ಕೊಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಿಪೆಟ್ ಕಛೇರಿ ದೂರವಾಣಿ ಸಂಖ್ಯೆ 9380756024, 9741719645 ಹಾಗೂ 9483431968 ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ದಾಖಲಾತಿ ವಿವರಗಳಿಗೆ ವೆಬ್‌ಸೈಟ್ www.cipet.gov.in ಭೇಟಿ ನೀಡಬಹುದು ಎಂದು ತರಬೇತಿ ವಿಭಾಗದ ವ್ಯವಸ್ಥಾಪಕ ಬಿ.ಎನ್. ಮೋಹನ್ ತಿಳಿಸಿದ್ದಾರೆ.

## ನ.15 ರಂದು ಕುವೆಂಪು ಕಲಾಮಂದಿರದಲ್ಲಿ "ದಕ್ಷಯಜ್ಞ" ಕಾಲಮಿತಿ ಯಕ್ಷಗಾನ

**ಚಿಕ್ಕಮಗಳೂರು:** ಯಕ್ಷಗಾನ ಅಭಿಮಾನಿ ಬಳಗ, ಸಾಂಸ್ಕೃತಿಕ ಸಂಘ ಮತ್ತು ಹವ್ಯಕ ಬಳಗದ ಆಶ್ರಯದಲ್ಲಿ ನಗರದ ಕುವೆಂಪು ಕಲಾಮಂದಿರದಲ್ಲಿ ನ.15 ರಂದು ಸಂಜೆ 5 ಗಂಟೆಗೆ ಬಂಗಾರ ಮಕ್ಕಿಯ ಶ್ರೀ ವೀರಾಂಜನೇಯಯಕ್ಷಮಿತ್ರ ಮಂಡಳಿ, ಚಿಟ್ಟಾಣಿ ಬಳಗದಿಂದ, "ದಕ್ಷಯಜ್ಞ" ಕಾಲಮಿತಿ ಯಕ್ಷಗಾನ ನಡೆಯಲಿದೆ.

ವಿವಿಧ ಪ್ರಸಿದ್ಧ ಮೇಳಗಳ ಖ್ಯಾತ ಕಲಾವಿದರು ಪಾಲ್ಗೊಳ್ಳುವ ಈ ಪ್ರಸಂಗದಲ್ಲಿ ಭಾಗವತರಾಗಿ ಬ್ರಹ್ಮೂರು ಶಂಕರ ಭಟ್ಟ, ಮದ್ದಳೆಯಲ್ಲಿ ಹಂದ್ರಮನೆ ನರಸಿಂಹ ಭಟ್ಟ, ಚಂಡೆಯಲ್ಲಿ ಹಳವಳ್ಳಿ ಗಣೇಶಗಾಂವ್ಕರ ಭಾಗವಹಿಸಲಿದ್ದಾರೆ. ಈಶ್ವರನಾಗಿ ಸುಬ್ರಹ್ಮಣ್ಯ ಚಿಟ್ಟಾಣಿ, ದಾಕ್ಷಾಯಿಣಿಯಾಗಿ ಯಲಗುಪ್ಪ ಸುಬ್ರಹ್ಮಣ್ಯ ಹೆಗಡೆ, ದಕ್ಷನಾಗಿ ಸಂಜಯ ಬೆಳೆಯೂರು, ಅಗ್ನಿಯಾಗಿ ವಿನಾಯಕ ಗುಂಡಬಾಳ, ವೀರಭದ್ರನಾಗಿ ನಿರಂಜನ ಜಾಗನಳ್ಳಿ, ದೇವೇಂದ್ರನಾಗಿ ನಾಗೇಶ ಕುಳಿಮನೆ, ಹಾಸ್ಯ ಪಾತ್ರದಲ್ಲಿ ಶ್ರೀಧರ ಹೆಗಡೆ ಚಪ್ಪರಮನೆ, ಬ್ರಾಹ್ಮಣತಿಯಾಗಿ ರಕ್ಷಿತಾ ಕುಳಿಮನೆ ಅಭಿನಯಿಸಲಿದ್ದಾರೆ.

ಸಭಾ ಕಾರ್ಯಕ್ರಮ ಇಲ್ಲದಿರುವುದರಿಂದಾಗಿ ಯಕ್ಷಗಾನ ಸಮಯಕ್ಕೆ ಸರಿಯಾಗಿ ಆರಂಭವಾಗುತ್ತದೆ. ಉಚಿತ ಪ್ರವೇಶವಿದೆ ಎಂದು ಯಕ್ಷಗಾನ ಅಭಿಮಾನಿ ಬಳಗದ ಸಂಚಾಲಕ ಕೆ.ಎನ್.ಮಂಜುನಾಥ ಭಟ್ ತಿಳಿಸಿದ್ದಾರೆ.

## ತಮ್ಮ ಗಂಟಲು ಸೀಳಿದರೂ ಪರ್ವಾಗಿಲ್ಲ ಮತದಾರರ ಹಕ್ಕುಗಳನ್ನು ರಕ್ಷಿಸುತ್ತೇವೆ: ಎಸ್‌ಐಆರ್ ವಿರುದ್ಧ ದೀದಿ ಗರಂ

**ಹೊಸದಿಲ್ಲಿ :** ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಚುನಾವಣಾ ರೋಲ್‌ಗಳ ವಿಶೇಷ ತೀವ್ರ ಪರಿಷ್ಕರಣೆಯನ್ನು "ವೋಟ್‌ಬಂಡಿ" ಎಂದು ಕರೆದಿದ್ದಾರೆ. ಮತದಾರರ ಹಕ್ಕುಗಳನ್ನು ರಕ್ಷಿಸುವುದಾಗಿ, ಅದಕ್ಕಾಗಿ ತಮ್ಮ ಗಂಟಲು ಸೀಳಿದರೂ ಪ್ರತಿಭಟಿಸುವುದಾಗಿ ಅವರು ಹೇಳಿದ್ದಾರೆ.

ಚುನಾವಣಾ ಆಯೋಗಕ್ಕೆ ಈ ವಿಶೇಷ ಪರಿಷ್ಕರಣೆಯನ್ನು ತಕ್ಷಣವೇ ನಿಲ್ಲಿಸುವಂತೆ ಒತ್ತಾಯಿಸಿದ ಅವರು, ಇದು ಬಿಹಾರದಲ್ಲಿ ನಡೆದಂತೆ ಸುಲಭವಾಗಿ ಬಂಗಾಳದಲ್ಲಿ ನಡೆಯುವುದಿಲ್ಲ ಎಂದು ಎಚ್ಚರಿಸಿದ್ದಾರೆ. ನಿಜವಾದ ಮತದಾರರೆಲ್ಲರೂ ಅಂತಿಮ ಪಟ್ಟಿಯಲ್ಲಿ ಸೇರ್ಪಡೆಯಾಗುವವರೆಗೆ ಈ ಪ್ರಕ್ರಿಯೆ ದೋಷರಹಿತವಾಗಿ ನಡೆಯಬೇಕು ಎಂದು ಅವರು ಹೇಳಿದರು.

# ನ್ಯಾಯ ಪಡೆಯುವ ಅವಕಾಶದಿಂದ ಯಾರೂ ವಂಚಿತರಾಗಬಾರದು: ವಿ.ಹನುಮಂತಪ್ಪ

**ಚಿಕ್ಕಮಗಳೂರು, ನ.11:** ಭಾರತ ಸಂವಿಧಾನವು ಪ್ರತಿಯೊಬ್ಬ ಪ್ರಜೆಗೂ ಸಮಾನ ಅವಕಾಶಗಳನ್ನು ಕಲ್ಪಿಸಿದ್ದು, ಆರ್ಥಿಕವಾಗಿ ದುರ್ಬಲರಾಗಿರುವ, ಅಂಗವೈಕಲ್ಯದ ಕಾರಣದಿಂದ ಯಾರೂ ಕೂಡ ನ್ಯಾಯ ಪಡೆಯುವ ಅವಕಾಶಗಳಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದು ಗೌರವಾನ್ವಿತ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ಹೇಳಿದರು.



ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಶ್ರೀ ಶಾರದಾ ಸ್ಕೂಲ್ ಆಫ್ ಲಾ, ಜಿಲ್ಲಾ ವಕೀಲರ ಸಂಘ, ವಾರ್ತಾ ಇಲಾಖೆ ವತಿಯಿಂದ ಲಾ ಕಾಲೇಜಿನಲ್ಲಿ ನವೆಂಬರ್ 10 ರಂದು ನಡೆದ ರಾಷ್ಟ್ರೀಯ ಕಾನೂನು ಸೇವೆಗಳ ದಿನದ ಅಂಗವಾಗಿ ಕಾನೂನು ಸಾಕ್ಷರತಾ ದಿನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನ್ಯಾಯ ಪಡೆಯುವಲ್ಲಿ ಯಾರೂ ವಂಚಿತರಾಗಬಾರದೆನ್ನುವ ಉದ್ದೇಶಕ್ಕಾಗಿ ಸೂಕ್ತ ಶಾಸನ, ಯೋಜನೆಗಳು ಅಥವಾ ಯಾವುದೇ ಇತರ ರೀತಿಯಲ್ಲಿ ಉಚಿತ ಕಾನೂನು ನೆರವನ್ನು ಒದಗಿಸಬೇಕು. ಸಂವಿಧಾನದ ಅನುಚ್ಛೇದ 14ರ ಪ್ರಕಾರ ಕಾನೂನುಗಳು ಎಲ್ಲರಿಗೂ ಸಮಾನ ರಕ್ಷಣೆಯನ್ನು ನೀಡಬೇಕು ಎಂದು ಹೇಳಿದರು.

ಕಾನೂನು ನೆರವು ರಕ್ಷಣಾ ಸಲಹೆಗಾರ ಡಿ.ನಟರಾಜು ಭಾರತದ ಸಂವಿಧಾನದ ಅನುಚ್ಛೇದ 21 "ಜೀವನ ಮತ್ತು ವೈಯಕ್ತಿಕ ಸ್ವಾತಂತ್ರ್ಯದ ರಕ್ಷಣೆ" ಬಗ್ಗೆ ಸಮರ್ಥವಾಗಿ ಪ್ರತಿಪಾದಿಸಿದೆ. ಅನುಚ್ಛೇದ 19 (1) (ಎ) ಪ್ರಕಾರ ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವಿರುವ ಹಿನ್ನೆಲೆಯಲ್ಲಿ ಪ್ರತಿಯೊಬ್ಬ ನಾಗರಿಕನು ತನ್ನ ಅಭಿಪ್ರಾಯ, ಆಲೋಚನೆ ಮತ್ತು ವಿಚಾರಗಳನ್ನು ಮುಕ್ತವಾಗಿ ಮೌಖಿಕವಾಗಿ, ಬರವಣಿಗೆಯಲ್ಲಿ ಅಥವಾ ಇತರೆ ಯಾವುದೇ ರೀತಿಯಲ್ಲಿ ವ್ಯಕ್ತಪಡಿಸುವ ಹಕ್ಕನ್ನು ಹೊಂದಿರುತ್ತಾನೆ ಎಂದು ಹೇಳಿದರು.

ಶಾರದಾ ಸ್ಕೂಲ್ ಆಫ್ ಲಾ ಸಂಸ್ಥೆಯ ಸಂಸ್ಥಾಪಕ ಮತ್ತು ವ್ಯವಸ್ಥಾಪಕ ಜಿ.ಆರ್.ಶ್ರವಣ್, ಶಾರದಾ ಎಜುಕೇಶನ್ ಟ್ರಸ್ಟ್‌ನ ಆಡಳಿತ ಸಮಿತಿ ಸದಸ್ಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ನಿವೃತ್ತ ಉಪ ಕಾರ್ಯದರ್ಶಿ ಕೆ.ವಿ.ಶ್ರೀನಿವಾಸ ಮೂರ್ತಿ ಮಾತನಾಡಿದರು. ಕಾಲೇಜಿನ ಪ್ರಭಾರ ಪ್ರಾಂಶುಪಾಲ ಎಸ್.ಕುಮಾರ ಅಧ್ಯಕ್ಷತೆ ವಹಿಸಿದ್ದರು.

# ಸಿಎಂ ಬದಲಾವಣೆ: ಹೈಕಮಾಂಡ್ ನಡೆ ನಿಗೂಢ–ಸಿದ್ದು, ಡಿಕೆಶಿ ಬಣದಲ್ಲಿ ಗೊಂದಲ

**ಬೆಂಗಳೂರು:** ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರವಾಗಿ ಕಾಂಗ್ರೆಸ್ ಹೈಕಮಾಂಡ್ ನಡೆ ನಿಗೂಢವಾಗಿದೆ. ಪರಿಣಾಮ ತೀವ್ರತೆ ಪಡೆದುಕೊಂಡಿದ್ದ ನಾಯಕತ್ವ ಬದಲಾವಣೆ ವಿಚಾರ ತಕ್ಕ ಮಟ್ಟಿಗೆ ಸೈಲೆಂಟ್ ಆಗಿದೆ. ದೆಹಲಿ ನಾಯಕರ ನಡೆಯಿಂದ ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ಬಣದಲ್ಲಿ ಗೊಂದಲ ಸೃಷ್ಟಿಯಾಗಿದೆ. ಹೀಗಾಗಿ ಮುಂದೇನು ಎಂಬ ವಿಚಾರವಾಗಿ ಸ್ಪಷ್ಟ ಉತ್ತರ ಎರಡು ಬಣದಲ್ಲಿ ಇಲ್ಲವಾಗಿದೆ.



ನಾಯಕತ್ವ ಬದಲಾವಣೆ ವಿಚಾರವಾಗಿ ಗೊಂದಲ ದಿನದಿಂದ ದಿನಕ್ಕೆ ತೀವ್ರವಾಗಿದೆ. ಹೈಕಮಾಂಡ್ ಯಾವುದನ್ನೂ ಸ್ಪಷ್ಟವಾಗಿ ತಿಳಿಸದ ಕಾರಣ ಸ್ವತಃ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಗೊಂದಲಕ್ಕೆ ಸಿಲುಕಿದ್ದಾರೆ. ಒಂದು ಕಡೆ ಡಿಸಿಎಂ ಡಿ.ಕೆ ಶಿವಕುಮಾರ್ ರಿಂದ ಅಧಿಕಾರ ಹಂಚಿಕೆ ಸೂತ್ರ ಆಗಿದೆ ಎಂಬ ವಾದ ಇದೆ. ಮತ್ತೊಂದೆಡೆ ಎರಡೂವರೆ ವರ್ಷದ ಯಾವುದೇ ಒಪ್ಪಂದ ಆಗಿಲ್ಲವೆಂದು ಸಿಎಂ ಬಣ ಗಟ್ಟಿಯಾಗಿ ಹೇಳುತ್ತಿದೆ. ಈ ಮೂಲಕ ನಾಯಕತ್ವ ಸಂಬಂಧ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ ಶಿವಕುಮಾರ್ ಬಣಗಳ ನಡುವೆ ನಿರಂತರ ಗೊಂದಲದ ನುಡಿಗಳು ರಾಜಕೀಯ ಪಡಸಾಲೆಯಲ್ಲಿ ಕೇಳಿಬರುತ್ತಿವೆ.

ನಾಯಕತ್ವ ಬದಲಾವಣೆ ಗೊಂದಲದ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ದೆಹಲಿ ಯಾತ್ರೆ ಕೈಗೊಳ್ಳಲಿದ್ದಾರೆ. ಈಗಾಗಲೇ ಡಿಕೆಶಿ ಅವರು ಹಲವು ಬಾರಿ ದೆಹಲಿಗೆ ಮ್ಯಾರಥಾನ್ ಭೇಟಿ ನೀಡಿದ್ದಾರೆ. ಆದರೆ ವರಿಷ್ಠರ ಜೊತೆಗೆ ಭೇಟಿ ಸಾಧ್ಯವಾಗಿಲ್ಲ. ಇದು ಡಿಕೆಶಿ ಬಣದ ಅನುಮಾನಕ್ಕೆ ಕಾರಣವಾಗಿದೆ.

ಇಷ್ಟೆಲ್ಲಾ ನಡೆಯುತ್ತಿದ್ದರೂ ಯಾವುದಕ್ಕೂ ಹೈಕಮಾಂಡ್ ನಾಯಕರು ಗಮನ ನೀಡುತ್ತಿಲ್ಲ. ಡಿಸಿಎಂ ಡಿ.ಕೆ ಶಿವಕುಮಾರ್ ಭೇಟಿಗೂ ರಾಹುಲ್ ಗಾಂಧಿ ಅವಕಾಶ ನೀಡಿಲ್ಲ. ನವೆಂಬರ್ 15ರಂದು ಸಿಎಂ ದೆಹಲಿಗೆ ತೆರಳಲು ಸಜ್ಜಾಗಿದ್ದರೂ ಒಂದು ದಿನ ಮೊದಲೇ ವಿದೇಶ ಪ್ರವಾಸವನ್ನು ರಾಹುಲ್ ಗಾಂಧಿ ಕೈಗೊಳ್ಳುತ್ತಿದ್ದಾರೆ. ರಾಹುಲ್ ಗಾಂಧಿ ಈ ಪ್ರವಾಸ ನಾಯಕತ್ವ ಬದಲಾವಣೆ ಬೆಳವಣಿಗೆಯ ನಿರೀಕ್ಷೆಯಲ್ಲಿದ್ದವರಿಗೆ ನಿರಾಸೆ ಮೂಡಿಸಿದೆ. ಈ ಮೂಲಕ ಸಿಎಂ, ಡಿಸಿಎಂ ಯಾರ ಕೈಗೂ ಸಿಗದೆ ಹೈಕಮಾಂಡ್ ಅಂತರ ಕಾಯ್ದುಕೊಳ್ಳುತ್ತಿದೆ ಎಂಬ ಚರ್ಚೆಗಳು ರಾಜಕೀಯ ಪಡಸಾಲೆಯಲ್ಲಿ ನಡೆಯುತ್ತಿದೆ.


ರಾಜ್ಯದಲ್ಲಿ ರಾಜಕೀಯ ಗೊಂದಲ ಸೃಷ್ಟಿಯಾದಾಗ ಸಹಜವಾಗಿ ಹೈಕಮಾಂಡ್ ಮಧ್ಯ ಪ್ರವೇಶ ಮಾಡುತ್ತದೆ. ಆದರೆ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಚರ್ಚೆ ತೀವ್ರಗೊಂಡಿದೆ. ಯಾವ ಸಂದರ್ಭದಲ್ಲಿ ಭಿನ್ನಾಭಿಪ್ರಾಯ ಸ್ಫೋಟಗೊಳ್ಳಲಿದೆ ಎಂದು ಹೇಳಲು ಸಾಧ್ಯವಿಲ್ಲ. ಹೀಗಿದ್ದರೂ ಸಮಸ್ಯೆ ಇತ್ಯರ್ಥಕ್ಕೆ ದೆಹಲಿ ನಾಯಕರು ಮುಂದಾಗುತ್ತಿಲ್ಲ. ಮೌನಕ್ಕೆ ಶರಣಾಗಿರುವ ಹೈಕಮಾಂಡ್ ನಡೆಯ ಹಿಂದಿನ ಪ್ಲ್ಯಾನ್ ಏನು ಎಂಬುದು ಸ್ಪಷ್ಟಗೊಂಡಿಲ್ಲ.

ನವೆಂಬರ್ 14 ಕ್ಕೆ ಬಿಹಾರ ಚುನಾವಣೆ ಫಲಿತಾಂಶ ಹೊರಬೀಳಲಿದೆ. ಬಳಿಕ ರಾಜ್ಯದಲ್ಲಿ ಸಿಎಂ ಸ್ಥಾನ ಬದಲಾವಣೆ ಪಟ್ಟು ತೀವ್ರಗೊಳಿಸಲು ಡಿಕೆಶಿ ಬಣ ಸಿದ್ದತೆ ಮಾಡಿಕೊಳ್ಳುತ್ತಿದೆ. ಆದರೆ ರಾಹುಲ್ ಗಾಂಧಿ ಅನುಪಸ್ಥಿತಿಯಲ್ಲಿ ಹೈಕಮಾಂಡ್ ನಾಯಕರು ಇಂತಹ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇಲ್ಲ. ಈ ಹಿನ್ನೆಲೆಯಲ್ಲಿ ರಾಹುಲ್ ವಿದೇಶದಿಂದ ವಾಪಸ್ ಬಂದ ಬಳಿಕವೇ ಬೆಳವಣಿಗೆ ಶುರುವಾಗುವ ಸಾಧ್ಯತೆ ಇದೆ.

ಜೆಡಿಎಸ್ ರಾಜ್ಯಾಧ್ಯಕ್ಷರಾದ ಎಚ್.ಡಿ. ಕುಮಾರಸ್ವಾಮಿ ಅವರು ಕರ್ನಾಟಕದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಊಹಾಪೋಹಗಳನ್ನು ತಳ್ಳಿಹಾಕಿದ್ದು, ಸಿದ್ದರಾಮಯ್ಯನವರೇ ಮುಖ್ಯಮಂತ್ರಿಯಾಗಿ ಮುಂದುವರಿಯಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ನಾಯಕತ್ವ ಬದಲಾವಣೆಯ ಕುರಿತಾದ ಮಾತುಗಳಿಗೆ ಅವರು ಯಾವುದೇ ಮಹತ್ವ ನೀಡಿಲ್ಲ. ಇದೇ ಸಂದರ್ಭದಲ್ಲಿ, ಕಬ್ಬು ಬೆಳೆಗಾರರ ಪ್ರತಿಭಟನೆಯನ್ನು ನಿರ್ವಹಿಸುವಲ್ಲಿ ರಾಜ್ಯ ಸರ್ಕಾರವು ವಿಫಲವಾಗಿದೆ ಎಂದು ಕುಮಾರಸ್ವಾಮಿ ಟೀಕಿಸಿದ್ದಾರೆ. ಅಂತಿಮವಾಗಿ, ಜೆಡಿಎಸ್ ಪಕ್ಷವು ತನ್ನ ಸಂಘಟನೆಯನ್ನು ಬಲಪಡಿಸುವತ್ತ ಗಮನ ಕೇಂದ್ರೀಕರಿಸಿದೆ ಎಂದು ಅವರು ಹೇಳಿದ್ದಾರೆ.

## ಸಿದ್ದರಾಮಯ್ಯ ಎಸ್‌ಎಪಿ ಜಾರಿ ಮಾಡುವ ಬದಲು ಖಾಜಿ ನ್ಯಾಯ ಮಾಡುತ್ತಿದ್ದಾರೆ: ಬೊಮ್ಮಾಯಿ

**ಹಾವೇರಿ:** ಕಬ್ಬಿಗೆ ನಿಗದಿ ಪಡಿಸಿದ ದರವನ್ನು ರೈತರಿಗೆ ಕೊಡಿಸಲು ಸರಕಾರದ ಆಜ್ಞೆ ಪಾಲನೆ ಆಗುವಂತೆ ನೋಡಿಕೊಳ್ಳುವುದು ಸರಕಾರದ ಕರ್ತವ್ಯ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.



ಹಾವೇರಿಯಲ್ಲಿ ಮಾಧ್ಯಮ ಗಳೊಂದಿಗೆ ಮಾತನಾಡಿದ ಅವರು, ಕಬ್ಬು ಬೆಳೆಗಾರರಿಗೆ ಸರ್ಕಾರ ನಿಗದಿ ಮಾಡಿರುವ ದರವನ್ನು ಕಾರ್ಖಾನೆ ಮಾಲೀಕರು ಕೊಡುವಂತೆ, ಸರಕಾರದ ಆಜ್ಞೆ ಪಾಲನೆ ಆಗುವಂತೆ ನೋಡಿಕೊಳ್ಳುವುದು ಸರಕಾರದ ಕರ್ತವ್ಯ. ಕಾರ್ಖಾನೆ ಮಾಲೀಕರು ಮುಖ್ಯಮಂತ್ರಿ ಸಭೆಯಲ್ಲಿ ಭಾಗವಹಿಸಿದ್ದರೂ, ಕಾರ್ಖಾನೆ ಮಾಲೀಕರು ಅವರ ಎದರುಗಡೆ ಆಗಲ್ಲ ಅಂತ ಹೇಳಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸ್ಪಷ್ಟನೆ ನೀಡಲಿ. ಕಾರ್ಖಾನೆ ಮಾಲೀಕರಿಗೆ ಕೇವಲ ಹೇಳಿದ್ದಾರೊ ಅಥವಾ ಒಪ್ಪಿಸಿದ್ದಾರೋ ಎಂದು ಸ್ಪಷ್ಟಪರಿಸಲಿ ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ಎಸ್‌ಎಪಿ ಕಾನೂನು ಇದೆ. ನಮ್ಮ ಸರಕಾರ ಇದ್ದಾಗ ಮಾಡಿದ್ದೇವೆ. ಎಸ್. ಎ. ಪಿ ಕಾನೂನಿನಲ್ಲಿ ಬಹಳ ಸ್ಪಷ್ಟವಾಗಿದೆ. ಸಕ್ಕರೆ ಮತ್ತು ಇತರೆ ಉತ್ಪಾದನೆಯ ಖರ್ಚುಗಳು ಎಷ್ಟು. ಲಾಭದಲ್ಲಿ ರೈತನಿಗೆ ಎಷ್ಟು ,ಕಾರ್ಖಾನೆ ಎಷ್ಟು ಅನ್ನುವುದು ಇದೆ. ಎಸ್‌ಎಪಿ ಕಾನೂನು ತೆಗೆದು ನೋಡಲು ಮುಖ್ಯಮಂತ್ರಿ ತಯಾರಿಲ್ಲ. ಒಂದು ರೀತಿ ಮುಖ್ಯಮಂತ್ರಿ ಖಾಜಿ ನ್ಯಾಯ ಮಾಡಲು ಹೋಗುತ್ತಿದ್ದಾರೆ. ಖಾಜಿ ನ್ಯಾಯ ಮಾಡಲು ಮುಖ್ಯಮಂತ್ರಿನೇ ಬೇಕಾ ಎಂದು ಪ್ರಶ್ನಿಸಿದರು.

ಬೆಳಗಾವಿ ಜಿಲ್ಲಾಧಿಕಾರಿ ಪ್ರತಿ ಟನ್ ಕಬ್ಬಿಗೆ 2900 ರೂ ಇದ್ದದನ್ನು 3200 ರೂ ಮಾಡಿದ್ದರು. ವಿಧಾನಸೌಧದಲ್ಲಿ ಕುಳಿತು ಮುಖ್ಯಮಂತ್ರಿ 50 ರೂ ಹೆಚ್ಚಳ ಮಾಡಿದರು. ಜಿಲ್ಲಾಧಿಕಾರಿಗೆ ಇರುವ ಬದ್ದತೆ

# ಬಿಹಾರ ಕದನ: ಕೆಲವೆಡೆ ಘರ್ಷಣೆ, ಚುರುಕಿನ ಮತದಾನ

**ಪಾಟ್ನಾ:** ಬಿಹಾರ ವಿಧಾನಸಭೆಯ 2ನೇ ಹಾಗೂ ಕೊನೆಯ ಹಂತದ ಮತದಾನ ಇಂದು ನಡೆದಿದ್ದು, ಕೆಲ ಮತಗಟ್ಟೆಗಳಲ್ಲಿ ವಿವಿಧ ಪಕ್ಷಗಳ ಕಾರ್ಯಕರ್ತರ ನಡುವಿನ ಘರ್ಷಣೆಯಂತಹ ಘಟನೆಗಳನ್ನು ಹೊರತುಪಡಿಸಿದರೆ ಉಳಿದಂತೆ ಮತದಾನ ಬಹುತೇಕ ಶಾಂತಿಯುತವಾಗಿ ನಡೆದಿದೆ.

2ನೇ ಹಂತದ ಮತದಾನವು ಚುರುಕಿನಿಂದ ಸಾಗಿದ್ದು, ಮಧ್ಯಾಹ್ನ 3 ಗಂಟೆಯ ಹೊತ್ತಿಗೆ ಸರಾಸರಿ ಶೇ. 30 ರಿಂದ 40 ರಷ್ಟು ಮತದಾನವಾಗಿತ್ತು.

ಇಂದು ನಡೆದಿರುವ 2ನೇ ಹಾಗೂ ಕೊನೆಯ ಹಂತದ ಮತದಾನದಲ್ಲಿ ಬಿಹಾರ ಮುಖ್ಯಮಂತ್ರಿ ನಿತೀಶ್‌ಕುಮಾರ್ ಸೇರಿದಂತೆ ಅವರ ಸಚಿವ ಸಂಪುಟದ ಅರ್ಧಕ್ಕಿಂತಲೂ ಸಚಿವರು ಸೇರಿದಂತೆ 1,302 ಅಭ್ಯರ್ಥಿಗಳು ರಾಜಕೀಯ ಭವಿಷ್ಯವನ್ನು ಮತದಾರರು ವಿದ್ಯುನ್ಮಾನ ಮತಯಂತ್ರದಲ್ಲಿ ಗುಂಡಿ ಹೊತ್ತುವ ಮೂಲಕ ನಿರ್ಧರಿಸಿದ್ದಾರೆ.



ಅಂತಿಮ ಹಾಗೂ ಕೊನೆಯ ಹಂತದ ಮತದಾನದಲ್ಲಿ 122 ಕ್ಷೇತ್ರಗಳಲ್ಲಿ ಮತದಾನ ನಡೆದಿದ್ದು, 1.75 ಕೋಟಿ ಮಹಿಳೆಯರು ಸೇರಿದಂತೆ 3.70 ಕೋಟಿ ಮತದಾರರು ಮತ ಚಲಾಯಿಸಲಿದ್ದಾರೆ.

**ಮತಗಟ್ಟೆಯಲ್ಲಿ ಘರ್ಷಣೆ**

ಬಿಹಾರದಲ್ಲಿ ಮೊದಲನೇ ಹಂತದ ಮತದಾನ ಕಳೆದ ನ. 6 ರಂದು ಶಾಂತಿಯುತವಾಗಿ ನಡೆದಿತ್ತು. 2ನೇ ಹಂತದ ಮತದಾನದಲ್ಲಿ ಮತಗಟ್ಟೆ ಬಳಿ ಘರ್ಷಣೆಗಳು ನಡೆದ ವರದಿಯಾಗಿದ್ದು, ನವಾಡ ಜಿಲ್ಲೆಯ ವಾರಿಸಲಿಂಗಜ್‌ನ ಮತಗಟ್ಟೆ ಬಳಿ ವಿವಿಧ ಪಕ್ಷಗಳ ಕಾರ್ಯಕರ್ತರ ನಡುವೆ ಘರ್ಷಣೆ ಉಂಟಾಗಿದ್ದು, ಭದ್ರತಾ ಪಡೆಗಳು ತಕ್ಷಣವೇ ಸ್ಥಳಕ್ಕೆ ತೆರಳಿ ಪರಿಸ್ಥಿತಿಯನ್ನು ನಿಯಂತ್ರಿಸಿದ್ದಾರೆ.

ಮತದಾನವನ್ನು ಸರಾಗವಾಗಿ ನಡೆಯುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಭಿನವ್ ಧೀಮಂತ್ ತಿಳಿಸಿದ್ದಾರೆ.

ಈ ಘಟನೆ ವೇಳೆ ಚುನಾವಣೆಗೆ ನಿಯೋಜಿಸಲಾಗಿದ್ದ ಸರ್ಕಾರ ವಾಹನಕ್ಕೆ ಹಾನಿಯಾಗಿದೆ ಎಂಬುದು ಸುಳ್ಳು ಸುದ್ದಿಯಾಗಿದ್ದು, ಖಾಸಗಿ ವಾಹನವೊಂದಕ್ಕೆ ಹಾನಿಯಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಉಳಿದಂತೆ ಎಲ್ಲ ಕ್ಷೇತ್ರಗಳಲ್ಲೂ ಮತದಾನ ಚುರುಕಿನಿಂದ ನಡೆದಿದ್ದು, ಎಲ್ಲೂ ಅಹಿತಕರ ಘಟನೆಗಳು ನಡೆದ ಬಗ್ಗೆ ವರದಿಯಾಗಿಲ್ಲ.

ಇಂದಿನ ಚುನಾವಣೆಯಲ್ಲಿ ಹಲವು ಘಟಾನುಘಟಿಗಳ ಚುನಾವಣಾ ಹಣೆಬರಹ ನಿರ್ಧಾರವಾಗಲಿದ್ದು, ಇಂದು ನಡೆದಿರುವ ಚುನಾವಣೆಯಲ್ಲಿ ಜೆಡಿಯುನ ಹಿರಿಯ ಮುಖಂಡ ಬಿಜಯೇಂದ್ರ ಪ್ರಸಾದ್ ಯಾದವ್ ಸುಪಾಲ ಕ್ಷೇತ್ರದಿಂದ ಸ್ಪರ್ಧಿಸಿದ್ದು, ಸತತ 8 ಬಾರಿ ಗಯಾ ನಗರ ಕ್ಷೇತ್ರದಿಂದ ಆಯ್ಕೆಯಾಗಿ, ಮತ್ತೆ ಬಿಜೆಪಿಯಿಂದ ಕಣಕ್ಕಿಳಿದಿರುವ ಪ್ರೇಮ್‌ಕುಮಾರ್, ಬೇತಿಯಾದಿಂದ ಬಿಜೆಪಿಯ ರೇಣುದೇವಿ, ಚತ್‌ಪುರದಿಂದ ನೀರಜ್‌ಕುಮಾರ್ ಸಿಂಗ್, ಜೆಡಿಯುನ ದೇಸಿಸಿಂಗ್, ಶೀಲಮಂಡಳ್, ಬಿಜೆಪಿಯ ಮಾಜಿ ಉಪಮುಖ್ಯಮಂತ್ರಿ ತಾರಾಕಿಶೋರ್ ಪ್ರಸಾದ್ ಕಟಿಯಾರದಿಂದ ಸ್ಪರ್ಧಿಸಿದ್ದು, ಇವರೆಲ್ಲರ ರಾಜಕೀಯ ಹಣೆಬರಹ ಇಂದು ನಿರ್ಧಾರವಾಗಲಿದೆ.

ಎನ್‌ಡಿಎ ಮಿತ್ರ ಪಕ್ಷವಾದ ಹಿಂದೂಸ್ತಾನ್ ಅವಾಮ್ ಮೋರ್ಚಾ ಹಾಗೂ ರಾಷ್ಟ್ರೀಯ ಲೋಕಮೋರ್ಚಾ ಪಕ್ಷಗಳು ಕಣಕ್ಕಿಳಿದಿರುವ ತಲಾ 6 ಕ್ಷೇತ್ರಗಳಿಗೂ ಇಂದೇ ಮತದಾನ ನಡೆದಿದೆ.

# ಅಕ್ರಮ ದತ್ತು ಪ್ರಕ್ರಿಯೆಯಲ್ಲಿ ಭಾಗವಹಿಸುವುದು ಅಪರಾಧ

## ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಜಾಗೃತಿ ಕಾರ್ಯಕ್ರಮದಲ್ಲಿ ನ್ಯಾ.ರಾಜೇಶ್ ಎನ್.ಹೊಸಮನೆ ಹೇಳಿಕೆ

**ಬಳ್ಳಾರಿ :** ಅಕ್ರಮ ದತ್ತು ಕಾರ್ಯದಲ್ಲಿ ಭಾಗವಹಿಸುವುದು ಅಪರಾಧವಾಗಿದ್ದು, ಭಾಗವಹಿಸಿರುವುದು ದೃಢವಾದಲ್ಲಿ ಕನಿಷ್ಠ 5 ವರ್ಷಗಳ ಜೈಲು ಶಿಕ್ಷೆ ಹಾಗೂ 1 ಲಕ್ಷ ದಂಡ ವಿಧಿಸಲು ಕಾನೂನಿನಡಿ ಅವಕಾಶವಿದೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಎಂದು ತಿಳಿಸಿದರು.

ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಅಭಿಯಾನದಡಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ವಿಶೇಷ ದತ್ತು ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ 'ವಿಶೇಷ ಚೇತನ ಮಕ್ಕಳ ದತ್ತು ಪ್ರಕ್ರಿಯೆ' ಎಂಬ ಘೋಷವಾಕ್ಯದಡಿ ನಗರದ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಅಜಾದ್ ವಸತಿ ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾನವನ ಜೀವ ಅತೀ ಅಮೂಲ್ಯವಾಗಿದ್ದು,



ಯಾವುದೇ ಕಾರಣದಿಂದಾಗಿ ಪೋಷಕರು ನವಜಾತ ಶಿಶುಗಳನ್ನು ಬಿಟ್ಟುಹೋಗಿರುವುದು ಕಂಡುಬಂದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಇಲಾಖೆಯ ಗಮನಕ್ಕೆ ತರಬೇಕು. ಅಂತಹ ಮಕ್ಕಳನ್ನು ರಕ್ಷಣೆ ಮಾಡಿ ಆರೈಕೆ ಮಾಡಿ, ಒಳ್ಳೆಯ ಕುಟುಂಬ ಮತ್ತು ಪೋಷಕರಿಗೆ ಮಕ್ಕಳನ್ನು ದತ್ತು ನೀಡುವ ಮೂಲಕ ಅಂತಹ ಮಕ್ಕಳಿಗೆ ಒಳ್ಳೆಯ ಜೀವನ ನೀಡಲು ಸಾಧ್ಯ. ಇದ–ಕ್ಕೆ ಎಲ್ಲರೂ ಸಹಕರಿಸಬೇಕು ಎಂದು ಕೋರಿದರು.

ಕಾನೂನಿನ ನೆರವು ಅಗತ್ಯವುಳ್ಳ ಬಡ ಮತ್ತು ನಿರ್ಗತಿಕ ಕುಟುಂಬಗಳು ಉಚಿತವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಕಾನೂನು ಸೇವೆ ಪಡೆದುಕೊಳ್ಳಬಹುದು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರದೇವಿ ಅವರು ಮಾತನಾಡಿ, ಮಕ್ಕಳ ರಕ್ಷಣೆ ಮತ್ತು ಪೋಷಣೆ ನಮ್ಮೆಲ್ಲರ ಹೊಣೆಯಾಗಿದೆ. ಮಕ್ಕಳನ್ನು ಬಾಲ್ಯವಿವಾಹ, ಬಾಲಕಾರ್ಮಿಕ, ಭಿಕ್ಷಾಟನೆ, ಲೈಂಗಿಕ ಕಿರುಕುಳ ಮತ್ತು ಇನ್ನಿತರೆ ಸಂಕಷ್ಟಕ್ಕೆ ಒಳಗಾದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಒಂದುವೇಳೆ ಅಂತಹ ಸಮಸ್ಯೆಗಳು ಎದುರಿಸುತ್ತಿದ್ದರೆ, ಇಲ್ಲವೇ ಕಂಡುಬಂದಲ್ಲಿ ನಿರ್ಭಯವಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ 1098, 112 ಗೆ ಕರೆ ಮಾಡಬೇಕು. ಮಾಹಿತಿ ನೀಡಿದವರನ್ನು ಗೌಪ್ಯವಾಗಿಡಲಾಗುವುದು ಎಂದು ತಿಳಿಸಿದರು.

ಎಲ್ಲಾ ಶಾಲೆಗಳಲ್ಲಿ ಮಕ್ಕಳಿಗೆ ಮಕ್ಕಳ ಸುರಕ್ಷತೆ ಕುರಿತು ಅರಿವು ಮೂಡಿಸುವುದು ಅಗತ್ಯ. ಪ್ರತಿ ಶಾಲೆಯಲ್ಲಿ ದೂರು ಪೆಟ್ಟಿಗೆಯನ್ನು ನಿರ್ವಹಿಸಿ ದೂರುಗಳನ್ನು ಪ್ರತಿ ತಿಂಗಳು ವಿಲೇವಾರಿ ಮಾಡಬೇಕು ಎಂದು ತಿಳಿಸಿದರು.

ಮಕ್ಕಳ ವಿಶೇಷ ಪೊಲೀಸ್ ಘಟಕದ ಸಿಬ್ಬಂದಿ ಲಲಿತಮ್ಮ ಅವರು ಮಾತನಾಡಿ, ಹೆಣ್ಣು ಮಕ್ಕಳು ಅಂತರ್ಜಾಲದಲ್ಲಿ ತಮ್ಮ ವೈಯಕ್ತಿಕ ಮಾಹಿತಿ ಮತ್ತು ಫೋಟೋಗಳನ್ನು ಹಂಚಿಕೊಳ್ಳಬಾರದು. ಸೈಬರ್ ಕ್ರೈಮ್ ಕುರಿತು ಅರಿವು ಪ್ರತಿಯೊಬ್ಬರೂ ಹೊಂದಬೇಕು ಎಂದು ಹೇಳಿದರು.

ನಂತರ ಮಕ್ಕಳ ವಿಶೇಷ ಪೊಲೀಸ್ ಘಟಕದ ಸೇವೆಗಳು, ಕಾರ್ಯವೈಖರಿ, ಪ್ರತಿ ಪೊಲೀಸ್ ಠಾಣೆಯಿಂದ ತೆರೆದ ಮನೆ ಕಾರ್ಯಕ್ರಮಗಳ ಕುರಿತು ತಿಳಿಸಿದರು.

ವಸತಿ ಶಾಲೆಯ ಪ್ರಾಂಶುಪಾಲ ಕೆ.ಎಂ.ಮೂಕಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳು ಮಕ್ಕಳ ಸಹಾಯವಾಣಿ ಸಂಖ್ಯೆ–1098, ಪೊಲೀಸ್ ಸೇವೆ–112, ಸೈಬರ್ ಕ್ರೈಮ್ –1930 ಮತ್ತು ಉಚಿತ ರಾಷ್ಟ್ರೀಯ ಕಾನೂನು ಸೇವೆಗಳ ಸಂಖ್ಯೆ –15100 ಗಳನ್ನು ನೆನಪಿಟ್ಟುಕೊಂಡು ಅಗತ್ಯ ಸಂದರ್ಭಗಳಲ್ಲಿ ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಮಕ್ಕಳ ರಕ್ಷಣಾಧಿಕಾರಿ (ಆಸಾಂಸ್ಥಿಕ ಸೇವೆ) ಚನ್ನಬಸಪ್ಪ ಪಾಟೀಲ್ ಅವರು ದತ್ತು ಕುರಿತ ಪ್ರತಿಜ್ಞಾವಿಧಿ ಭೋದಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**